24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ


www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 7 | ನವದೆಹಲಿ | ಬೆಲೆ ₹10 | ಜುಲೈ 3 2026, ಶುಕ್ರವಾರ

# ಆಡಳಿತ–ಅಭಿವೃದ್ಧಿಗೆ ಚುರುಕು ನೀಡಿ ಭರವಸೆ ಮೂಡಿಸಿದ ಸಿಎಂ ಡಿ.ಕೆ.ಶಿವಕುಮಾರ್



**ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡು ಇಂದಿಗೆ ಒಂದು ತಿಂಗಳಾಗಿದೆ. ಸಾಮಾನ್ಯವಾಗಿ ಯಾವುದೇ ವ್ಯಕ್ತಿಯ ಮತ್ತು ಸರ್ಕಾರದ ಸಾಧನೆ ಅಳೆಯಲಾಗುವುದಿಲ್ಲ. ಆದರೆ, ಡಿ.ಕೆ. ಶಿವಕುಮಾರ್ ಅವರು ಮಾತ್ರ ಒಂದು ತಿಂಗಳಲ್ಲೇ ಆಡಳಿತ ಮತ್ತು ಅಭಿವೃದ್ಧಿಗೆ ಚುರುಕು ನೀಡುವ ಮೂಲಕ ರಾಜ್ಯದ ಜನರಲ್ಲಿ ಭರವಸೆ ಮೂಡಿಸಿದ್ದಾರೆ.**



- ರಾಜ್ಯದ ಎಲ್ಲಾ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್.
- ರಾಜ್ಯದ ಎಲ್ಲಾ ಪಂಚಾಯಿತಿ, ವಾರ್ಡ್‌ಗಳಲ್ಲಿ ಭಾರತ ಜೋಡೋ ಯುವಕರ ಸಂಘ ಸ್ಥಾಪನೆ. ತಲಾ 10 ಲಕ್ಷ ರೂ. ನೀಡುವ ನಿರ್ಣಯ.
- 2500 ಅಡಿವರೆಗಿನ ನೂತನ ವಸತಿ ಕಟ್ಟಡಗಳ ಶಾಶ್ವತ ವಿದ್ಯುತ್ ಸಂಪರ್ಕಕ್ಕೆ ಒಸಿ ವಿನಾಯಿತಿ.
- ರಾಜ್ಯದೆಲ್ಲೆಡೆ 'ಬಿ' ಯಿಂದ 'ಎ' ಖಾತಾ ಪರಿವರ್ತನೆ.
- ಬೆಂಗಳೂರಿನ ರಸ್ತೆಗಳನ್ನು ಗುಂಡಿ ಮುಕ್ತಗೊಳಿಸಲು 2 ಸಾವಿರ ಕೋಟಿ ರೂ. ಯೋಜನೆ.
- ಖಾಸಗಿ ವಲಯದ ಉದ್ಯೋಗ ವಿನಿಮಯ ಕೇಂದ್ರ ಸ್ಥಾಪಿಸಲು ತೀರ್ಮಾನ.
- 72 ಸಾವಿರ ಸರ್ಕಾರಿ ಹುದ್ದೆಗಳ ನೇಮಕಾತಿಗೆ 6 ತಿಂಗಳ ಗಡವು.
- ಸಾರ್ವಜನಿಕರ ಕುಂದುಕೊರತೆ, ಅಹವಾಲು ಆಲಿಸಲು 'ಪ್ರಜಾಸೇವೆ' ಎಂಬ ಪ್ರತ್ಯೇಕ ಸಚಿವಾಲಯ.
- ಶಾಸಕರು, ಮಂತ್ರಿಗಳ ಒತ್ತಡಕ್ಕೆ ಮಣಿಯದೇ ಕಾನೂನು ಚೌಕಟ್ಟಿನಲ್ಲಿ ಕಾರ್ಯನಿರ್ವಹಿಸಲು ಅಧಿಕಾರಿಗಳಿಗೆ ಸೂಚನೆ.
- ಗ್ಯಾರಂಟಿ ಯೋಜನೆಗಳು ಕರ್ನಾಟಕ ರಾಜ್ಯದವರಿಗೆ ಮಾತ್ರ ಸಿಗಬೇಕು ಹಾಗೂ ಸೋರಿಕೆ ತಪ್ಪಿಸಲು ಕ್ರಮ.
- ವಿಧಾನ ಪರಿಷತ್ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದಿಂದ 5ನೇ ಅಭ್ಯರ್ಥಿ ವಿನಯ್ ಕಾರ್ತಿಕ್ ಕಣಕ್ಕಿಳಿಸಿ ಗೆಲುವು.
- ರೌಡಿಗಳ ನಿಗ್ರಹಕ್ಕೆ ಜಿಲ್ಲೆಗೊಂದು ಪಡೆ ರಚನೆಗೆ ಸೂಚನೆ.
- ಕೇಂದ್ರದ ನೀತಿ ಆಯೋಗ ಸಭೆಯಲ್ಲಿ ಭಾಗಿ ಕರ್ನಾಟಕದ ಬೇಡಿಕೆಗಳ ಪ್ರಸ್ತಾಪ.
- ಪ್ರಧಾನಮಂತ್ರಿ ನರೇಂದ್ರ ಮೋದಿ, ಕೇಂದ್ರ ಸಚಿವರುಗಳಾದ ಅಮಿತ್ ಶಾ, ಸಿ.ಆರ್ ಪಾಟೀಲ್, ನಿರ್ಮಲಾ ಸೀತಾರಾಮನ್, ಮನೋಹರ್ ಲಾಲ್ ಖಟ್ಟರ್ ಅವರನ್ನು ಭೇಟಿ ಮಾಡಿ ರಾಜ್ಯದ ನೀರಾವರಿ ಯೋಜನೆಗಳು, ಬೆಂಗಳೂರಿನ ಮೆಟ್ರೋ, RRTS ರೈಲು ಹಾಗೂ ಪೋಲೀಸ್ ಇಲಾಖೆಗಳ ಯೋಜನೆಗಳು ಹಾಗೂ ವಿಶೇಷ ಅನುದಾನಗಳ ಬಗ್ಗೆ ಚರ್ಚೆ.
- ದೆಹಲಿಯಲ್ಲಿರುವ ರಾಜ್ಯದ ಐಎಎಸ್, ಐಪಿಎಸ್ ಅಧಿಕಾರಿಗಳ ಸಭೆ ಮಾಡಿ ಕರ್ನಾಟಕದ ಸರ್ವತೋಮುಖ ಅಭಿವೃದ್ಧಿಗೆ ಕೈ ಜೋಡಿಸಲು ಕರೆ.
- ಕಾಲೇಜು ಚುನಾವಣೆಗಳನ್ನು ಪ್ರಸಕ್ತ ವರ್ಷದಿಂದಲೇ ಪ್ರಾರಂಭಿಸಲು ಚಿಂತನೆ.
- ಎಲ್ಲಾ ತಾಲ್ಲೂಕುಗಳಲ್ಲಿ ರಿಂಗ್ ರಸ್ತೆ ಗ್ರಿಡ್ ಗುರುತಿಸಲು ನಿರ್ದೇಶನ.
- ಭ್ರಷ್ಟಾಚಾರ ವಿರುದ್ಧ ದೂರು ನೀಡಲು ದೂರವಾಣಿ ಸಂಖ್ಯೆ.
- ರಾಜ್ಯದ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಬೆಳಗ್ಗೆ 10 ಗಂಟೆಗೆ ಜಿಪಿಎಸ್ ತಂತ್ರಾಂಶದ ಸಿಬ್ಬಂದಿ ಹಾಜರಾತಿಗೆ ಸೂಚನೆ.
- ಮೀಟರ್ ಬಡ್ಡಿ ದಂಧೆಗೆ ಕಡಿವಾಣ ಹಾಕಲು ಅಧಿಕಾರಿಗಳಿಗೆ ನಿರ್ದೇಶನ.
- ನೂತನ ಸಿಎಸ್‌ಆರ್ ನೀತಿ ತರಲು ಅಧಿಕಾರಿಗಳಿಗೆ ಸೂಚನೆ.
- ಬರ ಪರಿಸ್ಥಿತಿ ನಿರ್ವಹಣೆಗೆ ಅಗತ್ಯ ಸಿದ್ಧತೆಗೆ ಅಧಿಕಾರಿಗಳ ಜೊತೆ ಸಭೆ.
- ಮಾವು ಬೆಳೆಗಾರರಿಗೆ ಕಳೆದ ವರ್ಷದಂತೆ ಪ್ರೋತ್ಸಾಹ ಧನ ಮುಂದುವರಿಸಲು ತೀರ್ಮಾನ.
- ರೈತರಿಗೆ ಸಕಾಲದಲ್ಲಿ ಬಿತ್ತನೆ ಬೀಜ, ಗೊಬ್ಬರ ಪೂರೈಕೆಗೆ ನಿರ್ದೇಶನ.
- ಕರಾವಳಿಯಲ್ಲಿ ಪ್ರವಾಸೋದ್ಯಮ ಉತ್ತೇಜನಕ್ಕೆ ವಿವಿಧ ಕ್ರಮ.
- ವಿದ್ಯಾರ್ಥಿಗಳಿಗಾಗಿ ದೆಹಲಿಯಲ್ಲಿ 4ನೇ ಕರ್ನಾಟಕ ಭವನ ನಿರ್ಮಾಣಕ್ಕೆ ತೀರ್ಮಾನ.
- ಕರ್ನಾಟಕ ರಾಜ್ಯದ ಹಿತ ಕಾಯಲು ದೆಹಲಿಯಲ್ಲಿ ನಿವೃತ್ತ ಐಎಎಸ್, ಐಪಿಎಸ್ ಅಧಿಕಾರಿಗಳ ತಂಡ ರಚನೆಗೆ ನಿರ್ಧಾರ.
- ಸುಪ್ರೀಂ ಕೋರ್ಟ್‌ನಲ್ಲಿ ರಾಜ್ಯಕ್ಕೆ ಸಂಬಂಧಿಸಿದ ವಿವಿಧ ಪ್ರಕರಣಗಳ ನಿರ್ವಹಣೆ ಮತ್ತು ತ್ವರಿತ ಇತ್ಯರ್ಥಕ್ಕೆ ವಕೀಲರ ತಂಡ ಸದೃಢಗೊಳಿಸಲು ತೀರ್ಮಾನ.
- ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ಜಾರಿಗೆ ಪಂಚಾಯಿತಿ ಹಾಗೂ ವಾರ್ಡ್ ಮಟ್ಟದಲ್ಲಿ ಗ್ಯಾರಂಟಿ ಸಮಿತಿ ರಚನೆಗೆ ನಿರ್ಧಾರ.
- ಪುಸ್ತಕ ಪ್ರೇಮಿ ಅಂಕೇಗೌಡರ ಪುಸ್ತಕಗಳ ಸಂರಕ್ಷಣೆಗೆ 5 ಕೋಟಿ ರೂ ಹಾಗೂ 2 ಎಕರೆ ಜಾಗ ನೀಡಲು ತೀರ್ಮಾನ.
- ತುಂಗಭದ್ರಾ ಅಣೆಕಟ್ಟು ನೂತನವಾಗಿ ಅಳವಡಿಸಲಾಗಿರುವ ಸ್ಟೀಲ್‌ಗೇಟ್‌ಗಳ ಉದ್ಘಾಟನೆ.
- ತುಂಗಾಭದ್ರ ಪಾತ್ರದ ರೈತರ ರಕ್ಷಣೆಗೆ ಕೇಂದ್ರ ಜಲಶಕ್ತಿ ಸಚಿವರಾದ ಸಿ.ಆರ್ ಪಾಟೀಲ್ ನೇತೃತ್ವದಲ್ಲಿ ಕರ್ನಾಟಕ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್, ತೆಲಂಗಾಣ ಸಿಎಂ ರೇವಂತ್ ರೆಡ್ಡಿ, ಆಂಧ್ರಪ್ರದೇಶ ಸಿಎಂ ಚಂದ್ರಬಾಬು ನಾಯ್ಡು ಅವರು ಒಗ್ಗಟ್ಟಾಗಿ ಸೇರಿ ಒಮ್ಮತದ ತೀರ್ಮಾನ.
- ಅಣೆಕಟ್ಟಿನಲ್ಲಿ ಹೂಳು ತೆಗೆಯಲು ಕೇಂದ್ರದಿಂದ ಯೋಜನೆ.
- ಬಡವರ ವಸತಿ ಯೋಜನೆಗಳ ಮಂದಗತಿಗೆ ಅಸಮಾಧಾನ, ಆದಷ್ಟು ಬೇಗ ವಸತಿ ವಿತರಣೆಗೆ ಅಧಿಕಾರಿಗಳಿಗೆ ಸೂಚನೆ.
- ಬಡವರಿಗೆ ನಿವೇಶನ ಬದಲು ಮನೆ ಕಟ್ಟಿಕೊಡಿ ಎಂದು ಅಧಿಕಾರಿಗಳಿಗೆ ಸೂಚನೆ.
- ಕೆಂಪೇಗೌಡ ಬಡಾವಣೆಯಲ್ಲಿ 10 ಪಥಗಳ ಎಸ್.ಎಂ ಕೃಷ್ಣ ರಸ್ತೆ ಉದ್ಘಾಟನೆ.
- ತೆರಿಗೆ ವಂಚನೆ ತಡೆಯುವಂತೆ ಅಧಿಕಾರಿಗಳಿಗೆ ಸೂಚನೆ.
- ರಾಜಕೀಯ ವ್ಯವಹಾರಗಳ ಸಮಿತಿ ರಚನೆಗೆ ತೀರ್ಮಾನ.
- ಬಂಡೀಪುರ, ನಾಗರಹೊಳೆ ಹುಲಿ ಸಫಾರಿ ಪುನರಾರಂಭ.
- ಹೆಬ್ಬಾಳ ಬಳಿ ಸಣ್ಣ ಸುರಂಗ ರಸ್ತೆ ನಿರ್ಮಾಣಕ್ಕೆ ಶಂಕುಸ್ಥಾಪನೆ
- ಕೆಂಪೇಗೌಡ ಜಯಂತಿ ಹಿನ್ನೆಲೆಯಲ್ಲಿ ಬಿಡಿಎ ವತಿಯಿಂದ ಬೆಂಗಳೂರಿನಲ್ಲಿ 15 ಲಕ್ಷ ಸಸಿ ನೆಡುವ ಕಾರ್ಯಕ್ರಮ, ಗಿನ್ನೀಸ್ ದಾಖಲೆ ನಿರ್ಮಾಣ.
- ಸಾರ್ವಜನಿಕ ಯೋಜನೆಗಳಿಗೆ ಭೂಮಿ ಕೊಡುವ ರೈತರು, ಭೂಮಾಲೀಕರಿಗೆ ಗೌರವ ನೀಡಲು ವಾಲ್ ಆಫ್ ಗ್ರ್ಯಾಟಿಟ್ಯೂಡ್ ನಿರ್ಮಾಣಕ್ಕೆ ನಿರ್ಧಾರ.
- 2028ಕ್ಕೆ ನಶೆ ಮುಕ್ತ ಕರ್ನಾಟಕ ನಿರ್ಮಾಣದ ಗುರಿ.
- ಅಮಲು ಬೆರೆಸುವ ಪಾನ್ ಮಸಾಲ, ಗುಟ್ಕಾಗಳ ನಿಷೇಧಿಸುವ ಎಚ್ಚರಿಕೆ.
- ಡ್ರಗ್ಸ್ ಜಾಲ ನಿಗ್ರಹಕ್ಕೆ ಸುಳಿವು ನೀಡಿದವರಿಗೆ ಬಹುಮಾನ ನೀಡಲು ತೀರ್ಮಾನ.
- ಖಾಸಗೀಕರಣ ವಿರೋಧಿಸುತ್ತಿದ್ದ ಎಸ್ಕಾಂ ಸಿಬ್ಬಂದಿಗಳಿಗೆ ಆತ್ಮಸ್ಥೈರ್ಯ.
- ಹಾಸನದ ಐಐಟಿಗೆ ಭೂಸ್ವಾಧೀನದಿಂದ ಸರಿಯಾದ ಪರಿಹಾರ ಸಿಗದೆ ನೊಂದ ಹಾಸನದ ರೈತರಿಗೆ 2013ರ ಕೋರ್ಟ್ ಆದೇಶ ಅನ್ವಯ ಪರಿಹಾರ ನೀಡುವ ಭರವಸೆ.
- ಎಎಸ್‌ಆರ್ ಪ್ರಕ್ರಿಯೆಯಲ್ಲಿ ರಾಜ್ಯದ ಜನರ ಮತದಾನದ ಹಕ್ಕು ರಕ್ಷಣೆಗೆ ನಿವಾಸ ದೃಢೀಕರಣ ಪತ್ರ ಸೇರಿದಂತೆ ಸರ್ಕಾರದಿಂದ ಅಗತ್ಯ ನೆರವು.
- ಕೇಂದ್ರ ಅರಣ್ಯ ಇಲಾಖೆಗಳಲ್ಲಿ ಅರಣ್ಯ ಅನುಮತಿ ಬಾಕಿ ಇರುವ ಎಲ್ಲಾ ಪ್ರಕರಣಗಳನ್ನು ಜು.15ರ ಒಳಗೆ ಇತ್ಯರ್ಥಕ್ಕೆ ಸೂಚನೆ.
- ಗಣಿಗಾರಿಕೆ ಸೇರಿ ನಾನಾ ಚಟುವಟಿಕೆಗಳಿಗೆ ಸರ್ಕಾರಿ ಜಾಗ ಪಡೆದು ವರ್ಷಗಳ ಕಾಲ ಚಟುವಟಿಕೆ ಆರಂಭಿಸದಿದ್ದರೆ ಆ ಭೂಮಿ ಹಿಂಪಡೆಯಲು ಸೂಚನೆ.
- ಮೇಕೆದಾಟು ಯೋಜನೆ ಅನುಷ್ಠಾನಕ್ಕಾಗಿ ಭೂಕಂಪನ ಅಧ್ಯಯನಕ್ಕೆ ಮಣ್ಣು ಪರೀಕ್ಷೆಗೆ ಹಾಗೂ ಸಮೀಕ್ಷೆಗೆ ರಾಜ್ಯ ವನ್ಯಜೀವಿ ಮಂಡಳಿಯಿಂದ ಅನುಮತಿ ನೀಡಿದ್ದು, ಇದರ ಮುಂದುವರಿದ ಭಾಗವಾಗಿ ಕೇಂದ್ರ ವನ್ಯಜೀವಿ ಮಂಡಳಿಗೆ ಅನುಮತಿ ಕೋರಿ ಶಿಫಾರಸ್ಸು.

# ಬೆಂಗಳೂರು: ಬಂಡೆ ಕುಸಿದು 7 ಮಂದಿ ಕ್ವಾರಿ ಕಾರ್ಮಿಕರ ದುರ್ಮರಣ



ಬಂಡೆ ಸಿಡಿದು ಬಿಹಾರ ಮೂಲದ 7 ಕಾರ್ಮಿಕರು ಸಾವೀಗೀಡಾಗಿರುವ ಕಲ್ಲು ಕ್ವಾರಿ ಸ್ಥಳದ ದೃಶ್ಯ

**ರಾಮನಗರ, ಜು.2:** ಕಲ್ಲು ಕ್ವಾರಿಯಲ್ಲಿ ಬಂಡೆ ಕುಸಿದು ಬಿಹಾರ ಮೂಲದ 7 ಕಾರ್ಮಿಕರು ಸಾವೀಗೀಡಾಗಿರುವ ಘಟನೆ ಬೆಂಗಳೂರು ದಕ್ಷಿಣ ತಾಲೂಕಿನ ಮಾದಾಪಟ್ಟಣ ಬಳಿ ಗುರುವಾರ ಬೆಳಗ್ಗೆ ನಡೆದಿದೆ. ಬೆಂಗಳೂರು ದಕ್ಷಿಣ ತಾಲೂಕಿನ ತಾವರೆಕೆರೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿರುವ ಕಾವೇರಿ ಕ್ರಷರ್‌ನಲ್ಲಿ ದುರ್ಘಟನೆ ನಡೆದಿದ್ದು, ಮೇಲಿಂದ ಬಂಡೆ ಬಿದ್ದು ಏಳು ಮಂದಿ ಕಾರ್ಮಿಕರು ಮೃತಪಟ್ಟು, ಬಂಡೆ ಕೆಳಗೆ ಇನ್ನು ಹಲವು ಕಾರ್ಮಿಕರು ಸಿಲುಕಿರುವ ಶಂಕೆ ವ್ಯಕ್ತವಾಗಿದೆ. ಕಾವೇರಿ ಕಂಪನಿಗೆ ಸೇರಿದ ಕ್ರಷರ್‌ನಲ್ಲಿ ದುರಂತ ಸಂಭವಿಸಿದ್ದು, ಎಂದಿನಂತೆ ಕೆಲಸ ಮಾಡುತ್ತಿದ್ದ ಕಾರ್ಮಿಕರ ಪಾಲಿಗೆ ಬಂಡೆ ಯಮನಾಗಿ ಬಂದಿದೆ. ಇಟಾಚಿಯಲ್ಲಿ ಕೆಲಸ ಮಾಡುವಾಗ ಕಾರ್ಮಿಕರ ಮೇಲೆಯೇ ಬಿದ್ದು ಭಾರೀ ದುರಂತ ಸಂಭವಿಸಿದೆ. ಸ್ಥಳಕ್ಕೆ ತಾವರೆಕೆರೆ ಪೊಲೀಸ್ ಭೇಟಿ ಪರಿಶೀಲನೆ ನಡೆಸಿದ್ದಾರೆ. ಸ್ಥಳೀಯ ಮೂಲಗಳ ಪ್ರಕಾರ, ಹುಲವೇನಹಳ್ಳಿ ಗ್ರಾಮದ ವ್ಯಾಪ್ತಿಯಲ್ಲಿ ಯಾವುದೇ ಅಧಿಕೃತ ಪರವಾನಗಿ ಇಲ್ಲದೆ ಕದ್ದುಮುಚ್ಚಿ ಅಕ್ರಮ ಗಣಿಗಾರಿಕೆ ನಡೆಸಲಾಗುತ್ತಿತ್ತು. ಇಂದು ಬೆಳಗಿನ ಜಾವ ಕಾರ್ಮಿಕರು ಎಂದಿನಂತೆ ಕಲ್ಲು ಕ್ವಾರಿಯಲ್ಲಿ ಕೆಲಸ ಮಾಡುತ್ತಿದ್ದಾಗ, ದೊಡ್ಡ ಬಂಡೆಗಳನ್ನು ಪುಡಿ ಮಾಡಲು ಅತಿಯಾದ ತೀವ್ರತೆಯ ಸ್ಫೋಟಕಗಳನ್ನು ಬಳಸಲಾಗಿದೆ. ಈ ವೇಳೆ ಸುರಕ್ಷತಾ ಕ್ರಮಗಳನ್ನು ಗಾಳಿಗೆ ತೂರಿ ಬಂಡೆ ಸ್ಫೋಟಿಸುವಾಗ ಇಡೀ ಪ್ರದೇಶವೇ ಬಹುದೊಡ್ಡ ಶಬ್ದದೊಂದಿಗೆ ಸಿಡಿದಿದೆ. ಸ್ಫೋಟದ ತೀವ್ರತೆಗೆ ಬಂಡೆ ಕುಸಿದು ಸಿಲುಕಿ ಏಳು ಜನ ಸ್ಥಳದಲ್ಲೇ ಪ್ರಾಣ ಕಳೆದುಕೊಂಡಿದ್ದಾರೆ ಎನ್ನಲಾಗುತ್ತಿದ್ದು, ಮೃತರ ಸಂಖ್ಯೆ ಇನ್ನು ಹೆಚ್ಚಾಗುವ ಸಾಧ್ಯತೆ ಇದೆ.

**ವರದಿ ಬಂದ ನಂತರ ಕ್ರಮ: ಸಿಎಂ ಡಿ.ಕೆ. ಶಿವಕುಮಾರ್**

ಮಾಗಡಿ ರಸ್ತೆ ಬಳಿ ಎರಡು ಕ್ವಾರಿಯಲ್ಲಿ ಕುಸಿತವಾಗಿದ್ದು 7 ಮಂದಿ ಮೃತಪಟ್ಟಿರುವ ಪ್ರಕರಣದ ಬಗ್ಗೆ ಅಧಿಕೃತ ಮಾಹಿತಿ ಪಡೆದ ನಂತರ ಕೈಗೊಳ್ಳಬೇಕಾಗಿರುವ ಅಗತ್ಯ ಕ್ರಮಗಳ ಬಗ್ಗೆ ತೀರ್ಮಾನ ಮಾಡಲಾಗುವುದು ಎಂದು ಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು. ವಿಧಾನಸೌಧದ ಆವರಣದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಗುರುವಾರ ಉತ್ತರಿಸಿದ ಅವರು, ಪೊಲೀಸ್ ಅಧಿಕಾರಿಗಳು, ಗಣಿ ಹಾಗೂ ಭೂ ವಿಜ್ಞಾನ ಇಲಾಖೆ ಅಧಿಕಾರಿಗಳು ದುರಂತ ಸ್ಥಳಕ್ಕೆ ಭೇಟಿ ನೀಡಿದ್ದಾರೆ. ಸ್ಫೋಟದಿಂದಾಗಿ ಇದು ಸಂಭವಿಸಿಲ್ಲ ಎಂಬ ಮಾಹಿತಿ ಬಂದಿದ್ದು, ಈ ಕ್ವಾರಿ ಕಾನೂನುಬದ್ಧವಾಗಿ ನಡೆಸಲಾಗುತ್ತಿದೆಯೇ ಇಲ್ಲವೇ ಎಂಬ ವರದಿಯನ್ನು ಪಡೆದು ಕ್ರಮ ಕೈಗೊಳ್ಳಲಾಗುವುದು. ಕ್ವಾರಿ ನಡೆಸುವಾಗ ಅದರದೇ ಆದ ನಿಯಮಗಳಿದ್ದು, ಅವುಗಳ ಪಾಲನೆಯಾಗುತ್ತಿವೆಯೇ ಇಲ್ಲವೇ ಎಂಬ ಪರಿಶೀಲನೆ ಮಾಡಲಾಗುವುದು ಎಂದು ತಿಳಿಸಿದರು.

ಪರಿಹಾರದ ವಿಚಾರವಾಗಿ ಕೇಳಿದಾಗ, ಮೊದಲು ಎಷ್ಟು ಜನ ಸತ್ತಿದ್ದಾರೆ ಎಂಬ ಮಾಹಿತಿಗಳು ಬರಲಿ, ಆನಂತರ ಪರಿಹಾರದ ಬಗ್ಗೆ ತೀರ್ಮಾನ ಮಾಡೋಣ. ತರಾತುರಿಯಲ್ಲಿ ಪರಿಹಾರ ಘೋಷಿಸಿದ ಮಾತ್ರಕ್ಕೆ ಸತ್ತವರು ಮರಳಿ ಬರುವುದಿಲ್ಲ. ಇದಕ್ಕೆಲ್ಲಾ ಅದರದೇ ಆದ ಪ್ರಕ್ರಿಯೆಗಳಿವೆ. ಖಂಡಿತವಾಗಿ ಸಂತ್ರಸ್ತರಿಗೆ ಪರಿಹಾರ ನೀಡಲಾಗುವುದು. ಇಂತಹ ಘಟನೆಗಳು ಮತ್ತೆ ಮರುಕಳಿಸದಂತೆ ಎಚ್ಚರಿಕೆ ವಹಿಸುವುದು ಬಹಳ ಮುಖ್ಯ ಎಂದು ತಿಳಿಸಿದರು.



ಬೆಂಗಳೂರು ದಕ್ಷಿಣ ಜಿಲ್ಲೆ ಮಾದಾಪಟ್ಟಣದ ಕಲ್ಲು ಕ್ವಾರಿಯಲ್ಲಿ ಗುರುವಾರ ಬಂಡೆ ಕುಸಿದು ಸಾವನ್ನಪ್ಪಿದ ಏಳು ಮಂದಿಯ ಪಾರ್ಥಿವ ಶರೀರ ಇರಿಸಿರುವ ಹಾಗೂ ಗಾಯಾಳುಗಳು ಚಿಕಿತ್ಸೆ ಪಡೆಯುತ್ತಿರುವ ಆರ್.ಆರ್.ಆಸ್ಪತ್ರೆಗೆ ಸಿಎಂ ಡಿ.ಕೆ.ಶಿವಕುಮಾರ್ ಅವರು ಗುರುವಾರ ಭೇಟಿ ನೀಡಿ, ಗಾಯಾಳುಗಳು ಹಾಗೂ ಸಂತ್ರಸ್ತ ಕುಟುಂಬದವರಿಗೆ ಸಾಂತ್ವನ ಹೇಳಿದರು. ಸಚಿವ ಕೃಷ್ಣ ಬೈರೇಗೌಡ, ಶಾಸಕರಾದ ಎಸ್.ಟಿ.ಸೋಮಶೇಖರ್, ಎ.ಸಿ.ಶ್ರೀನಿವಾಸ್ ಜತೆಗಿದ್ದರು.

## ನಿತ್ಯ ಪಂಚಾಂಗ 3.07.2026 ಶುಕ್ರವಾರ

ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ – ಜ್ಯೇಷ್ಠ ಮಾಸ ನಿಜ ಜ್ಯೇಷ್ಠ ಬಹುಳ, ತದಿಗೆ, ಶ್ರವಣ ನಕ್ಷತ್ರ, ಸಂಕಷ್ಟ ಚತುರ್ಥಿ, ಮೈಸೂರು ತಿಲಕನಗರ ಶ್ರೀನಿವಾಸ ಉತ್ಸವ, ಕೊಳ್ಳೇಗಾಲ ಸುಬ್ರಹ್ಮಣ್ಯ ಸ್ವಾಮಿ ವರ್ಧಂತಿ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ.5.04–6.33 | 12.00–1.30 | 3.00–4.00 |
| ಸೋಮ | ಬೆ.7.20–9.04 | 10.30–12.00 | 1.30–3.00 |
| ಮಂಗಳ | ಮ.3.25–4.59 | 9.00–10.30 | 12.00–1.30 |
| ಬುಧ | ಮ.12.16–1.50 | 7.30–9.00 | 10.30–12.00 |
| ಗುರು | ಮ.1.50–3.29 | 6.00–7.30 | 9.00–10.30 |
| ಶುಕ್ರ | ಬೆ.10.42–12.16 | 3.00–4.30 | 7.30–9.00 |
| ಶನಿ | ಬೆ.9.07–10.41 | 1.30–3.00 | 6.00–7.30 |



ಎಲ್ ಅಂಡ್ ಟಿ ಸಂಸ್ಥೆಯ ಅಧ್ಯಕ್ಷರು ಹಾಗೂ ಎಂಡಿ ಎಸ್.ಎನ್. ಸುಬ್ರಹ್ಮಣ್ಯನ್ ಅವರು ಸಿಎಂ ಡಿ.ಕೆ.ಶಿವಕುಮಾರ್ ಅವರನ್ನು ಗುರುವಾರ ಭೇಟಿ ಮಾಡಿ ಅಭಿನಂದಿಸಿದರು. .

# ಕಳ್ಳಮತದಾರರಿಗೆ ಆದ್ಯತೆ: ಎಚ್‌ಡಿಕೆ ತರಾಟೆ

**ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆರೋಪ**

**ರಾಮನಗರದಲ್ಲಿ ಅಕ್ರಮ ಬಾಂಗ್ಲಾ ನುಸುಳು ಕೋರರಿಗೂ ಅವಕಾಶ**



**ರಾಮನಗರ, ಜು.2:** ಎಸ್‌ಐಆರ್ ಮಾಹಿತಿ ಸಂಗ್ರಹ ಪ್ರಕ್ರಿಯೆಯಲ್ಲಿ ನಿಯಮ ಉಲ್ಲಂಘನೆ ಮತ್ತು ಅಕ್ರಮ ನಡೆಯುತ್ತಿದೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆರೋಪ ಮಾಡಿದ್ದಾರೆ.

ರಾಮನಗರದಲ್ಲಿ ಎಸ್‌ಐಆರ್ ಹೆಸರಿನಲ್ಲಿ ಕಳ್ಳ ಮತದಾರರ ಪಟ್ಟಿ ಸಿದ್ಧಪಡಿಸಲಾಗುತ್ತಿದ್ದು, ಈ ಇಡೀ ಅಕ್ರಮಕ್ಕೆ ರಾಜ್ಯದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಪ್ರೇರಣೆಯೇ ಕಾರಣ ಎಂದು ವಾಗ್ದಾಳಿ ನಡೆಸಿದ್ದಾರೆ.

ರಾಜ್ಯದಲ್ಲಿ ಕಳೆದ ಎರಡು ದಿನಗಳಿಂದ ಎಸ್‌ಐಆರ್ ಮಾಹಿತಿ ಸಂಗ್ರಹ ತೀವ್ರಗೊಂಡಿರುವ ಬೆನ್ನಲ್ಲೇ ಸುದ್ದಿಗಾರರೊಂದಿಗೆ ಮಾತನಾಡಿದ ಎಚ್‌ಡಿಕೆ, ರಾಮನಗರದ ಕಲ್ಯಾಣ ಮಂಟಪಗಳಲ್ಲಿ ಬಿಎಲ್‌ಓಗಳು ಸಾವಿರಾರು ಜನರನ್ನು ಒಂದೇ ಕಡೆ ಕರೆಸಿ ಕೂರಿಸಿಕೊಂಡು ನಿಯಮ ಬಾಹಿರವಾಗಿ ಎಸ್‌ಐಆರ್ ಪ್ರಕ್ರಿಯೆ ನಡೆಸುತ್ತಿದ್ದಾರೆ. ಇಲ್ಲಿ ನಿರ್ದಿಷ್ಟವಾಗಿ ಒಂದು ಕೋಮಿಗೆ ಸೇರಿದವರನ್ನು, ಅದರಲ್ಲೂ ರಾಮನಗರ ಮತ್ತು ಚನ್ನಪಟ್ಟಣದಲ್ಲಿ ಅಕ್ರಮವಾಗಿ ಆಶ್ರಯ ಪಡೆದಿರುವ ಬಾಂಗ್ಲಾದೇಶದ ನುಸುಳು ಕೋರರನ್ನು ತಂದು ಕೂರಿಸಲಾಗಿದೆ. ಈ ಕಳ್ಳ ಮತದಾರರನ್ನು ಒಟ್ಟಿಗೆ ಸೇರಿಸಿ ಅವರಿಗೆ ಎಸ್‌ಐಆರ್ ಮಾಡಿಕೊಡ ಲಾಗುತ್ತಿದೆ. ಮುಖ್ಯಮಂತ್ರಿ ಅವರೇ, ನಿಮಗೆ ನೈತಿಕತೆ ಇದ್ದರೆ ಹೇಳಿ, ಈ ಕಳ್ಳ ಮತಗಳ ಸೃಷ್ಟಿಗೆ ಯಾರು ಕಾರಣ ಎಂದು ಪ್ರಶ್ನಿಸಿದ್ದಾರೆ.

ಸರಿಯಾದ ಮಾಹಿತಿ ನೀಡದಿದ್ದರೆ ಸರ್ಕಾರಿ ಸವಲತ್ತುಗಳಿಂದ ವಂಚಿತ ರಾಗುತ್ತೀರಿ ಎಂದು ಮುಖ್ಯಮಂತ್ರಿಗಳೇ ಮೊದಲು ಜನರಲ್ಲಿ ಭಯ ಹುಟ್ಟಿಸಿದ್ದರು. ಈಗ ಅವರ ಪ್ರಭಾವ ಬಳಸಿ ಅಧಿಕಾರಿಗಳು ಸರ್ಕಾರದ ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ. ರಾಮನಗರದ ಬಿಡದಿ ಹೋಬಳಿಯ ಕೇತಗಾನಹಳ್ಳಿಯಲ್ಲಿ ನಮ್ಮ ಕುಟುಂಬದ ಮತ ಇದೆ. ನಮ್ಮನ್ನು ರಾಮನಗರದಿಂದ ಹೊರ ಹಾಕುವ ಬಗ್ಗೆ ಕಾಂಗ್ರೆಸ್ಸಿಗರು ಮಾತನಾಡುತ್ತಿದ್ದಾರೆ. ಆದರೆ ನಮ್ಮನ್ನು ಇಲ್ಲಿಂದ ಹೊರಹಾಕಲು ಯಾರಿಂದಲೂ ಸಾಧ್ಯವಿಲ್ಲ ಎಂದು ಅವರು ಸವಾಲು ಎಸೆದಿದ್ದಾರೆ.

### ನಿರ್ದಾಕ್ಷಿಣ್ಯ ಕ್ರಮಕ್ಕೆ ಒತ್ತಾಯ

ಇಡೀ ಪ್ರಕ್ರಿಯೆಯು ಅಧಿಕಾರಿಗಳ ಸಂಪೂರ್ಣ ವೈಫಲ್ಯವನ್ನು ಎತ್ತಿ ತೋರಿಸುತ್ತದೆ ಎಂದಿರುವ ಎಚ್.ಡಿ. ಕುಮಾರಸ್ವಾಮಿ, ರಾಮನಗರ ಜಿಲ್ಲಾಧಿಕಾರಿ ಏನು ಮಾಡುತ್ತಿದ್ದಾರೆ ಎಂದು ಪ್ರಶ್ನಿಸಿದ್ದಾರೆ. ಅಕ್ರಮವಾಗಿ ಮತದಾರರ ಪಟ್ಟಿ ಸಿದ್ಧಪಡಿಸುತ್ತಿರುವ ಜಿಲ್ಲಾಧಿಕಾರಿಗಳ ವಿರುದ್ಧ ತಕ್ಷಣ ಕ್ರಮ ಕೈಗೊಳ್ಳಬೇಕು. ಈ ಕಳ್ಳ ಮತದಾನದ ಸೃಷ್ಟಿ ಮತ್ತು ಸರ್ಕಾರದ ದುರ್ಬಳಕೆಯ ಕುರಿತು ನಾನು ರಾಜ್ಯ ಹಾಗೂ ಕೇಂದ್ರ ಚುನಾವಣಾ ಆಯೋಗದ ಮುಖ್ಯ ಅಧಿಕಾರಿಗಳ ಗಮನಕ್ಕೆ ತರಲಿದ್ದೇನೆ ಮತ್ತು ಪತ್ರ ಬರೆಯಲಿದ್ದೇನೆ. ಈ ಅಕ್ರಮದ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕಾನೂನು ಕ್ರಮ ಜರುಗಲೇಬೇಕು, ಎಂದು ಒತ್ತಾಯಿಸಿದ್ದಾರೆ.

# ಬಿಡದಿ ಟೌನ್‌ಶಿಪ್‌ಗೆ ಶೇ.80ರಷ್ಟು ರೈತರ ವಿರೋಧ: ವಿಜಯೇಂದ್ರ



**ಮೈಸೂರು, ಜು.2:** ಬಿಡದಿ ಟೌನ್‌ಶಿಪ್ ಯೋಜನೆಯ ಹೆಸರಿನಲ್ಲಿ ರೈತರ ಜಮೀನುಗಳನ್ನು ಕಸಿದುಕೊಳ್ಳುವ ಪ್ರಯತ್ನ ನಡೆಯುತ್ತಿದ್ದು, ಸರ್ಕಾರ ದಬ್ಬಾಳಿಕೆ ಧೋರಣೆಯನ್ನು ಕೈಬಿಟ್ಟು ತಕ್ಷಣವೇ ರೈತರೊಂದಿಗೆ ಸಮಾಲೋಚನೆ ನಡೆಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಒತ್ತಾಯಿಸಿದರು.

**ದಬ್ಬಾಳಿಕೆ ಬಿಟ್ಟು ರೈತರೊಂದಿಗೆ ಸಮಾಲೋಚನೆ ನೇರವಾಗಿ ಸಮಾಲೋಚನೆ ನಡೆಸಿ: ಬಿ.ವೈ. ವಿಜಯೇಂದ್ರ ಆಗ್ರಹ**

ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಯೋಜನೆ ವಿಷಯದಲ್ಲಿ ರಾಜ್ಯ ಸರ್ಕಾರದ ನಡೆಗೆ ಆಕ್ಷೇಪ ವ್ಯಕ್ತಪಡಿಸಿರುವ ಅವರು, ಯೋಜನೆಗೆ ಶೇ.80ರಷ್ಟು ರೈತರು ಸಮ್ಮತಿ ಸೂಚಿಸಿದ್ದಾರೆ ಎಂದು ಸರ್ಕಾರ ಹೇಳುತ್ತಿದೆ. ಇದು ಸತ್ಯಕ್ಕೆ ದೂರವಾಗಿದೆ. ವಿರೋಧ ಪಕ್ಷದ ನಾಯಕರೊಂದಿಗೆ ಈಗಾಗಲೇ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ವಾಸ್ತವದಲ್ಲಿ ಶೇ.70–80 ರೈತರು ಕೃಷಿ ಭೂಮಿ ಸ್ವಾಧೀನಕ್ಕೆ ವಿರೋಧ ವ್ಯಕ್ತಪಡಿಸಿದ್ದಾರೆ ಎಂದರು.

ಫಲವತ್ತಾದ ಜಮೀನನ್ನು ಕಳೆದುಕೊಳ್ಳುವ ಭೀತಿಯಲ್ಲಿರುವ ರೈತರ ಆಕ್ರೋಶ ಸಹಜವಾಗಿದ್ದು, ಸರ್ಕಾರ ಯಾರನ್ನೂ ಬಲವಂತವಾಗಿ ಒಕ್ಕಲೆಬ್ಬಿಸುವ ಕೆಲಸಕ್ಕೆ ಕೈಹಾಕಬಾರದು. ಸರ್ಕಾರ ತಾನು ಮಾಡಿದ್ದೇ ಸರಿ ಎಂಬ ಸರ್ವಾಧಿಕಾರಿ ಧೋರಣೆ ತಳೆದಿದ್ದು, ಈ ಯೋಜನೆ ಗೊಂದಲದ ಕುರಿತು ಮುಂಬರುವ ಜಂಟಿ ಸದನದಲ್ಲಿ ಸಮಗ್ರವಾಗಿ ಚರ್ಚೆ ನಡೆಸಲಾಗುವುದು ಎಂದು ವಿಜಯೇಂದ್ರ ಸ್ಪಷ್ಟಪಡಿಸಿದರು. ಜತೆಗೆ ಸರ್ಕಾರದ ವಿರುದ್ಧ ಹಂತ ಹಂತವಾಗಿ ಹೋರಾಟ ರೂಪಿಸಸಲಾಗುತ್ತಿದೆ. ಒಂದೆಡೆ ಎಸ್‌ಐಆರ್ ತನಿಖೆ ನಡೆಯುತ್ತಿದ್ದರೆ, ಇನ್ನೊಂದೆಡೆ ಗೃಹಲಕ್ಷ್ಮಿ ಯೋಜನೆಯಲ್ಲಿ ನಡೆದಿದೆ ಎನ್ನಲಾದ ಹಗರಣದ ವಿರುದ್ಧ ಹಾಗೂ ರೈತರ ಹಿತರಕ್ಷಣೆಗಾಗಿ ಬಿಜೆಪಿ ಬೀದಿಗಿಳಿದು ಹೋರಾಟ ಮಾಡಲಿದೆ ಎಂದರು.

### ಪಕ್ಷ ಸಂಘಟನೆ ಕಾರ್ಯ ನಿರಂತರ

ಅಡ್ಡ ಮತದಾನದ ಕುರಿತ ಗೊಂದಲಗಳು ಮುಗಿದ ಅಧ್ಯಾಯ. ಮಾಜಿ ಮುಖ್ಯಮಂತ್ರಿ ಡಿ.ವಿ. ಸದಾನಂದಗೌಡರದ್ದು ಎನ್ನಲಾದ ಆಡಿಯೋ ವಿವಾದದ ಕುರಿತು ಪ್ರತಿಕ್ರಿಯಿಸಿ, ಆ ಧ್ವನಿ ತಮ್ಮದಲ್ಲ ಎಂದು ಸದಾನಂದಗೌಡರೇ ಸ್ಪಷ್ಟನೆ ನೀಡಿದ್ದಾರೆ. ಆ ಮೂಲಕ ಎಲ್ಲ ಗೊಂದಲಗಳಿಗೂ ಅವರೇ ತೆರೆ ಎಳೆದಿದ್ದಾರೆ ಎಂದರು. ಇದೇ ವೇಳೆ ಪಕ್ಷದೊಳಗಿನ ಕೆಲವು ನಾಯಕರ ಭಿನ್ನಹೇಳಿಕೆಗಳ ಕುರಿತು ಮಾತನಾಡುತ್ತಾ, ಎಚ್.ವಿಶ್ವನಾಥ್ ಸೇರಿ ಇತರರೊಂದಿಗೆ ಹಿರಿಯರು ಚರ್ಚಿಸಿದ್ದಾರೆ. ಇಂತಹ ಸಣ್ಣಪುಟ್ಟ ಬಿಕ್ಕಟ್ಟುಗಳ ನಡುವೆಯೂ ಪಕ್ಷದ ಕಾರ್ಯಕರ್ತರಿಗೆ ಧೈರ್ಯ ತುಂಬಿ, ಸಂಘಟನೆಯನ್ನು ಬಲಪಡಿಸುವ ಕೆಲಸ ನಿರಂತರವಾಗಿ ಸಾಗಲಿದೆ ಎಂದು ವಿಜಯೇಂದ್ರ ವಿಶ್ವಾಸ ವ್ಯಕ್ತಪಡಿಸಿದರು.

# ವಿದ್ಯುತ್ ಖಾಸಗೀಕರಣಕ್ಕೆ ರಾಜ್ಯ ಸರ್ಕಾರದ ವಿರೋದ: ಕೆ.ಜೆ. ಜಾರ್ಜ್



**ಬೆಂಗಳೂರು, ಜು.2:** ರಾಜ್ಯ ಸರ್ಕಾರ ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣಗೊಳಿಸುವುದಕ್ಕೆ ವಿರುದ್ಧವಾಗಿದೆ. ಆದರೆ ಸಚಿವ ಸಂಪುಟದಲ್ಲಿ ಈ ಬಗ್ಗೆ ಚರ್ಚಿಸಿ ಅಂತಿಮ ನಿರ್ಧಾರ ತೆಗೆದುಕೊಳ್ಳುವುದಾಗಿ ಇಂಧನ ಸಚಿವ ಕೆ.ಜೆ.ಜಾರ್ಜ್ ಹೇಳಿದ್ದಾರೆ.

ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಕುರಿತಂತೆ ತಾವು ಹಾಗೂ ಮುಖ್ಯಮಂತ್ರಿಯವರು ನಮ ಅಭಿಪ್ರಾಯಗಳನ್ನು ಹೇಳಿದ್ದೇವೆ. ನಾವು ಖಾಸಗೀಕರಣದ ಪರವಾಗಿಲ್ಲ ಎಂದರು.

ಖಾಸಗೀಕರಣದ ಹಿಂದೆ ಸರ್ಕಾರದ ಹಿತಾಸಕ್ತಿಯಿದೆ ಎಂಬ ಆರೋಪ ಸರಿಯಲ್ಲ, ಒಂದು ವೇಳೆ ನಮಗೆ ಖಾಸಗೀಕರಣವಾಗಬೇಕೆಂದಿದ್ದರೆ, ಎಸ್ಕಾಂಗಳು, ಕೆಪಿಟಿಸಿಎಲ್ ಸೇರಿದಂತೆ ಸರ್ಕಾರದ ಅಂಗ ಸಂಸ್ಥೆಗಳು ಹೇಗೆ ವಿರೋಧ ವ್ಯಕ್ತ ಪಡಿಸುತ್ತಿದ್ದವು ಎಂದು ಪ್ರಶ್ನಿಸಿದರು.

ವಿದ್ಯುತ್ ಖಾಸಗೀಕರಣಕ್ಕೆ ಅನುಕೂಲವಾಗುವಂತೆ ಕೇಂದ್ರ ಸರ್ಕಾರ ಕಾನೂನು ತಿದ್ದುಪಡಿ ಮಾಡಿದೆ. ಅದರನ್ವಯ ಟಾಟಾ ಸಂಸ್ಥೆಯವರು ನೇರವಾಗಿ ಕೆಇಆರ್‌ಸಿಎಗೆ ಅರ್ಜಿ ಸಲ್ಲಿಸಿದ್ದಾರೆ. ಸರ್ಕಾರದ ಎಸ್ಕಾಂಗಳು ಇದಕ್ಕೆ ವಿರೋಧ ವ್ಯಕ್ತಪಡಿಸುತ್ತಿವೆ ಎಂದು ತಿಳಿಸಿದರು.

ಮಳೆ ಕೊರತೆಯ ನಡುವೆಯೂ ಸದ್ಯಕ್ಕೆ ವಿದ್ಯುತ್ ಅಭಾವ ಇಲ್ಲ. ರಾಜ್ಯದಲ್ಲಿ ಪೂರೈಕೆಗೆ ಸಾಕಷ್ಟು ವಿದ್ಯುತ್ ಸಂಗ್ರಹ ಇದೆ. ಮಳೆಗಾಲ ಇನ್ನೂ ಮುಗಿದಿಲ್ಲ, ಮುಂದಿನ ದಿನಗಳಲ್ಲಿ ಮಳೆ ಬರಬಹುದು ಎಂಬ ನಿರೀಕ್ಷೆ ಇದೆ ಎಂದರು.

ಗ್ಯಾರಂಟಿ ಯೋಜನೆಗಳಲ್ಲಿ ಒಂದಾಗಿರುವ ಗೃಹಜ್ಯೋತಿಗೆ ಅನರ್ಹರು ಸೇರ್ಪಡೆಯಾಗಿದ್ದಾರೆ. ಅದಕ್ಕಾಗಿ ಪರಿಶೀಲನೆ ನಡೆಸಲಾಗುತ್ತಿದೆ. ಅರ್ಹರಿಗೆ ಯೋಜನೆಯ ಸೌಲಭ್ಯವನ್ನು ರದ್ದುಗೊಳಿಸುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಗೃಹಜ್ಯೋತಿ ಫಲಾನುಭವಿಗಳಿಂದ ಜಾತಿ ಮಾಹಿತಿ ಸಂಗ್ರಹಿಸುತ್ತಿರುವುದರಲ್ಲಿ ತಪ್ಪಿಲ್ಲ, ಎಲ್ಲಾ ರೀತಿಯ ಸಮೀಕ್ಷೆಗಳಲ್ಲೂ ಜಾತಿ ಕೇಳುತ್ತಾರೆ. ಗೃಹಜ್ಯೋತಿ ಫಲಾನುಭವಿಗಳಿಂದ ಮಾಹಿತಿ ಸಂಗ್ರಹದಲ್ಲಿ ಜಾತಿ ಪ್ರಮಾಣಪತ್ರ ಪಡೆಯುತ್ತಿಲ್ಲ, ಕೇವಲ ಮಾಹಿತಿ ಕೇಳುತ್ತಿದ್ದೇವೆ. ಎಲ್ಲರೂ ಜಾತಿ ಪ್ರಮಾಣಪತ್ರವನ್ನು ಸಿದ್ಧವಾಗಿಟ್ಟುಕೊಂಡಿರುವುದಿಲ್ಲ ಎಂಬ ಮಾಹಿತಿ ತಮಗಿದೆ ಎಂದು ತಿಳಿಸಿದರು.

ಸಚಿವ ಸಂಪುಟ ವಿಸ್ತರಣೆ ಕುರಿತು ತಮಗೆ ಯಾವುದೇ ಮಾಹಿತಿ ಇಲ್ಲ. ಈ ಬಗ್ಗೆ ಮುಖ್ಯಮಂತ್ರಿಯವರು ಮತ್ತು ಪಕ್ಷದ ಹೈಕಮಾಂಡ್ ತೀರ್ಮಾನ ತೆಗೆದುಕೊಳ್ಳುತ್ತಾರೆ ಎಂದು ಹೇಳಿದರು.

# ನಾಲ್ವರು ಐಎಎಸ್ ಅಧಿಕಾರಿಗಳ ವರ್ಗಾವಣೆ

**ಬೆಂಗಳೂರು, ಜು.2:** ಆಡಳಿತಾತ್ಮಕ ದೃಷ್ಟಿಯಿಂದ ಐಎಎಸ್ ಅಧಿಕಾರಿಗಳ ವರ್ಗಾವಣೆ ಮುಂದುವರಿದಿದ್ದು, ಗುರುವಾರವೂ ಐವರು ಅಧಿಕಾರಿಗಳನ್ನು ವರ್ಗಾವಣೆ ಮಾಡಿ ಸರ್ಕಾರ ಆದೇಶ ಹೊರಡಿಸಿದೆ. ಸಿಎಂ ಡಿ.ಕೆ. ಶಿವಕುಮಾರ್ ಅವರು ಜಾರಿಗೆ ತಂದಿರುವ ಪ್ರಜಾಸೇವಾ ಇಲಾಖೆಯ ಪ್ರಧಾನ ಕಾರ್ಯದರ್ಶಿಯಾಗಿ ಹರ್ಷಗುಪ್ತ ಅವರನ್ನು ನೇಮಕ ಮಾಡಲಾಗಿದೆ. ಜತೆಗೆ ಕರ್ನಾಟಕ ಮೇಲ್ಮನವಿ ನ್ಯಾಯಮಂಡಳಿಯ ಅಧ್ಯಕ್ಷ ಹುದ್ದೆಯ ಹೆಚ್ಚುವರಿ ಪ್ರಭಾರವನ್ನೂ ನೀಡಲಾಗಿದೆ.

ಇನ್ನು ಹುದ್ದೆ ನಿರೀಕ್ಷೆಯಲ್ಲಿದ್ದ ಆರ್. ರಾಗಪ್ರಿಯ ಅವರನ್ನು ಕಾರ್ಮಿಕ ಇಲಾಖೆಯ ಆಯುಕ್ತರನ್ನಾಗಿ ನೇಮಿಸಲಾಗಿದೆ. ಕಾರ್ಮಿಕ ಇಲಾಖೆಯ ಆಯುಕ್ತರಾಗಿದ್ದ ಡಾ. ಗೋಪಾಲ ಕೃಷ್ಣ ಅವರನ್ನು ಕಾಲೇಜು ಶಿಕ್ಷಣ ಇಲಾಖೆಗೆ ವರ್ಗಾಯಿಸಲಾಗಿದೆ. ಕಾಲೇಜು ಶಿಕ್ಷಣ ಇಲಾಖೆ ಆಯುಕ್ತರಾಗಿದ್ದ ಎನ್. ಮಂಜುಶ್ರೀ ಅವರಿಗೆ ಅವರಿಗೆ ಯಾವುದೇ ಹುದ್ದೆ ನೀಡಿಲ್ಲ.

### ಪ್ರಜಾಸೇವೆ ಇಲಾಖೆಗೆ ಸಿಬ್ಬಂದಿ

ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಘೋಷಿಸಿದ್ದ ಮಹತ್ವಾಕಾಂಕ್ಷೆಯ ಪ್ರಜಾಸೇವಾ ಇಲಾಖೆಯನ್ನು ಹೊಸದಾಗಿ ಸ್ಥಾಪಿಸಿ ಈಗ ಅಧಿಕೃತ ಆದೇಶ ಹೊರಡಿಸಲಾಗಿದೆ. ಆಡಳಿತ ಸುಧಾರಣೆ, ಸಾರ್ವಜನಿಕ ಕುಂದುಕೊರತೆ ವಿಭಾಗ ಮತ್ತು ಸಕಾಲ ಮಿಷನ್ ಅನ್ನು ವಿಲೀನಗೊಳಿಸಲಾಗಿದೆ.ಹೊಸ ಇಲಾಖೆಯ ಆಡಳಿತ ವಿನ್ಯಾಸದ ಕುರಿತು ಸ್ಪಷ್ಟ ಆದೇಶ ಹೊರಡಿಸಲಾಗಿದ್ದು, ಒಟ್ಟು 73 ಮಂಜೂರಾದ ಖಾಯಂ ಹುದ್ದೆಗಳನ್ನು ಮರುಹೊಂದಾಣಿಕೆ ಮೂಲಕ ಸೃಷ್ಟಿಸಲಾಗಿದೆ. ಇದರಲ್ಲಿ ಸರ್ಕಾರದ ಕಾರ್ಯದರ್ಶಿ ಹಾಗೂ ಮಿಷನ್ ನಿರ್ದೇಶಕರು, ಅಪರ ಮಿಷನ್ ನಿರ್ದೇಶಕರು, ಉಪ ಕಾರ್ಯದರ್ಶಿ ಹಾಗೂ ಆಡಳಿತಾಧಿಕಾರಿ ಹುದ್ದೆಗಳು ಸೇರಿವೆ. ಇದರೊಂದಿಗೆ ತಾಂತ್ರಿಕ ಹಾಗೂ ಆಡಳಿತಾತ್ಮಕ ಕೆಲಸಗಳ ನಿರ್ವಹಣೆಗಾಗಿ ಒಟ್ಟು 48 ಹುದ್ದೆಗಳನ್ನು ಗುತ್ತಿಗೆ ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅನುಮತಿ ನೀಡಲಾಗಿದೆ. ಅದರಂತೆ ಇದೀಗ ಪ್ರಜಾಸೇವಾ ಇಲಾಖೆ ಇಲಾಖೆಗೆ ಹರ್ಷ ಗುಪ್ತಾ ಅವರನ್ನು ಪ್ರಧಾನ ಕಾರ್ಯದರ್ಶಿಯನ್ನಾಗಿ ನೇಮಿಸಲಾಗಿದೆ.

# ಎಸ್‌ಐಆರ್‌ಗೆ ಸಹಕಾರ ನೀಡಿ: ಗ್ಯಾರಂಟಿ ಸಮಿತಿ ಸದಸ್ಯರಿಗೆ ಗೂಳಿಗೌಡ ಸೂಚನೆ

**ನಾಗರಿಕರಲ್ಲಿ ಜಾಗೃತಿ ಮೂಡಿಸುವುದು ಅರ್ಹ ಮತದಾರರನ್ನು ಪಟ್ಟಿಯಲ್ಲಿ ಉಳಿಸಿಕೊಳ್ಳುವುದು ಅತ್ಯಗತ್ಯ**



**ಬೆಂಗಳೂರು, ಜು.2:** ರಾಜ್ಯದಲ್ಲಿ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ ಆರಂಭವಾಗಿದ್ದು, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸದಸ್ಯರು ತಮ್ಮ ಕ್ಷೇತ್ರಗಳಲ್ಲಿ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಅಭಿಯಾನದಲ್ಲಿ ಸಕ್ರಿಯವಾಗಿ ತೊಡಗಿಕೊಂಡು ಮತದಾರರು ಮತ್ತು ಬಿಎಲ್ ಎಗಳಿಗೆ ನೆರವಾಗಬೇಕು ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ದಿನೇಶ್ ಗೂಳಿಗೌಡ ಅವರು ಕರೆ ಕೊಟ್ಟಿದ್ದಾರೆ.

ನಾಗರಿಕರಲ್ಲಿ ಜಾಗೃತಿ ಮೂಡಿಸುವುದು ಮತ್ತು ಅರ್ಹ ಮತದಾರರು ತಮ್ಮ ವಿವರಗಳನ್ನು ಪರಿಶೀಲಿಸಿ ಅಗತ್ಯವಿದ್ದರೆ ನಮೂನೆಗಳನ್ನು ಭರ್ತಿ ಮಾಡಲು ಸಹಕರಿಸುವುದರ ಜೊತೆಗೆ ಎಸ್ ಐಆರ್ ಬಗ್ಗೆ ಮತದಾರರಲ್ಲಿ ಅರಿವು ಮೂಡಿಸಬೇಕಿದೆ. ಅವರಿಗೆ ಅಗತ್ಯ ದಾಖಲೆಗಳು ಮತ್ತು ಅರ್ಜಿ ಸಲ್ಲಿಕೆ ಕುರಿತು ಮಾಹಿತಿ ನೀಡುವ ಕಾರ್ಯದಲ್ಲಿ ತೊಡಗಿಕೊಳ್ಳಬೇಕು ಎಂದು ತಿಳಿಸಿದ್ದಾರೆ.

ರಾಜ್ಯದ ಎಲ್ಲ ಜಿಲ್ಲಾ, ತಾಲ್ಲೂಕು, ವಿಧಾನಸಭಾ ಕ್ಷೇತ್ರ ಹಾಗೂ ವಾರ್ಡ್ ಮಟ್ಟದ ಗ್ಯಾರಂಟಿ ಸಮಿತಿ ಸದಸ್ಯರು ತಮ್ಮ ವ್ಯಾಪ್ತಿಯಲ್ಲಿ ಅರ್ಹ ಮತದಾರರಿಗೆ ಮತದಾರರ ಪಟ್ಟಿ ಪರಿಷ್ಕರಣೆಯ ಮಹತ್ವವನ್ನು ತಿಳಿಸಿ, 18 ವರ್ಷ ಪೂರ್ಣಗೊಂಡ ಯುವಕರು ಮತದಾರರ ಪಟ್ಟಿಗೆ ಹೆಸರು ಸೇರ್ಪಡೆ ಮಾಡಿಸಿಕೊಳ್ಳುವಂತೆ, ಈಗಾಗಲೇ ನೋಂದಾಯಿತರಾಗಿರುವವರು ತಮ್ಮ ಹೆಸರು, ವಿಳಾಸ ಹಾಗೂ ಇತರೆ ವಿವರಗಳನ್ನು ಪರಿಶೀಲಿಸಿ ಅಗತ್ಯವಿದ್ದಲ್ಲಿ ತಿದ್ದುಪಡಿ ಮಾಡಿಸಿಕೊಳ್ಳುವಂತೆ ಅರಿವು ಮೂಡಿಸಬೇಕಿದೆ ಎಂದು ಹೇಳಿದ್ದಾರೆ.

ಗ್ಯಾರಂಟಿ ಯೋಜನೆಯ ಫಲಾನುಭವಿಗಳಿಗೆ ಮತದಾರರ ಗುರುತಿನ ಚೀಟಿ ಅತ್ಯವಶ್ಯಕ. ಮತದಾನದ ಗುರುತಿನ ಚೀಟಿ ಹೊಂದಿರದವರಿಗೆ ಗ್ಯಾರಂಟಿ ಯೋಜನೆಗಳ ಪ್ರಯೋಜನ ಸಿಗುವುದಿಲ್ಲ ಎಂದು ಮುಖ್ಯಮಂತ್ರಿ ಡಿ. ಕೆ.ಶಿವಕುಮಾರ್ ಅವರು ಈಗಾಗಲೇ ತಿಳಿಸಿದ್ದಾರೆ. ರಾಜ್ಯದ ಪ್ರತಿಯೊಬ್ಬ ಮತದಾರರಿಗೂ ಗ್ಯಾರಂಟಿ ಯೋಜನೆಗಳು ತಲುಪಬೇಕು. ಇದು ಕಾಂಗ್ರೆಸ್ ಸರ್ಕಾರದ ಆಶಯ ಎಂದು ಹೇಳಿದ್ದಾರೆ. ಸಮಿತಿ ಸದಸ್ಯರು ಬಿಎಲ್‌ಎಗಳು ಹಾಗೂ ಸ್ಥಳೀಯ ಮುಖಂಡರೊಂದಿಗೆ ಸಮನ್ವಯ ಸಾಧಿಸಿಕೊಂಡು ಈ ಅಭಿಯಾನದಲ್ಲಿ ಸಕ್ರಿಯವಾಗಿ ಪಾಲ್ಗೊಂಡು, ಮತದಾನದ ಹಕ್ಕನ್ನು ಬಲಪಡಿಸುವ ಈ ಪ್ರಜಾಪ್ರಭುತ್ವದ ಕಾರ್ಯದಲ್ಲಿ ತೊಡಗಿಕೊಳ್ಳುವಂತೆ ಕರೆ ನೀಡಿದ್ದಾರೆ.

### ಗೃಹಜ್ಯೋತಿ ಪರಿಷ್ಕರಣೆ ಕುರಿತು ಅರಿವು ಮೂಡಿಸಿ

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಲ್ಲೊಂದಾದ ಗೃಹಜ್ಯೋತಿ ಯೋಜನೆಯ ಫಲಾನುಭವಿಗಳ ಮನೆ ಮನೆ ಭೇಟಿ ಹಾಗೂ ಮಾಹಿತಿ ಸಂಗ್ರಹಣೆ ಕಾರ್ಯ ಆರಂಭಗೊಂಡಿದ್ದು, ಇದರ ಬಗ್ಗೆ ಕೂಡ ಗ್ಯಾರಂಟಿ ಸಮಿತಿ ಸದಸ್ಯರು ಜಾಗೃತಿ ಮೂಡಿಸಬೇಕಿದೆ ಎಂದು ದಿನೇಶ್ ಗೂಳಿಗೌಡ ಅವರು ಹೇಳಿದ್ದಾರೆ.

ರಾಜ್ಯ ಸರ್ಕಾರ 200 ಯೂನಿಟ್ ಗಳವರೆಗೆ ಉಚಿತ ವಿದ್ಯುತ್ ನೀಡುತ್ತಿದೆ. ಫಲಾನುಭವಿಗಳು ವಿದ್ಯುತ್ ಖಾತೆ ಸಂಖ್ಯೆ, ಗೃಹ ಜ್ಯೋತಿ ನೋಂದಣಿ ಸಮಯದಲ್ಲಿ ನೀಡಿದ್ದ ಆಧಾರ್ ಸಂಖ್ಯೆ, ಮೊಬೈಲ್ ಸಂಖ್ಯೆ ಸೇರಿದಂತೆ, ಫಲಾನುಭವಿಯ ಪಾಸ್ ಪೋರ್ಟ್ ಅಳತೆಯ ಭಾವಚಿತ್ರ, ವೋಟರ್ ಐಡಿ, ರೇಷನ್ ಕಾರ್ಡ್ , ಪ್ಯಾನ್ ಕಾರ್ಡ್ ಬಾಡಿಗೆ / ಭೋಗ್ಯ (ಲೀಸ್) ಕರಾರು ಪತ್ರ (ಅನ್ವಯಿಸುಲ್ಲಿ ಮಾತ್ರ) ಹಾಗೂ ವರ್ಗದ ಮಾಹಿತಿಯನ್ನು ಮೊಬೈಲ್ ಆಪ್ ಹಾಗೂ ಮುದ್ರಿತ ಘೋಷಣಾ ಪತ್ರದಲ್ಲಿ ದಾಖಲಿಸುವ ಕಾರ್ಯದಲ್ಲಿ ತೊಡಗಿಕೊಳ್ಳುವಂತೆ ಫಲಾನುಭವಿಗಳಿಗೆ ತಿಳಿಹೇಳುವ ಕಾರ್ಯ ಸಮಿತಿ ಸದಸ್ಯರಿಂದ ಆಗಬೇಕಿದೆ ಎಂದು ತಿಳಿಸಿದ್ದಾರೆ.

### ದಿನೇಶ್ ಗೂಳಿಗೌಡರಿಗೆ ಹೆಚ್ಚುವರಿ ಜವಾಬ್ದಾರಿ

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾಗಿದ್ದ ಎಂ.ಎನ್.ಸೂರಜ್ ಹೆಗ್ಡೆ ಅವರ ಅಕಾಲಿಕ ನಿಧನದಿಂದ, ಅವರು ನಿರ್ವಹಿಸುತ್ತಿದ್ದ ಜವಾಬ್ದಾರಿಗಳನ್ನು, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ದಿನೇಶ್ ಗೂಳಿಗೌಡ ಅವರಿಗೆ ಹೆಚ್ಚುವರಿ ಹೊಣೆ ವಹಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

# ರಾಜ್ಯದಲ್ಲಿ ಬರ ಪರಿಸ್ಥಿತಿ ನಿರ್ವಹಣೆಗೆ ಸಿದ್ಧರಾಗಿ

**ಮುಖ್ಯಮಂತ್ರಿಗೆ ವಿಪಕ್ಷ ನಾಯಕ ಆರ್. ಅಶೋಕ್ ಪತ್ರ ಬರೆದು ಆಗ್ರಹ**



**ಬೆಂಗಳೂರು, ಜು.2:** ರಾಜ್ಯದಲ್ಲಿ ತೀವ್ರಗೊಳ್ಳುತ್ತಿರುವ ಬರ ಪರಿಸ್ಥಿತಿ ನಿರ್ವಹಣೆಗೆ ಯುದ್ಧೋಪಾದಿಯಲ್ಲಿ ಮುನ್ನೆಚ್ಚರಿಕೆ ಮತ್ತು ಪರಿಹಾರ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಪ್ರತಿಪಕ್ಷ ನಾಯಕ ಆರ್.ಅಶೋಕ ಮುಖ್ಯಮಂತ್ರಿ ಡಿ. ಕೆ.ಶಿವಕುಮಾರ್ ಅವರಿಗೆ ಪತ್ರ ಬರೆದಿದ್ದಾರೆ.

ಮುಂಗಾರು ಮಳೆಯ ತೀವ್ರ ಕೊರತೆಯಿಂದಾಗಿ ರಾಜ್ಯದ ಹಲವು ಭಾಗಗಳಲ್ಲಿ ರೈತರು, ಕೃಷಿ ಕಾರ್ಮಿಕರು ಹಾಗೂ ಗ್ರಾಮೀಣ ಜನತೆ ಸಂಕಷ್ಟ ಎದುರಿಸುತ್ತಿದ್ದಾರೆ. ಬಿತ್ತನೆ ಕಾರ್ಯಗಳು ಹಿನ್ನಡೆ ಕಂಡಿದ್ದು, ಬೆಳೆಗಳು ಒಣಗುವ ಭೀತಿ ಎದುರಾಗಿದೆ. ಜಲಾಶಯಗಳ ನೀರಿನ ಮಟ್ಟವೂ ನಿರಂತರವಾಗಿ ಕುಸಿಯುತ್ತಿದ್ದು, ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯೂ ಗಂಭೀರ ಸ್ವರೂಪ ಪಡೆಯುವ ಆತಂಕ ಎದುರಾಗಿದೆ. ಸದ್ಯದ ಮಾಹಿತಿ ಪ್ರಕಾರ 150ಕ್ಕೂ ಅಧಿಕ ತಾಲೂಕುಗಳಲ್ಲಿ ಬರ ಪರಿಸ್ಥಿತಿ ಉಂಟಾಗಿದ್ದು, ಹಲವೆಡೆ ಸಾಮಾನ್ಯಕ್ಕಿಂತ ಕಡಿಮೆ ಪ್ರಮಾಣದಲ್ಲಿ ಮಳೆ ಸುರಿದಿದೆ. ಈಗಾಗಲೇ ಬಿತ್ತನೆಯಾದ ಬೆಳೆಗಳು ತೇವಾಂಶದ ಕೊರತೆಯಿಂದ ಒಣಗುವ ಸ್ಥಿತಿಗೆ ತಲುಪಿದೆ. ಇದು ಕೃಷಿ ಉತ್ಪಾದನೆಯ ಮೇಲೆ ಹಾಗೂ ಉದ್ಯೋಗದ ಮೇಲೆ ನೇರ ಪರಿಣಾಮ ಬೀರುತ್ತಿದೆ. ಕೃಷಿ ಕಾರ್ಮಿಕರು ನಗರಗಳತ್ತ ಹಾಗೂ ನೆರೆ ರಾಜ್ಯಗಳತ್ತ ವಲಸೆ ಹೋಗುತ್ತಿದ್ದಾರೆ ಎಂದು ಅವರು ಆತಂಕ ವ್ಯಕ್ತಪಡಿಸಿದ್ದಾರೆ.

ಬೆಳಗಾವಿ, ಬಾಗಲಕೋಟೆ ಸೇರಿದಂತೆ ಉತ್ತರ ಕರ್ನಾಟಕದ ಬಹುತೇಕ ಜಿಲ್ಲೆಗಳಲ್ಲಿ ಜಲಾಶಯಗಳ ನೀರಿನ ಮಟ್ಟ ಅಪಾಯಕಾರಿಯಾಗಿ ಕುಸಿದಿರುವುದು ಅತ್ಯಂತ ಆತಂಕಕಾರಿ ಬೆಳವಣಿಗೆ. ಇದು ಬಹುಗ್ರಾಮ ಕುಡಿಯುವ ನೀರಿನ ಯೋಜನೆಯ ಮೇಲೂ ಪರಿಣಾಮ ಬೀರಿದೆ. ಮುಂದೆ ಕುಡಿಯುವ ನೀರಿನ ಸಮಸ್ಯೆ ಯಾವ ಮಟ್ಟಿಗೆ ತೀವ್ರವಾಗಬಹುದು ಎಂಬುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕಿದೆ. ಬಹುತೇಕ ಜಿಲ್ಲಾ ಉಸ್ತುವಾರಿ ಸಚಿವರು ತಮ್ಮ ಜಿಲ್ಲೆಗಳಲ್ಲಿ ಬರ ಪರಿಸ್ಥಿತಿ ಕುರಿತು ಸಮಗ್ರ ಪರಿಶೀಲನಾ ಸಭೆ ನಡೆಸಿಲ್ಲ, ತಾಲೂಕುಗಳಿಗೆ ಭೇಟಿ ನೀಡಿಲ್ಲ ಎಂಬುದು ದುರದೃಷ್ಟಕರ. ಕೃಷಿ ಇಲಾಖೆಗೆ ಪೂರ್ಣಾವಧಿ ಸಚಿವರೇ ಇಲ್ಲದೆ ಕಾರ್ಯನಿರ್ವಹಿಸುತ್ತಿದೆ. ಲಕ್ಷಾಂತರ ರೈತರ ಬದುಕಿನ ಪ್ರಶ್ನೆ ಎದುರಾಗಿರುವಾಗ, ಕೃಷಿ ಇಲಾಖೆಗೆ ನಾಯಕತ್ವ ಇಲ್ಲವಾಗಿರುವುದು ಆಡಳಿತದ ಆದ್ಯತೆಗಳ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕುತ್ತದೆ ಎಂದು ಅವರು ದೂರಿದ್ದಾರೆ.

ಸಂಕಷ್ಟ ಉಲ್ಬಣಿಸುವ ಮೊದಲೇ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವುದು ಉತ್ತಮ ಆಡಳಿತದ ಲಕ್ಷಣ. ಬರ ಎಂದರೆ ಯಾವುದೇ ಪಕ್ಷದ ಸಮಸ್ಯೆಯಲ್ಲ. ಅದು ರಾಜ್ಯದ ಸಮಸ್ಯೆ. ರೈತರ ಬದುಕು ಮತ್ತು ಗ್ರಾಮೀಣ ಆರ್ಥಿಕತೆಯ ಪ್ರಶ್ನೆಯಲ್ಲಿ ರಾಜಕೀಯಕ್ಕಿಂತ ಜನಹಿತವೇ ಮುಖ್ಯವಾಗಬೇಕು. ಈಗಲಾದರೂ ಪರಿಸ್ಥಿತಿ ಗಂಭೀರತೆ ಅರ್ಥ ಮಾಡಿಕೊಂಡು ತ್ವರಿತ, ಪರಿಣಾಮಕಾರಿ ಹಾಗೂ ಸಮನ್ವಯದ ಕ್ರಮ ಕೈಗೊಂಡರೆ ಮುಂದಿನ ದಿನಗಳಲ್ಲಿ ಎದುರಾಗಬಹುದಾದ ಮಾನವೀಯ ಹಾಗೂ ಆರ್ಥಿಕ ಸಂಕಷ್ಟವನ್ನು ತಡೆಯಲು ಸಾಧ್ಯ ಎಂದು ಅವರು ಸಲಹೆ ನೀಡಿದ್ದಾರೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಜುಲೈ 03 2026, ಶುಕ್ರವಾರ

## ಒಳಪುಟಗಳಲ್ಲಿ

ಅರಿವು ಕೇಂದ್ರಗಳ ಬಲವರ್ಧನೆ, ಕಲೆ-ಸಂಸ್ಕೃತಿ ವಿನಿಮಯಕ್ಕಾಗಿ ಜರ್ಮನ್ ಸಂಸ್ಥೆಯೊಂದಿಗೆ ಒಡಂಬಡಿಕೆ: ಸಚಿವ ಈಶ್ವರ ಖಂಡ್ರೆ - ಪು.5

ವಾರದಲ್ಲಿ 5ನೇ ಬಾರಿಗೆ ಚಾಮರಾಜನಗರ ಜಿಲ್ಲಾ ನ್ಯಾಯಾಲಯಕ್ಕೆ ಬಾಂಬ್ ಬೆದರಿಕೆ - ಪು.6

### ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಾರ್ಯದರ್ಶಿಯಾಗಿ ಜೆ. ಮಂಜುನಾಥ್ ನೇಮಕ



**ಬೆಂಗಳೂರು, ಜು.2:** ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳಾದ ಹಿರಿಯ ಐಎಎಸ್ ಅಧಿಕಾರಿ ಜೆ.ಮಂಜುನಾಥ್ ಅವರಿಗೆ ಹೆಚ್ಚುವರಿಯಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಾರ್ಯದರ್ಶಿಗಳಾಗಿ ನೇಮಿಸಲಾಗಿದೆ.

# ಅಣೆಕಟ್ಟೆ ನಂಬಿ ಬೆಳೆ ಹಾಕಬೇಡಿ: ರೈತರಿಗೆ ಸಿಎಂ ಡಿ.ಕೆ.ಶಿವಕುಮಾರ್ ಕರೆ

**ಬೆಂಗಳೂರು, ಜು.2:** ಈ ವರ್ಷ ದೇಶದಲ್ಲಿ ಭೀಕರ ಬರಗಾಲ ಎದುರಾಗುವ ಮುನ್ಸೂಚನೆ ಇದೆ. ರಾಜ್ಯದ ಬಹುತೇಕ ಅಣೆಕಟ್ಟುಗಳಲ್ಲಿನ ಒಳಹರಿವು ಶೂನ್ಯಕ್ಕೆ ತಲುಪಿದೆ. ಹೀಗಾಗಿ ರೈತರು ಅಣೆಕಟ್ಟು ನೀರು ನಂಬಿಕೊಂಡು ಬೆಳೆ ಹಾಕಬೇಡಿ ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ಕರೆ ನೀಡಿದರು. ವಿಧಾನಸೌಧದಲ್ಲಿ ಗುರುವಾರ ನಡೆದ ಸಚಿವ ಸಂಪುಟ ಸಭೆ ಬಳಿಕ ಶಿವಕುಮಾರ್ ಅವರು ಮಾಧ್ಯಮಗೋಷ್ಠಿ ನಡೆಸಿ ಮಾಹಿತಿ ನೀಡಿದರು.

ರಾಜ್ಯದಲ್ಲಿ ಸದ್ಯ ಬರಗಾಲದ ಆತಂಕ ತೀವ್ರಗೊಳ್ಳುತ್ತಿದೆ. ಕಳೆದ ವರ್ಷಕ್ಕೆ ಹೋಲಿಸಿದರೆ ಈ ಬಾರಿ ಜಲಾಶಯಗಳ ಒಳಹರಿವಿನ ಪ್ರಮಾಣ ಶೂನ್ಯಕ್ಕೆ ತಲುಪಿದೆ. ಕಾವೇರಿ ಕಣಿವೆಯಲ್ಲೂ ನೀರಿನ ಕೊರತೆ ಹೆಚ್ಚಾಗಿದ್ದು, ಕಬಿನಿ ಜಲಾಶಯದಲ್ಲಿ ಹಿಂದೆ 79 ಟಿಎಂಸಿ ಇದ್ದ ನೀರಿನ ಪ್ರಮಾಣವು ಈಗ ಕೇವಲ 26 ಟಿಎಂಸಿಗೆ ಕುಸಿದಿದೆ. ಹೇಮಾವತಿಯಲ್ಲಿ 88ರಿಂದ 40ಕ್ಕೆ, ಕೆಆರ್‌ಎಸ್ 100ರಿಂದ 22ಕ್ಕೆ ಇಳಿಕೆಯಾಗಿದೆ. ಜಲಾಶಯಗಳಲ್ಲಿ ನೀರಿಲ್ಲದ ಕಾರಣ ರೈತರು ಸರ್ಕಾರದ ಮೇಲೆ ನೀರಿಗಾಗಿ ಒತ್ತಡ ಹೇರಬಾರದು. ಮುಂದಿನ ಮಳೆಯ ಮುನ್ಸೂಚನೆಯನ್ನು ಗಮನದಲ್ಲಿಟ್ಟುಕೊಂಡು ರೈತರು ಬೆಳೆಗಳನ್ನು ಹಾಕಬೇಕು. ಕೇಂದ್ರ ಸರ್ಕಾರವೂ ನಮಗೆ ನೀರಿನ ಅಭಾವದ ಮುನ್ಸೂಚನೆ ನೀಡಿದ್ದು, ವಿದ್ಯುತ್ ಅಭಾವ ತಡೆಗಟ್ಟಲು ಕಲ್ಲಿದ್ದಲು ಸಂಗ್ರಹಿಸಿಟ್ಟುಕೊಳ್ಳಲು ಇಲಾಖೆಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

**ಪ್ರಜಾಸೇವೆ ಇಲಾಖೆ ಪ್ರಾರಂಭಕ್ಕೆ ನಿರ್ಧಾರ:** ಜನರ ಕಷ್ಟ ಆಲಿಸಲು ಹೊಸ ಯೋಜನೆ ಸಾರ್ವಜನಿಕರ ಸಮಸ್ಯೆಗಳು, ದೂರುಗಳು ಮತ್ತು ಪ್ರತಿಭಟನೆಗಳನ್ನು ಅತ್ಯಂತ ಜವಾಬ್ದಾರಿಯುತವಾಗಿ ನಿರ್ವಹಿಸುವ ಸಲುವಾಗಿ ಸರ್ಕಾರವು ಹೊಸದಾಗಿ 'ಪ್ರಜಾಸೇವೆ ಇಲಾಖೆ' ಪ್ರಾರಂಭಿಸಲು ಐತಿಹಾಸಿಕ ತೀರ್ಮಾನ ಕೈಗೊಂಡಿದೆ. ಈ ಇಲಾಖೆಯ ನೇರ ಉಸ್ತುವಾರಿಯನ್ನು ಒಬ್ಬ ಸಚಿವರಿಗೆ ವಹಿಸಲಾಗುತ್ತಿದ್ದು, ಒಬ್ಬ ಐಎಎಸ್ ಅಧಿಕಾರಿಯನ್ನು ಇಲಾಖೆಯ ಕಾರ್ಯದರ್ಶಿಯನ್ನಾಗಿ ನೇಮಿಸಲಾಗುವುದು. ರಾಜ್ಯದ ಯಾವುದೇ ಮೂಲೆಯಲ್ಲಿ ಜನರ ಸಮಸ್ಯೆಗಳಿದ್ದರೂ, ಈ ಇಲಾಖೆಯ ಅಧಿಕಾರಿಗಳು ಅರ್ಜಿಗಳನ್ನು ಸ್ವೀಕರಿಸಿ ಕಾನೂನುಬದ್ಧವಾಗಿ ಪರಿಹರಿಸಲಿದ್ದಾರೆ. ಅಲ್ಲದೆ, ಪ್ರತಿ ಜಿಲ್ಲಾ ಉಸ್ತುವಾರಿ ಸಚಿವರು ಕಡ್ಡಾಯವಾಗಿ ತಿಂಗಳಿಗೆ ಎರಡು ಬಾರಿ ತಮ್ಮ ಜಿಲ್ಲೆಯ ವ್ಯಾಪ್ತಿಯ ಎರಡು ವಿಧಾನಸಭಾ ಕ್ಷೇತ್ರಗಳಿಗೆ ಭೇಟಿ ನೀಡಿ 'ಪ್ರಜಾಸೇವೆ ಅಭಿಯಾನ' ನಡೆಸಬೇಕು. ಪ್ರತಿ ತಿಂಗಳ ಮೊದಲ ಶನಿವಾರ ಮತ್ತು ಮೂರನೇ ಶನಿವಾರದಂದು ಈ ಅಭಿಯಾನ ನಡೆಯಲಿದ್ದು, ಎಲ್ಲಾ ಇಲಾಖೆಯ ಕೌಂಟರ್‌ಗಳು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಅಲ್ಲಿ ಹಾಜರಿರಲಿದ್ದಾರೆ. ಜನರು ಬೆಂಗಳೂರಿಗೆ ಬಂದು ಕಾಯುವುದನ್ನು ತಪ್ಪಿಸಿ, ಸರ್ಕಾರವೇ ಜನರ ಮನೆ ಬಾಗಿಲಿಗೆ ಹೋಗಿ ಕಷ್ಟ ಆಲಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.



- ಮೇವು, ಕುಡಿಯುವ ನೀರಿನ ಪೂರೈಕೆಗೆ ಸಕಲ ಸಿದ್ಧತೆ
- ಆಡಳಿತದಲ್ಲಿ ಪಾರದರ್ಶಕತೆ, ಎಸ್‌ಐಆರ್ ಪ್ರಕ್ರಿಯೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ

### ಸಂಪುಟ ಸಭೆ ಪ್ರಮುಖ ನಿರ್ಧಾರಗಳು

- ಬೀಳಗಿ ಏತ ನೀರಾವರಿ ಯೋಜನೆಗೆ 98.50 ಕೋಟಿ ರೂ. ಅನುಮೋದನೆ
- ಕಲಬುರಗಿಯಲ್ಲಿ 1,770 ಕೋಟಿ ರೂ. ವೆಚ್ಚದ ಜವಳಿ ಪಾರ್ಕ್ ನಿರ್ಮಾಣ
- ಬೆಂಗಳೂರಿನ ಎನ್‌ಜಿಇಎಫ್ ಆವರಣದಲ್ಲಿ 60 ಎಕರೆ ಜಮೀನಿನಲ್ಲಿ ಟ್ರೀ ಪಾರ್ಕ್ ನಿರ್ಮಾಣ. ಇಲ್ಲಿ ಕಲ್ಚರಲ್ ಸೆಂಟರ್ ಮತ್ತು ಕ್ರೀಡಾ ಚಟುವಟಿಕೆ ಉತ್ತೇಜಿಸಲು 26 ಕೋಟಿ ರೂ. ಮೀಸಲು
- ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಶೂ, ಬಟ್ಟೆ ಹಾಗೂ ಅಮವಸ್ತ್ರ ಸೇರಿ ಕ್ರೀಡಾ ಸಾಮಗ್ರಿಗಳನ್ನು ಸಕಾಲಕ್ಕೆ ವಿತರಿಸಲು 33 ಕೋಟಿ ರೂ. ವೆಚ್ಚದ ಪ್ರಸ್ತಾವನೆಗೆ ಅನುಮೋದನೆ
- ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಪಕ್ಕದಲ್ಲೇ ಇರುವ ದೇವನಹಳ್ಳಿಯ ಏರೋಸ್ಪೇಸ್ ಪಾರ್ಕ್‌ನಲ್ಲಿ 'ಕಾಮನ್ ಫೆಸಿಲಿಟಿ ಸೆಂಟರ್' ಸ್ಥಾಪನೆ. ಕೆ.ಐ.ಎ.ಡಿ.ಬಿ ವತಿಯಿಂದ ನಿರ್ಮಾಣವಾಗಲಿರುವ ಈ ಯೋಜನೆಗೆ 30 ಕೋಟಿ ರೂ. ಅನುದಾನ
- ವಿಕಲಚೇತನರಿಗೆ ಜಮೀನು ಹಂಚಿಕೆಯಲ್ಲಿ ರಿಯಾಯಿತಿ. ಕೆ.ಐ.ಎ.ಡಿ.ಬಿ ಭೂಮಿ ಮಂಜೂರಾತಿಯಲ್ಲಿ 5% ಮೀಸಲಾತಿ ನೀಡಲಾಗುತ್ತಿದ್ದು, ಈಗ ಅದರ ದರ ನಿಗದಿಯಲ್ಲಿಯೂ ವಿನಾಯಿತಿ
- ಪಾದಚಾರಿ ರಸ್ತೆಗಳಲ್ಲಿ ವ್ಯಾಪಾರ ನಿರ್ಬಂಧ. ಬೀದಿಬದಿ ವ್ಯಾಪಾರಿಗಳನ್ನು ರಸ್ತೆಯ ಪಕ್ಕದ ನಿಗದಿತ ಜಾಗಗಳಿಗೆ ಸ್ಥಳಾಂತರಿಸಲು ಸಾಮೂಹಿಕ ನಿರ್ಧಾರ ಕೈಗೊಳ್ಳಲಾಗಿದೆ. ಈಗಾಗಲೇ ರಾಜ್ಯದಲ್ಲಿ ಸುಮಾರು 60,000 ಜನರ ಸರ್ವೇ ಮಾಡಲಾಗಿದ್ದು, ಅದರಲ್ಲಿ 37,000 ಕ್ಕೂ ಹೆಚ್ಚು ಜನರು ವೆಂಡಿಂಗ್ ಮೆಷಿನ್‌ಗಳಿಗಾಗಿ ಅರ್ಜಿ ಸಲ್ಲಿಸಿದ್ದಾರೆ. ಈ ಯೋಜನೆಯಡಿ ಬೀದಿ ಬದಿ ವ್ಯಾಪಾರಿಗಳ ಕಲ್ಯಾಣಕ್ಕಾಗಿ ಸರ್ಕಾರದಿಂದ 50 ರಿಂದ 60 ಕೋಟಿ ರೂ. ಅನುದಾನ ಲಭ್ಯವಿದ್ದು, ಸೂಕ್ತ ಸಬ್ಸಿಡಿಯನ್ನೂ ಒದಗಿಸಲಾಗುವುದು
- ರಾಜ್ಯದಲ್ಲಿ ಅಂಧತ್ವ ನಿವಾರಣೆ ಹಾಗೂ ಸಣ್ಣ ವಯಸ್ಸಿನ ಮಕ್ಕಳಲ್ಲಿ ಕಂಡುಬರುವ ದೃಷ್ಟಿ ದೋಷಗಳನ್ನು ಸರಿಪಡಿಸುವ ನಿಟ್ಟಿನಲ್ಲಿ 'ಹಾರೈಕೆ' ಸೇವೆಯನ್ನು ಬಲಪಡಿಸಲು 26 ಕೋಟಿ ರೂ. ಅನುದಾನಕ್ಕೆ ಅನುಮೋದನೆ

### ಎಸ್‌ಐಆರ್ ಪ್ರಕ್ರಿಯೆ ಮುಗಿದ ಬಳಿಕ ಮುಂಗಾರು ಅಧಿವೇಶನ

ಈ ವರ್ಷ ಮುಂಗಾರು ಅಧಿವೇಶನ ಕರೆಯಬೇಕಾಗಿತ್ತು. ಸದ್ಯಕ್ಕೆ ಎಸ್‌ಐಆರ್ ನಡೆಯುತ್ತಿರುವ ಹಿನ್ನೆಲೆಯಲ್ಲಿ ಈ ಪ್ರಕ್ರಿಯೆ ಮುಗಿಯುವವರೆಗೂ ಕಾಯಲು ತೀರ್ಮಾನಿಸಲಾಗಿದೆ. ಎಲ್ಲಾ ಶಾಸಕರು ತಮ್ಮ ಕ್ಷೇತ್ರದ ಮತದಾರರ ರಕ್ಷಣೆ ಮಾಡಿಕೊಳ್ಳಬೇಕಾಗಿದೆ. ಅವರಿಗೆ ತೊಂದರೆ ಆಗುವುದು ಬೇಡ ಎಂದು ತೀರ್ಮಾನಿಸಿದ್ದು, ಆಗಸ್ಟ್ 5ರಂದು ಕರಡು ಮತದಾರರಪಟ್ಟಿ ಬಿಡುಗಡೆ ಮಾಡಲಿದ್ದು, ಅದಾದ ನಂತರ ಮೊದಲ ಅಥವಾ ಎರಡನೇ ವಾರದಲ್ಲಿ ಅಧಿವೇಶನದ ದಿನಾಂಕ ನಿಗದಿ ಮಾಡಲಾಗುವುದು ಎಂದು ಮಾಹಿತಿ ನೀಡಿದರು. ಬಿಎಲ್‌ಒಗಳು ಕಡ್ಡಾಯವಾಗಿ ಮನೆ ಮನೆಗೆ ಹೋಗಿ ಎಸ್‌ಐಆರ್ ಅರ್ಜಿಗಳನ್ನು ನೀಡಬೇಕು. ಯಾವುದೇ ಕಲ್ಯಾಣ ಮಂಟಪಗಳಲ್ಲಿ ಕುಳಿತು ಈ ಪ್ರಕ್ರಿಯೆ ಮಾಡುವುದು ಅಪರಾಧವಾಗಲಿದ್ದು, ಈ ಕುರಿತು ಜುಲೈ 29ರವರೆಗೆ ನೋಂದಣಿಗೆ ಕಟ್ಟುನಿಟ್ಟಿನ ಸಮಯಾವಕಾಶ ನೀಡಲಾಗಿದೆ ಎಂದರು.

### ಒ.ಸಿ. - ಸಿ.ಸಿಗೆ ದಾಖಲೆ ಸಲ್ಲಿಸಲು ಆ.15 ಕೊನೆಯದಿನ

ರಾಜ್ಯದ ಕಟ್ಟಡಗಳ ಒ.ಸಿ., ಸಿ.ಸಿ. ಪಡೆಯಲು ದಾಖಲೆ ಸಲ್ಲಿಸಲು ಆಗಸ್ಟ್ 15 ಕೊನೆ ದಿನವಾಗಿದೆ. ಗುರುವಾರ ನಡೆದ ಸಂಪುಟ ಸಭೆಯಲ್ಲಿ ಒಸಿ, ಸಿಸಿಗೆ ದಾಖಲೆ ಸಲ್ಲಿಸುವ ಅವಧಿ ವಿಸ್ತರಿಸಿ ತೀರ್ಮಾನ ಕೈಗೊಳ್ಳಲಾಗಿದೆ. ಬಿಲ್ಡಿಂಗ್‌ಗಳ ಓನರ್‌ಶಿಪ್ ಸರ್ಟಿಫಿಕೇಟ್ ಮತ್ತು ಕಂಪ್ಲೀಷನ್ ಸರ್ಟಿಫಿಕೇಟ್ ನಿಯಮಗಳ ಕುರಿತು ಈ ಹಿಂದೆ ಸರ್ಕಾರ ತಿಳಿಸಿತ್ತು. ಈ ವಿಷಯದಲ್ಲಿ ಹಳ್ಳಿಗಳಿಂದಲೂ ಸರ್ಕಾರಕ್ಕೆ ಒತ್ತಡ ಇತ್ತು. ಸಾರ್ವಜನಿಕರ ಹಿತದೃಷ್ಟಿಯಿಂದ ಈಗ ಇದರ ಅವಧಿಯನ್ನು ವಿಸ್ತರಣೆ ಮಾಡಲಾಗಿದೆ. ಈ ಸೌಲಭ್ಯವು ಕೇವಲ ವಸತಿ ಕಟ್ಟಡಗಳಿಗೆ ಮಾತ್ರ ಅನ್ವಯಿಸಲಿದೆ ಎಂದು ಡಿ.ಕೆ. ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ.

## ಪರಿಷತ್‌ನ 7 ನೂತನ ಸದಸ್ಯರಿಂದ ಪ್ರಮಾಣವಚನ ಸ್ವೀಕಾರ



**ಬೆಂಗಳೂರು, ಜು.2:** ಇತ್ತೀಚೆಗೆ ನಡೆದ ವಿಧಾನ ಪರಿಷತ್ ಚುನಾವಣೆಯಲ್ಲಿ ಆಯ್ಕೆಯಾದ ನೂತನ ಸದಸ್ಯರಿಗೆ ವಿಧಾನಸೌಧದ ಬಾಂಕ್ವೆಟ್ ಹಾಲ್‌ನಲ್ಲಿ ಗುರುವಾರ ನಡೆದ ಸಮಾರಂಭದಲ್ಲಿ ಮೇಲ್ಮನೆ ಸಭಾಪತಿ ಬಸವರಾಜ ಹೊರಟ್ಟಿ ಪ್ರಮಾಣವಚನ ಬೋಧಿಸಿದರು. ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಜಿ. ಪರಮೇಶ್ವರ್, ಮೇಲ್ಮನೆ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ವಿಧಾನಸಭೆ ಸಭಾಧ್ಯಕ್ಷ ರುದ್ರಪ್ಪ ಲಮಾಣಿ ಹಾಗೂ ಪರಿಷತ್ ಸದಸ್ಯ ಸಲೀಂ ಅಹಮದ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದು ನೂತನ ಸದಸ್ಯರನ್ನು ಅಭಿನಂದಿಸಿದರು. ಕ್ರಮವಾಗಿ ಬಿ.ಕೆ. ಹರಿಪ್ರಸಾದ್, ತಿಪ್ಪಣ್ಣಪ್ಪ ಕಮಕನೂರ, ವಿನಯ್ ಕಾರ್ತಿಕ್, ಮಳವಳ್ಳಿ ಶಿವಣ್ಣ, ಬಿಜೆಪಿ ಸದಸ್ಯ ರಘು ಕೌಟಿಲ್ಯ, ಪಿ.ವಿ. ಮೋಹನ್ ಪ್ರಮಾಣ ವಚನ ಸ್ವೀಕರಿಸಿದರು. ಸಿಎಂ ಡಿ ಕೆ ಶಿವಕುಮಾರ್, ಡಿಸಿಎಂ ಪರಮೇಶ್ವರ್, ವಿಧಾನ ಪರಿಷತ್ ಸಭಾಪತಿಗಳಾದ ಬಸವರಾಜ ಹೊರಟ್ಟಿ, ವಿಧಾನಸಭೆ ಉಪಸಭಾಧ್ಯಕ್ಷರಾದ ರುದ್ರಪ್ಪ ಲಮಾಣಿ ಅವರು ಇದ್ದರು.

## ಈಶಾನ್ಯ ರಾಜ್ಯಗಳಲ್ಲಿ ಭೂಕುಸಿತ, ಪುನರ್ವಸತಿ, ಪರಿಹಾರ ಕಾರ್ಯ ಚುರುಕುಗೊಳಿಸಿ: ಖರ್ಗೆ



**ನವದೆಹಲಿ, ಜು.2:** ಹಲವಾರು ಈಶಾನ್ಯ ರಾಜ್ಯಗಳಲ್ಲಿ ಪ್ರವಾಹ ಮತ್ತು ಭೂಕುಸಿತದಿಂದ ಉಂಟಾದ ವಿನಾಶದ ಬಗ್ಗೆ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಗುರುವಾರ ದುಃಖ ವ್ಯಕ್ತಪಡಿಸಿದ್ದಾರೆ, ಪರಿಹಾರ ಮತ್ತು ಪುನರ್ವಸತಿ ಪ್ರಯತ್ನಗಳನ್ನು ತೀವ್ರಗೊಳಿಸುವಂತೆ ಕೇಂದ್ರವನ್ನು ಒತ್ತಾಯಿಸಿದ್ದಾರೆ ಮತ್ತು ಪೀಡಿತ ಕುಟುಂಬಗಳನ್ನು ಬೆಂಬಲಿಸಲು ಪಿಎಂ ಕೇರ್ ನಿದಿ ಬಳಸಿಕೊಳ್ಳುವಂತೆ ಕರೆ ನೀಡಿದ್ದಾರೆ.

ಅರುಣಾಚಲ ಪ್ರದೇಶ, ಅಸ್ಸಾಂ, ಮೇಘಾಲಯ ಮತ್ತು ಸಿಕ್ಕಿಂನಲ್ಲಿನ ಪ್ರವಾಹ ಮತ್ತು ಭೂಕುಸಿತಗಳು ಅಮೂಲ್ಯ ಜೀವಗಳನ್ನು ಬಲಿತೆಗೆದುಕೊಂಡಿವೆ ಮತ್ತು ಸಾವಿರಾರು ಕುಟುಂಬಗಳನ್ನು ಸ್ಥಳಾಂತರಗೊಳಿಸಿವೆ, ಇದರಿಂದಾಗಿ ಪ್ರದೇಶದಾದ್ಯಂತ ವ್ಯಾಪಕ ಹಾನಿಯಾಗಿದೆ ಎಂದು ಖರ್ಗೆ ಹೇಳಿದ್ದಾರೆ.

ದುರಂತದಿಂದ ಪೀಡಿತರಾದ ಪ್ರತಿಯೊಬ್ಬರೊಂದಿಗೂ ಬೆಂಬಲವಾಗಿ ನಿಲ್ಲಲಿದ್ದೇವೆ ಎಂದಿದ್ದಾರೆ.

ಈ ವಿಪತ್ತನ್ನು ನಿಯಮಿತ ವಾರ್ಷಿಕ ಘಟನೆಯಾಗಿ ಪರಿಗಣಿಸಬೇಡಿ ಎಂದು ಖರ್ಗೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದರು ಮತ್ತು ತಕ್ಷಣದ ಆರ್ಥಿಕ ನೆರವು ಮತ್ತು ದೀರ್ಘಾವಧಿಯ ಪುನರ್ವಸತಿ ಕ್ರಮಗಳನ್ನು ಒತ್ತಾಯಿಸಿದರು.

## ವಿಬಿ ಜಿ-ರಾಮ್ ಜಿಯಿಂದ ರಾಜ್ಯಕ್ಕೆ ಹೊರೆಯಾದರೂ ಬಡವರ ಹಿತ ಕಾಯಲು ಸರ್ಕಾರ ಬದ್ಧ: ಖಂಡ್ರೆ ಇ



**ಬೆಂಗಳೂರು, ಜು.2:** ಮನರೇಗಾದ ಬದಲಾದ ರೂಪ ವಿಬಿ ಜಿ ರಾಮ್ ಜಿಯ ಬಗ್ಗೆ ಆಕ್ಷೇಪಣೆಯೊಂದಿಗೆ ರಾಜ್ಯ ಸರ್ಕಾರ ನಿನ್ನೆಯಿಂದಲೇ ಜಾರಿಗೆ ತಂದಿದ್ದು, ಇಂದೇ ಆದೇಶ ಹೊರಬೀಳಲಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.

ವಿಕಾಸಸೌಧದ ತಮ್ಮ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಇಂದು ಸಚಿವ ಸಂಪುಟ ಸಭೆಯಲ್ಲಿ ವಿಬಿಜಿ ರಾಮ್ ಜಿಗೆ ರಾಜ್ಯದ ಪಾಲು ಭರಿಸುವ ಬಗ್ಗೆ ಚರ್ಚಿಸಿದ್ದು, ರಾಜ್ಯ ಸರ್ಕಾರದ ಮೇಲೆ 6 ಪಟ್ಟು ಹೆಚ್ಚಿನ ಹೊರೆ ಬೀಳುತ್ತದೆ ಆದರೂ ಬಡವರ, ದಲಿತರ, ವಂಚಿತರ, ರೈತರ, ಮಹಿಳೆಯರ ಹಿತ ಕಾಯಲು ಯೋಜನೆ ಜಾರಿಗೆ ನಿರ್ಧರಿಸಿದ್ದು, ಇಂದೇ ಅಧಿಸೂಚನೆ ಹೊರಬೀಳಲಿದೆ ಎಂದರು.

ಕೇಂದ್ರ ಸರ್ಕಾರ ಈ ವರ್ಷ ರಾಜ್ಯಕ್ಕೆ ವಿಬಿಜಿ ರಾಮ್ ಜಿ ಅಡಿ 5709 ಕೋಟಿ ರೂ. ಹಂಚಿಕೆ ಮಾಡಿದೆ. ರಾಜ್ಯ ಸರ್ಕಾರ ಒಂದೇ ವರ್ಷದಲ್ಲಿ 3806 ಕೋಟಿ ವೆಚ್ಚ ಮಾಡಬೇಕಾಗಿ ಬಂದಿದೆ ಇದು ದೊಡ್ಡ ಹೊರೆಯಾಗಿದೆ. ಹೀಗಾಗಿ ಈ ಹಿಂದೆ ಇದ್ದಂತೆ 90:10 ಅನುಪಾತವನ್ನೇ ಮುಂದುವರಿಸಲು ಕೇಂದ್ರಕ್ಕೆ ಒತ್ತಾಯಿಸಲಾಗಿದೆ ಎಂದು ತಿಳಿಸಿದರು. ಇದರ ಜೊತೆಗೆ ಸುಗ್ಗಿಯ ಕಾಲದಲ್ಲಿ ಕೇಂದ್ರ ಸರ್ಕಾರ ವಿಬಿಜಿ ರಾಮ್ ಜಿ ಅಡಿ 60 ದಿನಗಳ ಬಿಡುವು ನೀಡಿದೆ. ಜುಲೈ 1ರಿಂದ ಯೋಜನೆ ಜಾರಿಯಾಗಿದೆ.

ಈ 2 ತಿಂಗಳ ಬಿಡುವಿನ ಅವಧಿ ತೆಗೆದರೆ, ಈಗ ಒಟ್ಟು ಉಳಿಯುವುದು ಕೇವಲ 9 ತಿಂಗಳು. ಈ ಅವಧಿಯಲ್ಲಿ ಯಾವುದೇ ರಾಜ್ಯ ತನ್ನ ಪಾಲಿನ ಶೇ.40ರಷ್ಟು ಹಣ ಭರಿಸಲು ಸಾಧ್ಯವಾಗದಿದ್ದರೆ ಕೇಂದ್ರದ ಪಾಲು ಬರುವುದೇ ಇಲ್ಲ. ಇದು ಯೋಜನೆಯ ಮೂಲ ಉದ್ದೇಶವನ್ನೇ ನಾಶ ಮಾಡುತ್ತದೆ. ಆದ್ದರಿಂದ ಎಲ್ಲ ರಾಜ್ಯಗಳಿಗೆ ತಮ್ಮ ಆಯ್ಕೆಯಂತೆ ಕಾಮಗಾರಿಗಳನ್ನು ನಡೆಸಲು ಅವಕಾಶ ನೀಡಬೇಕು ಎಂಬುದು ರಾಜ್ಯದ ನಿಲುವಾಗಿದೆ ಎಂದರು.

### ಇಂದು ದೆಹಲಿಗೆ

ದೆಹಲಿಯಲ್ಲಿ ಜು.3ರಂದು ನಡೆಯಲಿರುವ ಎಲ್ಲ ರಾಜ್ಯಗಳ ಪಂಚಾಯತ್ ರಾಜ್ ಸಚಿವರ ಸಭೆಯಲ್ಲಿ ಪಾಲ್ಗೊಳ್ಳುತ್ತಿರುವುದಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ. ಇದರಲ್ಲಿ 16ನೇ ಹಣಕಾಸು ಆಯೋಗದ ಶಿಫಾರಸುಗಳ ಅನುಷ್ಠಾನ, ಮಾರ್ಗಸೂಚಿಗಳ ಬಗ್ಗೆ ಚರ್ಚೆ ಆಗಲಿದೆ. ಕರ್ನಾಟಕಕ್ಕೆ 15ನೇ ಹಣಕಾಸು ಆಯೋಗದಲ್ಲಿ ಭಾರೀ ಅನ್ಯಾಯವಾಗಿದೆ. 2025–26ನೇ ಸಾಲಿಗೆ 15ನೇ ಹಣಕಾಸು ಆಯೋಗದ ಅನುದಾನ ರೂ. 2186 ಕೋಟಿ ರೂ. ಬಾಕಿ ಬರಬೇಕಾಗಿದೆ. ಇದನ್ನು ವಿನಾಕಾರಣ ಕೇಂದ್ರ ತಡೆಹಿಡಿದಿದೆ. ಈ ಬಗ್ಗೆಯೂ ಸಭೆಯಲ್ಲಿ ಚರ್ಚಿಸಲಾಗುವುದು ಎಂದು ಈಶ್ವರ ಖಂಡ್ರೆ ತಿಳಿಸಿದರು.

## 30 ದಿನ ಜೈಲಿನಲ್ಲಿದ್ದರೆ ಸ್ವಯಂಚಾಲಿತವಾಗಿ ತೆರವಾಗಲಿದೆ ಪ್ರಧಾನಿ, ಮುಖ್ಯಮಂತ್ರಿ ಹುದ್ದೆ: ಸಂಸತ್ತಿನಲ್ಲಿ ಮಸೂದೆ ಮಂಡನೆ ಸಾಧ್ಯತೆ

**ನವದೆಹಲಿ, ಜು.2:** ಪ್ರಧಾನಿ, ಮುಖ್ಯಮಂತ್ರಿ ಹಾಗೂ ಸಚಿವರು ಗಂಭೀರ ಅಪರಾಧ ಪ್ರಕರಣದಲ್ಲಿ ಬಂಧಿತರಾಗಿ ಸತತ 30 ದಿನಗಳ ಕಾಲ ನ್ಯಾಯಾಂಗ ಬಂಧನದಲ್ಲಿದ್ದರೆ ಅವರ ಹುದ್ದೆ ಸ್ವಯಂಚಾಲಿತವಾಗಿ ಖಾಲಿಯಾಗುವಂತೆ ಮಾಡುವ ಮಹತ್ವದ ಸಂವಿಧಾನದ 130ನೇ ತಿದ್ದುಪಡಿ ಮಸೂದೆ–2025 ಮುಂಬರುವ ಸಂಸತ್ತಿನ ಮಳೆಗಾಲದ ಅಧಿವೇಶನದಲ್ಲಿ ಮತ್ತೆ ಮಂಡನೆಯಾಗುವ ಸಾಧ್ಯತೆ ಹೆಚ್ಚಿದೆ.

ಈ ಮಸೂದೆಯನ್ನು ಪರಿಶೀಲಿಸುತ್ತಿರುವ ಜಂಟಿ ಸಂಸದೀಯ ಸಮಿತಿ ಜುಲೈ 17ರಂದು ತನ್ನ ವರದಿಯನ್ನು ಅಂಗೀಕರಿಸುವ ನಿರೀಕ್ಷೆಯಿದ್ದು, ನಂತರ ಸರ್ಕಾರ ಅದನ್ನು ಸಂಸತ್ತಿನಲ್ಲಿ ಮಂಡಿಸಲು ಸಜ್ಜಾಗಿದೆ.

ಮಸೂದೆಯ ಪ್ರಕಾರ, ಪ್ರಧಾನಿ, ಮುಖ್ಯಮಂತ್ರಿ ಅಥವಾ ಯಾವುದೇ ಕೇಂದ್ರ ಹಾಗೂ ರಾಜ್ಯ ಸಚಿವರು ಐದು ವರ್ಷ ಅಥವಾ ಅದಕ್ಕಿಂತ ಹೆಚ್ಚಿನ ಶಿಕ್ಷೆಗೆ ಒಳಪಡುವ ಗಂಭೀರ ಅಪರಾಧ ಪ್ರಕರಣದಲ್ಲಿ ಬಂಧಿತರಾಗಿ ಜಾಮೀನು ಸಿಗದೇ 30 ದಿನಗಳಿಗಿಂತ ಹೆಚ್ಚು ಕಾಲ ನ್ಯಾಯಾಂಗ ಬಂಧನದಲ್ಲಿದ್ದರೆ, ಅವರ ಹುದ್ದೆ ಸ್ವಯಂಚಾಲಿತವಾಗಿ ತೆರವಾಗಲಿದೆ. ಬಳಿಕ ಅವರು ಬಂಧನದಿಂದ ಬಿಡುಗಡೆಯಾದ ನಂತರ ಮರುನೇಮಕಾತಿಗೆ ಅವಕಾಶವಿರಲಿದೆ.

**ಸಾಂವಿಧಾನಿಕ ಹುದ್ದೆಯ ಗೌರವ ಕಾಪಾಡುವುದು, ಆಡಳಿತದಲ್ಲಿ ಪಾರದರ್ಶಕತೆ ಹೆಚ್ಚಿಸುವುದು ಕೇಂದ್ರ ಸರ್ಕಾರದ ಉದ್ದೇಶ**

ಕೇಂದ್ರ ಸರ್ಕಾರದ ವಾದದಂತೆ, ಈ ಕಾನೂನಿನ ಉದ್ದೇಶ ಉನ್ನತ ಸಾಂವಿಧಾನಿಕ ಹುದ್ದೆಗಳ ಗೌರವವನ್ನು ಕಾಪಾಡುವುದು, ಆಡಳಿತದಲ್ಲಿ ಪಾರದರ್ಶಕತೆ ಹೆಚ್ಚಿಸುವುದು ಹಾಗೂ ಜನರ ವಿಶ್ವಾಸವನ್ನು ಬಲಪಡಿಸುವುದಾಗಿದೆ. ಅಧಿಕಾರದಲ್ಲಿರುವವರು ಗಂಭೀರ ಆರೋಪದ ಹಿನ್ನೆಲೆಯಲ್ಲಿ ದೀರ್ಘಕಾಲ ಬಂಧನದಲ್ಲಿದ್ದರೂ ಹುದ್ದೆಯಲ್ಲಿ ಮುಂದುವರಿಯುವುದು ಸಾರ್ವಜನಿಕ ವಿಶ್ವಾಸಕ್ಕೆ ಧಕ್ಕೆ ತರುತ್ತದೆ ಎಂಬುದು ಸರ್ಕಾರದ ಅಭಿಪ್ರಾಯವಾಗಿದೆ.

ಆದರೆ, ವಿರೋಧ ಪಕ್ಷಗಳು ಈ ಮಸೂದೆಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿವೆ. ನ್ಯಾಯಾಲಯದಲ್ಲಿ ಅಪರಾಧ ಸಾಬೀತಾಗುವವರೆಗೆ ವ್ಯಕ್ತಿಯನ್ನು ನಿರಪರಾಧಿಯೆಂದು ಪರಿಗಣಿಸುವ ಸಾಂವಿಧಾನಿಕ ತತ್ವಕ್ಕೆ ಇದು ವಿರುದ್ಧವಾಗಿದ್ದು, ರಾಜಕೀಯ ದುರುಪಯೋಗಕ್ಕೂ ಅವಕಾಶ ಕಲ್ಪಿಸಬಹುದು ಎಂದು ಅವು ವಾದಿಸಿವೆ. ಇದೇ ಕಾರಣದಿಂದ ಕಾಂಗ್ರೆಸ್ ನೇತೃತ್ವದ ವಿರೋಧ ಪಕ್ಷಗಳು ಜಂಟಿ ಸಂಸದೀಯ ಸಮಿತಿಯ ಕಾರ್ಯವಿಧಾನವನ್ನು ಬಹಿಷ್ಕರಿಸಿದ್ದವು.

31 ಸದಸ್ಯರ ಜಂಟಿ ಸಂಸದೀಯ ಸಮಿತಿಯ ಅಧ್ಯಕ್ಷತೆಯನ್ನು ಬಿಜೆಪಿ ಸಂಸದೆ ಅಪರಾಜಿತಾ ಸಾರಂಗಿ ವಹಿಸಿದ್ದು, ಸಮಿತಿಯ ವರದಿ ಮಳೆಗಾಲದ ಅಧಿವೇಶನಕ್ಕೂ ಮುನ್ನ ಅಂತಿಮಗೊಳ್ಳಲಿದೆ. ಜುಲೈ 20ರಂದು ಆರಂಭವಾಗುವ ನಿರೀಕ್ಷೆಯಿರುವ ಸಂಸತ್ ಅಧಿವೇಶನದಲ್ಲಿ ಈ ಮಸೂದೆ ಸರ್ಕಾರದ ಪ್ರಮುಖ ಶಾಸನಾತ್ಮಕ ಆದ್ಯತೆಗಳಲ್ಲಿ ಒಂದಾಗಿದ್ದು, ಮಹಿಳಾ ಮೀಸಲಾತಿ ಮಸೂದೆ ಸೇರಿದಂತೆ ಕೆಲ ಮಹತ್ವದ ಮಸೂದೆಗಳನ್ನೂ ಮಂಡಿಸಲು ಸರ್ಕಾರ ಸಿದ್ಧತೆ ನಡೆಸಿದೆ.

# ಗರೀಬ್ ಕಲ್ಯಾಣ್ ಅನ್ನ ಯೋಜನೆಗೆ ಉತ್ಕೃಷ್ಠ ಗುಣಮಟ್ಟದ ಅಕ್ಕಿ: ಕೇಂದ್ರ ಸಚಿವ ಪ್ರಲ್ಹಾದ ಜೋಶಿ

**ನವದೆಹಲಿ, ಜು.2:** ದೇಶದ ಆಹಾರ ಭದ್ರತಾ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಕೇಂದ್ರ ಬಿಜೆಪಿ ಸರ್ಕಾರ ಐತಿಹಾಸಿಕ ನಿರ್ಧಾರ ಕೈಗೊಂಡಿದೆ. ದೇಶಾದ್ಯಂತ 80 ಕೋಟಿಗೂ ಹೆಚ್ಚು ಅರ್ಹ ಫಲಾನುಭವಿಗಳಿಗೆ ಶ್ರೇಷ್ಠ ಗುಣಮಟ್ಟದ ಆಹಾರ ಧಾನ್ಯ ವಿತರಿಸುವ ನಿಟ್ಟಿನಲ್ಲಿ ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಅವರು ಮಹತ್ತರ ಬದಲಾವಣೆಗೆ ನಾಂದಿ ಹಾಡಿದ್ದು, ಇದೀಗ ಕೇಂದ್ರ ಸಚಿವ ಸಂಪುಟ ಗೌರವಯುತ ಆಹಾರ ಪೂರೈಕೆಗೆ ಅನುಮೋದನೆ ನೀಡಿದೆ.

ಪಡಿತರದಾರರಿಗೆ ಪ್ರಧಾನಮಂತ್ರಿ ಗರೀಬ್ ಕಲ್ಯಾಣ್ ಅನ್ನ ಯೋಜನೆ ಅಕ್ಕಿ ವಿತರಣೆಯಲ್ಲಿ ಈ ಮೊದಲಿನಷ್ಟೇ ಆಹಾರ ಪ್ರಮಾಣವನ್ನು ಕಾಯ್ದುಕೊಳ್ಳುವುದರ ಜತೆಗೆ ಅಕ್ಕಿಯ ಗುಣಮಟ್ಟವನ್ನು ಶ್ರೇಷ್ಠಗೊಳಿಸುವಲ್ಲಿ ಸಚಿವ ಜೋಶಿ ಆದ್ಯತೆ ನೀಡಿದ್ದಾರೆ. ನುಚ್ಚಿನಪ್ರಮಾಣವನ್ನು ಗರಿಷ್ಠ ಪ್ರಮಾಣದಲ್ಲಿ ಕಡಿತಗೊಳಿಸಿದ್ದಾರೆ.

ರಾ ರೈಸ್‌ನಲ್ಲಿ ಈ ಮೊದಲು ಇದ್ದ ಶೇ.25ರಷ್ಟು ನುಚ್ಚಿನಪ್ರಮಾಣವನ್ನು ಶೇ.10ಕ್ಕೆ ಇಳಿಸಿದ್ದು, ಶೇ.15ರಷ್ಟು ನುಚ್ಚಿನಪ್ರಮಾಣ ಕಡಿತಗೊಳಿಸಲಾಗಿದೆ. ಅಲ್ಲದೇ

**ಪಡಿತರದಾರರಿಗೆ ವಿತರಿಸುವ ಅಕ್ಕಿಯಲ್ಲಿ ನುಚ್ಚಿನ ಪ್ರಮಾಣ ಕಡಿತ**



ಬೇಯಿಸಿದ ಅಕ್ಕಿಯಲ್ಲಿ ಈ ಮೊದಲಿದ್ದ ಶೇ.16ರಷ್ಟು ನುಚ್ಚಿನ ಪ್ರಮಾಣವನ್ನ ಇದೀಗ ಶೇ.5ಕ್ಕೆ ಇಳಿಸಲು ಕ್ರಮ ವಹಿಸಲಾಗಿದೆ. ಈ ಮೂಲಕ ಅತ್ಯಂತ ಶ್ರೇಷ್ಠ ಗುಣಮಟ್ಟದ ಹಾಗೂ ಗಟ್ಟಿತನದ ಅಕ್ಕಿ ಪೂರೈಕೆಗೆ ಕೇಂದ್ರ ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಪ್ರಲ್ಹಾದ ಜೋಶಿ ಮುಂದಾಗಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿ ನಾಯಕತ್ವದಲ್ಲಿ ಕಳೆದ ಮೂರು ದಶಕಗಳಲ್ಲಿ ಇದೇ ಮೊದಲ ಬಾರಿ "ಪ್ರಧಾನಮಂತ್ರಿ ಗರೀಬ್ ಕಲ್ಯಾಣ ಅನ್ನ ಯೋಜನೆ" ಅಕ್ಕಿ ವಿತರಣೆಯಲ್ಲಿ ಶ್ರೇಷ್ಠ ಗುಣಮಟ್ಟ ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಮಾನದಂಡಗಳನ್ನು ರೂಪಿಸಲಾಗಿದೆ. ಈ ಮೂಲಕ ದೇಶದ 80 ಕೋಟಿಗೂ ಅಧಿಕ ಫಲಾನುಭವಿಗಳಿಗೆ ಗೌರವಯುತವಾಗಿ ಉತ್ತಮ ಗುಣಮಟ್ಟ ಮತ್ತು ಪೌಷ್ಟಿಕಯುತ ಆಹಾರ ದೊರೆಯುವಂತೆ ಕೇಂದ್ರ ಸರ್ಕಾರ ಅಗತ್ಯ ಕ್ರಮ ತೆಗೆದುಕೊಂಡಿದೆ.

**ನುಚ್ಚು ಪಶು ಆಹಾರಕ್ಕೆ ಬಳಕೆ:** ಪಡಿತರ ಧಾನ್ಯದಲ್ಲಿ ಶೇ.90ರಿಂದ ಶೇ.95ರಷ್ಟು ಗುಣಮಟ್ಟ ಕಾಪಾಡಿಕೊಂಡು ಬಳಿಕ ಉಳಿದ ನುಚ್ಚಕ್ಕಿಯನ್ನು ಆಹಾರ ಸಂಸ್ಕರಣೆ ಮತ್ತು ಪಶು ಆಹಾರಕ್ಕಾಗಿ ಸದ್ಬಳಕೆ ಮಾಡಿಕೊಳ್ಳಲಾಗುತ್ತಿದೆ. ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಹ್ಲಾದ ಜೋಶಿ ಅವರ ಮಹತ್ವಾಕಾಂಕ್ಷೆಯಂತೆ ಹೀಗೆ ಶೂನ್ಯ ಪೋಲು, ಸಂಪನ್ಮೂಲಗಳ ಗರಿಷ್ಠ ಬಳಕೆ, ಬಡವರ ಗೌರವಯುತ ಬದುಕಿಗೆ ಗುಣಮಟ್ಟದ ಆಹಾರ ಭದ್ರತೆ ಒದಗಿಸುವಲ್ಲಿ ಕೇಂದ್ರ ಸರ್ಕಾರ ಮಹತ್ವದ ಹೆಜ್ಜೆಯಿಟ್ಟಿದೆ.

### ಸರ್ಕಾರಕ್ಕೆ ವಾರ್ಷಿಕ 2,161 ಕೋಟಿ ರೂ. ಉಳಿತಾಯ

ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಅವರ ಈ ಮಹತ್ವಾಕಾಂಕ್ಷೆ ಕೇವಲ ಅಕ್ಕಿಯ ಗುಣಮಟ್ಟದ ಸುಧಾರಣೆಯಷ್ಟೇ ಅಲ್ಲ, ಬದಲಿಗೆ ಸಾರ್ವಜನಿಕ ವಿತರಣಾ ವ್ಯವಸ್ಥೆಯ (PDS) ಸಂಪೂರ್ಣ ರೂಪಾಂತರಕ್ಕೆ ಸಾಕ್ಷಿಯಾಗಲಿದೆ. ಹೆಚ್ಚಿನ ಪಾರದರ್ಶಕತೆ ಮತ್ತು ದಾಸ್ತಾನು ನಿರ್ವಹಣೆ, ಕಡಿಮೆಯಾದ ಲಾಜಿಸ್ಟಿಕ್ಸ್ ಮತ್ತು ಆಡಳಿತಾತ್ಮಕ ವೆಚ್ಚಗಳ ಮೂಲಕ ವಾರ್ಷಿಕ ಸುಮಾರು 2,161 ಕೋಟಿ ವೆಚ್ಚ ಉಳಿತಾಯವಾಗಲಿದೆ. ಪ್ರತಿ ಧಾನ್ಯದ ಸದ್ಬಳಕೆ, ಪ್ರತಿಯೊಂದು ಕುಟುಂಬಕ್ಕೂ ಆಹಾರ ಭದ್ರತೆ ನೀಡುವುದರ ಜತೆಗೆ ಪ್ರತಿ ಫಲಾನುಭವಿಗೂ ಅತ್ಯುನ್ನತ ಗುಣಮಟ್ಟದ ಆಹಾರ ಧಾನ್ಯ ಸಿಗುವಂತೆಈ ಮೂಲಕ ಖಾತ್ರಿಪಡಿಸಲಾಗುತ್ತಿದೆ.

### ಅಕ್ಕಿ ಪ್ರಮಾಣದಲ್ಲಿಲ್ಲ ಕಡಿತ

ದೇಶದ ಪ್ರತಿಯೊಂದು ಅರ್ಹ ಕುಟುಂಬವೂ ಪ್ರಧಾನಮಂತ್ರಿ ಗರೀಬ್ ಕಲ್ಯಾಣ್ ಅನ್ನ ಯೋಜನೆಯಲ್ಲಿ ಮೊದಲಿನಷ್ಟೇ ಪ್ರಮಾಣದ ಆಹಾರ ಧಾನ್ಯ ಪಡೆಯಲಿದೆ. ಇದರಲ್ಲಿ ಯಾವುದೇ ರೀತಿ ಕಡಿತ ಮಾಡಲಾಗಿಲ್ಲ. ಆದರೆ, ಗುಣಮಟ್ಟದಲ್ಲಿ ಮಾತ್ರ ಪರಿವರ್ತನೆ ತೋರಲಾಗಿದೆ. ಅದರಂತೆ ಇನ್ನು ಮುಂದೆ ಶೇ.90ರಿಂದ 95ರಷ್ಟು ಉತ್ಕೃಷ್ಟ ಗುಣಮಟ್ಟದ ಅಕ್ಕಿ ಪಡಿತರದಾರರ ಕೈ ಸೇರಲಿದೆ. ಪಾರದರ್ಶಕತೆಗೆ ಕ್ಯೂಆರ್ ಕೋಡ್: ಕೇಂದ್ರ ಸರ್ಕಾರ, ಪಡಿತರ ಧಾನ್ಯದ ಶ್ರೇಷ್ಠ ಗುಣಮಟ್ಟ ಮಾತ್ರವಲ್ಲ, ಪಾರದರ್ಶಕತೆಗೂ ಕಟ್ಟುನಿಟ್ಟಿನ ಕ್ರಮ ಕೈಗೊಂಡಿದೆ. ಉತ್ತಮ ಗುಣಮಟ್ಟದ ಆಹಾರವನ್ನು ತಲುಪಿಸುವ, ಪ್ರತಿ ಧಾನ್ಯದ ಗರಿಷ್ಠ ಬಳಕೆ ಖಚಿತಪಡಿಸಿಕೊಳ್ಳುವಲ್ಲಿ ಹಾಗೂ ಕ್ಯೂಆರ್ (ಕಿಖ) ಆಧಾರಿತವಾಗಿ ಅಕ್ರಮ ಪತ್ತೆ ಹಚ್ಚುವಿಕೆಯಲ್ಲಿ ಮಹತ್ವದ ಹೆಜ್ಜೆಯಿಸಿದೆ. ಣಡಿಚಿಛಿಜ ಚಿಛುಟಟುಣಥಿ ಮೂಲಕ ಪಾರದರ್ಶಕತೆ ಹೆಚ್ಚಿಸುವ ಮತ್ತು ವ್ಯವಸ್ಥಿತ ವೆಚ್ಚ ನಿರ್ವಹಣೆ ಮೂಲಕ ದಕ್ಷತೆಯನ್ನು ಸುಧಾರಿಸುವಲ್ಲಿ ಇದು ಮಹತ್ವದ ಪಾತ್ರ ವಹಿಸಲಿದೆ.

# ರಕ್ಷಣೆ, ತಂತ್ರಜ್ಞಾನ, ಆರ್ಥಿಕ ಸಹಕಾರದಲ್ಲಿ ಭಾರತ-ಜಪಾನ್ ಪಾಲುದಾರಿಕೆ ಹೆಚ್ಚಿಸಲು ಶೃಂಗಸಭೆ

**ನವದೆಹಲಿ, ಜು.2:** ಪ್ರಧಾನಿ ನರೇಂದ್ರ ಮೋದಿ ಮತ್ತು ಜಪಾನ್ ಪ್ರಧಾನಿ ಸನೇ ತಕೈಚಿ ಗುರುವಾರ ವ್ಯಾಪಕ ಶ್ರೇಣಿಯ ದ್ವಿಪಕ್ಷೀಯ ಮಾತುಕತೆಗಳನ್ನು ನಡೆಸಿದರು, ಭಾರತ-ಜಪಾನ್ ವಿಶೇಷ ಕಾರ್ಯತಂತ್ರ ಮತ್ತು ಜಾಗತಿಕ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಬದ್ಧತೆಯನ್ನು ಪುನರುಚ್ಚರಿಸಿದರು, ಇದು ರಕ್ಷಣೆ, ತಂತ್ರಜ್ಞಾನ, ವ್ಯಾಪಾರ, ಮೂಲಸೌಕರ್ಯ, ಸ್ಥಿತಿಸ್ಥಾಪಕ ಪೂರೈಕೆ ಸರಪಳಿಗಳು ಮತ್ತು ಇಂಡೋ-ಪೆಸಿಫಿಕ್‌ನಲ್ಲಿ ಸಹಕಾರದ ಮೇಲೆ ನವೀಕೃತ ಗಮನವನ್ನು ಕೇಂದ್ರೀಕರಿಸುತ್ತದೆ. ರಾಷ್ಟ್ರಪತಿ ಭವನದಲ್ಲಿ ವಿಧ್ಯುಕ್ತ ಸ್ವಾಗತದ ನಂತರ ಹೈದರಾಬಾದ್ ಹೌಸ್‌ನಲ್ಲಿ ನಡೆದ ಉನ್ನತ ಮಟ್ಟದ ಮಾತುಕತೆ, ಪ್ರಧಾನ ಮಂತ್ರಿಯಾಗಿ ತಕೈಚಿ ಅವರ ಭಾರತಕ್ಕೆ ಮೊದಲ ಅಧಿಕೃತ ಭೇಟಿಯನ್ನು ಗುರುತಿಸಿತು ಮತ್ತು ಪ್ರಾದೇಶಿಕ ಮತ್ತು ಜಾಗತಿಕ ಭೌಗೋಳಿಕ ರಾಜಕೀಯ ಸವಾಲುಗಳ ವಿಕಸನದ ನಡುವೆ ಏಷ್ಯಾದ ಎರಡು ಪ್ರಮುಖ ಪ್ರಜಾಪ್ರಭುತ್ವಗಳ ನಡುವೆ ಬೆಳೆಯುತ್ತಿರುವ ಕಾರ್ಯತಂತ್ರದ ಒಮ್ಮುಖವನ್ನು ಒತ್ತಿಹೇಳಿತು. ದ್ವಿಪಕ್ಷೀಯ ಮಾತುಕತೆಗಳಲ್ಲಿ ವಿದೇಶಾಂಗ ಸಚಿವ ಎಸ್ ಜೈಶಂಕರ್, ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಮತ್ತು ಎರಡೂ ಕಡೆಯ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು, ಇದು



ಚರ್ಚೆಯಲ್ಲಿರುವ ವಿಶಾಲ ಕಾರ್ಯತಂತ್ರದ ಕಾರ್ಯಸೂಚಿಯನ್ನು ಪ್ರತಿಬಿಂಬಿಸುತ್ತದೆ.

ಜಾಗತಿಕ ಪೂರೈಕೆ ಸರಪಳಿ ಅಡೆತಡೆಗಳ ನಡುವೆ ಭಾರತ ಮತ್ತು ಜಪಾನ್ ಆರ್ಥಿಕ ಸ್ಥಿತಿಸ್ಥಾಪಕತ್ವವನ್ನು ಬಲಪಡಿಸಲು ಪ್ರಯತ್ನಿಸುತ್ತಿರುವ ಸಮಯದಲ್ಲಿ ಈ ಭೇಟಿ ಬಂದಿದೆ. ಭಾರತದಲ್ಲಿ ಜಪಾನಿನ ಹೂಡಿಕೆಯನ್ನು ವಿಸ್ತರಿಸುವ ಮತ್ತು ನಾವೀನ್ಯತೆ-ಚಾಲಿತ ಬೆಳವಣಿಗೆಯನ್ನು ಉತ್ತೇಜಿಸುವ ಪ್ರಯತ್ನಗಳ ಜೊತೆಗೆ, ಭವಿಷ್ಯದ ಸಹಕಾರಕ್ಕಾಗಿ ಆದ್ಯತೆಯ ಕ್ಷೇತ್ರಗಳಾಗಿ ಅರೆವಾಹಕಗಳು, ನಿರ್ಣಾಯಕ ಖನಿಜಗಳು, ಉದಯೋನ್ಮುಖ ತಂತ್ರಜ್ಞಾನಗಳು ಮತ್ತು ಮುಂದುವರಿದ ಉತ್ಪಾದನೆಯನ್ನು ಎರಡೂ ದೇಶಗಳು ಗುರುತಿಸಿವೆ. ಕಳೆದ ಎರಡು ದಶಕಗಳಲ್ಲಿ, ಭಾರತ ಮತ್ತು ಜಪಾನ್ ತಮ್ಮ ಸಂಬಂಧವನ್ನು ಇಂಡೋ-ಪೆಸಿಫಿಕ್‌ನಲ್ಲಿ ಸ್ಥಿರತೆಯ ಆಧಾರಸ್ತಂಭಗಳಲ್ಲಿ ಒಂದಾಗಿ ಪರಿವರ್ತಿಸಿವೆ. ಈ ಪಾಲುದಾರಿಕೆಯು ರಕ್ಷಣಾ ವ್ಯಾಯಾಮಗಳು, ಕಡಲ ಭದ್ರತೆ, ಸಂಪರ್ಕ ಉಪಕ್ರಮಗಳು, ಹೈ-ಸ್ಪೀಡ್ ರೈಲು, ಮೂಲಸೌಕರ್ಯ ಹಣಕಾಸು, ಶುದ್ಧ ಇಂಧನ, ಡಿಜಿಟಲ್ ತಂತ್ರಜ್ಞಾನಗಳು ಮತ್ತು ಜನರಿಂದ ಜನರಿಗೆ ವಿನಿಮಯವನ್ನು ಸಹ ವ್ಯಾಪಿಸಿದೆ. ಜಪಾನ್ ಭಾರತದ ಅತಿದೊಡ್ಡ ಅಭಿವೃದ್ಧಿ ಪಾಲುದಾರರು ಮತ್ತು

**ಪ್ರಧಾನಿ ಮೋದಿಯವರ ಆಹ್ವಾನದ ಮೇರೆಗೆ ಟಕೈಚಿ ಜುಲೈ 1 ರಿಂದ 3 ರವರೆಗೆ ಭಾರತಕ್ಕೆ ಮೂರು ದಿನಗಳ ಅಧಿಕೃತ ಭೇಟಿಯಲ್ಲಿದ್ದಾರೆ ಮತ್ತು ಉನ್ನತ ರಾಜಕೀಯ ಮಟ್ಟದಲ್ಲಿ ದ್ವಿಪಕ್ಷೀಯ ಬಾಂದವ್ಯ ಬಲವರ್ಧನೆಗೆ ಪ್ರಮುಖ ಕಾರ್ಯವಿಧಾನವಾದ 16 ನೇ ಭಾರತ-ಜಪಾನ್ ವಾರ್ಷಿಕ ಶೃಂಗಸಭೆಯಲ್ಲಿ ಭಾಗವಹಿಸುತ್ತಿದ್ದಾರೆ.**

ಹೂಡಿಕೆದಾರರಲ್ಲಿ ಒಂದಾಗಿ ಹೊರಹೊಮ್ಮಿದೆ, ಉತ್ಪಾದನೆ ಮತ್ತು ಕೈಗಾರಿಕಾ ಅಭಿವೃದ್ಧಿಯಲ್ಲಿ ಸಹಯೋಗವನ್ನು ವಿಸ್ತರಿಸುವಾಗ ಪ್ರಮುಖ ಮೂಲಸೌಕರ್ಯ ಯೋಜನೆಗಳನ್ನು ಬೆಂಬಲಿಸುತ್ತದೆ.

ವಿದೇಶಾಂಗ ಸಚಿವಾಲಯದ ಪ್ರಕಾರ, ಶೃಂಗಸಭೆಯು ಉಭಯ ನಾಯಕರಿಗೆ ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ಬೆಳವಣಿಗೆಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳುವಾಗ ದ್ವಿಪಕ್ಷೀಯ ಸಹಕಾರದ ಸಂಪೂರ್ಣ ವರ್ಣಪಟಲವನ್ನು ಪರಿಶೀಲಿಸಲು ಅವಕಾಶವನ್ನು ಒದಗಿಸುತ್ತದೆ. ಚರ್ಚೆಗಳು ಕಾರ್ಯತಂತ್ರದ, ಆರ್ಥಿಕ, ತಾಂತ್ರಿಕ ಮತ್ತು ಭದ್ರತಾ ಕ್ಷೇತ್ರಗಳಲ್ಲಿ ಸಹಯೋಗಕ್ಕಾಗಿ ಹೊಸ ಮಾರ್ಗಗಳನ್ನು ಗುರುತಿಸುವ ನಿರೀಕ್ಷೆಯಿದೆ.

## ದೆಹಲಿಯಲ್ಲಿ ಭಯೋತ್ಪಾದಕ ದಾಳಿಗೆ ಸಂಚು ರೂಪಿಸಿದ್ದ ನಾಲ್ವರ ಬಂಧನ



**ನವದೆಹಲಿ,ಜು.2:** ದೆಹಲಿ ಎನ್‌ಸಿಆರ್ ಪ್ರದೇಶದಲ್ಲಿ ಭಯೋತ್ಪಾದಕ ದಾಳಿ ನಡೆಸಲು ಸಂಚು ರೂಪಿಸುತ್ತಿದ್ದ ಪಾಕಿಸ್ತಾನದ ಗುಪ್ತಚರ ಸಂಸ್ಥೆ ಐಎಸ್‌ಐ ಬೆಂಬಲಿತ ಜಾಲವನ್ನು ದೆಹಲಿ ಪೊಲೀಸ್ ವಿಶೇಷ ಘಟಕ ಭೇದಿಸಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಸುಭದೀಪ್ ಸಿಂಗ್, ಗುರ್ಜಂತ್ ಸಿಂಗ್, ಸಜನ್ ಸಿಂಗ್ ಹಾಗೂ ಗಗನ್‌ಪ್ರೀತ್ ಸಿಂಗ್ ಹೆಸರಿನ ಶಂಕಿತರನ್ನು ಬಂಧಿಸಲಾಗಿದೆ.

ಪೊಲೀಸರ ಪ್ರಾಥಮಿಕ ತನಿಖೆಯ ಪ್ರಕಾರ, ಬಂಧಿತರು ಐಎಸ್‌ಐ ಹ್ಯಾಂಡ್ಲರ್ ಶಹಜಾದ್ ಭಟ್ ಹಾಗೂ ಆತನ ಸಹಚರರ ಸೂಚನೆಯಂತೆ ಕಾರ್ಯ ನಿರ್ವಹಿಸುತ್ತಿದ್ದರು. ತಮ್ಮ ಗುರುತು ಪತ್ತೆಯಾಗದಂತೆ ನೋಡಿಕೊಳ್ಳಲು ಪಾಕಿಸ್ತಾನದಲ್ಲಿದ್ದ ಹ್ಯಾಂಡ್ಲರ್ಗಳು ಒದಗಿಸಿದ್ದ ವಿದೇಶಿ ಮೊಬೈಲ್ ಸಂಖ್ಯೆಗಳ ಮೂಲಕವೇ ಪರಸ್ಪರ ಸಂಪರ್ಕದಲ್ಲಿದ್ದು, ಸೂಚನೆಗಳನ್ನು ಪಡೆದುಕೊಳ್ಳುತ್ತಿದ್ದರು ಎಂದು ತನಿಖೆಯಲ್ಲಿ ಬಹಿರಂಗವಾಗಿದೆ.

ಆರೋಪಿಗಳು ದೆಹಲಿ ಎನ್‌ಸಿಆರ್‌ನ ಪ್ರಮುಖ ಸಾರ್ವಜನಿಕ ಸ್ಥಳಗಳು ಮತ್ತು ಜನಸಂದಣಿ ಪ್ರದೇಶಗಳನ್ನು ಗುರಿಯಾಗಿಸಿಕೊಂಡು ಉಗ್ರ ಕೃತ್ಯ ನಡೆಸಲು ಸಂಚು ರೂಪಿಸಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಈ ಸಂಬಂಧ ಹಲವು ದಿನಗಳಿಂದ ಗುಪ್ತಚರ ಮಾಹಿತಿ ಸಂಗ್ರಹಿಸಿ ವಿಶೇಷ ಕಾರ್ಯಾಚರಣೆ ನಡೆಸಿದ ಬಳಿಕ ನಾಲ್ವರನ್ನು ಬಂಧಿಸಲಾಗಿದೆ. ಬಂಧಿತರಿಂದ ವಿದೇಶಿ ಪಿಸ್ತೂಲ್, ಜೀವಂತ ಗುಂಡುಗಳು, ಮೊಬೈಲ್ ಫೋನ್‌ಗಳು, ಡಿಜಿಟಲ್ ಸಾಧನಗಳು ಹಾಗೂ ಇತರ ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಅವುಗಳ ಫೊರೆನ್ಸಿಕ್ ಪರೀಕ್ಷೆ ನಡೆಸಲಾಗುತ್ತಿದೆ. ಆರೋಪಿಗಳ ಮೂಲಕ ದೇಶದೊಳಗೆ ಕಾರ್ಯನಿರ್ವಹಿಸುತ್ತಿರುವ ಇತರ ಐಎಸ್‌ಐ ಜಾಲಗಳ ಸಂಪರ್ಕ ಹಾಗೂ ಸಹಚರರ ಬಗ್ಗೆ ಮಾಹಿತಿ ಕಲೆಹಾಕುವ ಕಾರ್ಯ ಮುಂದುವರಿದಿದೆ. ಪ್ರಕರಣದ ತನಿಖೆಯನ್ನು ದೆಹಲಿ ಪೊಲೀಸ್ ವಿಶೇಷ ಘಟಕವು ಕೇಂದ್ರ ಗುಪ್ತಚರ ಸಂಸ್ಥೆಗಳ ಸಹಯೋಗದೊಂದಿಗೆ ಮುಂದುವರಿಸಿದ್ದು, ದೆಹಲಿ ಎನ್‌ಸಿಆರ್ ಪ್ರದೇಶದಲ್ಲಿ ಭದ್ರತೆಯನ್ನು ಮತ್ತಷ್ಟು ಬಿಗಿಗೊಳಿಸಲಾಗಿದೆ.

## ಖಾಮೇನಿ ಅಂತ್ಯಕ್ರಿಯೆಗೆ ಭಾರತದ ರಾಜಕೀಯ ನಾಯಕರಿಗೆ ಇರಾನ್ ಆಹ್ವಾನ

**ನವದೆಹಲಿಜು.2:** ಇರಾನ್‌ನ ಪರಮೋಚ್ಚ ನಾಯಕ ದಿವಂಗತ ಆಯತುಲ್ಲಾ ಅಲಿ ಖಾಮೇನಿ ಅಂತ್ಯಕ್ರಿಯೆಯಲ್ಲಿ ಭಾಗವಹಿಸಲು ದೇಶದ ವಿವಿಧ ರಾಜಕೀಯ ಪಕ್ಷಗಳ ಪ್ರಮುಖ ನಾಯಕರಿಗೆ ಇರಾನ್ ಸರ್ಕಾರ ಅಧಿಕೃತ ಆಹ್ವಾನ ನೀಡಿದೆ. ಭಾರತ-ಇರಾನ್ ನಡುವಿನ ರಾಜತಾಂತ್ರಿಕ ಸಂಬಂಧಗಳಿಗೆ ಮಹತ್ವ ನೀಡುವ ಉದ್ದೇಶದಿಂದ ಈ ಆಹ್ವಾನ ನೀಡಲಾಗಿದೆ.

ಆಹ್ವಾನಿತರಲ್ಲಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್, ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ಹಿರಿಯ ನಾಯಕ ಹಾಗೂ ಮಾಜಿ ವಿದೇಶಾಂಗ ಸಚಿವ ಸಲ್ಮಾನ್ ಖುರ್ಷಿದ್ ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಸೇರಿದ್ದಾರೆ. ಕಾಂಗ್ರೆಸ್ ಪರವಾಗಿ ಸಲ್ಮಾನ್ ಖುರ್ಷಿದ್ ಅಂತ್ಯಕ್ರಿಯೆಯಲ್ಲಿ ಪಾಲ್ಗೊಳ್ಳುವುದಾಗಿ ಈಗಾಗಲೇ ದೃಢಪಡಿಸಿದ್ದಾರೆ.

ಇದರ ಜೊತೆಗೆ ಕಾಂಗ್ರೆಸ್ ಸಂಸದ ಇಮ್ರಾನ್ ಮಸೂದ್, ಕಾಂಗ್ರೆಸ್ ವಕ್ತಾರ ಪವನ್ ಖೇರಾ, ಸಮಾಜವಾದಿ ಪಕ್ಷದ ಸಂಸದ ಅಫ್ಜಲ್ ಅನ್ಸಾರಿ ಪೀಪಲ್ಸ್ ಡೆಮಾಕ್ರಟಿಕ್ ಪಾರ್ಟಿಮುಖ್ಯಸ್ಥೆ ಮೆಹಬೂಬಾ ಮುಫ್ತಿ, ಶ್ರೀನಗರ ಸಂಸದ ರುಹುಲ್ಲಾ ಮೆಹದಿ, ಲಡಾಖ್ ಸಂಸದ ಹಾಜಿ ಹನೀಫಾ ಹಾಗೂ ಅಂತರರಾಷ್ಟ್ರೀಯ ಸಾಮಾಜಿಕ ಸಂಘಟನೆಯಾದ ಅಹಿಂಸಾ ವಿಶ್ವ ಭಾರತಿಯನ್ನು ಸ್ಥಾಪಿಸಿದ ಭಾರತೀಯ ಜೈನ ಸನ್ಯಾಸಿ ಮತ್ತು ಆಧ್ಯಾತ್ಮಿಕ ನಾಯಕ ಆಚಾರ್ಯ ಲೋಕೇಶ್ ಮುನಿ ಅವರಿಗೂ ಆಹ್ವಾನ ಕಳುಹಿಸಿದೆ.

ಇದಕ್ಕೂ ಮುನ್ನ ಇರಾನ್ ಅಧ್ಯಕ್ಷ ಮಸೂದ್ ಪೆಜೆಶ್ಕಿಯನ್ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೂ ಅಂತ್ಯಕ್ರಿಯೆಯಲ್ಲಿ ಭಾಗವಹಿಸುವಂತೆ ಆಹ್ವಾನ ನೀಡಿದ್ದರು. ಆದರೆ ಪ್ರಧಾನಿ ಮೋದಿ ಅವರ ಬದಲಿಗೆ ಭಾರತವು ಉನ್ನತ ಮಟ್ಟದ ಅಧಿಕೃತ ನಿಯೋಗವನ್ನು ಕಳುಹಿಸುವ ಸಾಧ್ಯತೆ ಇದೆ. ಬಿಹಾರ ರಾಜ್ಯಪಾಲ ಜನರಲ್ ಸಯ್ಯದ್ ಹಸ್ನೈನ್ ಹಾಗೂ ಕೇಂದ್ರ ವಿದೇಶಾಂಗ ಖಾತೆ ರಾಜ್ಯ ಸಚಿವ ಪವಿತ್ರ ಮಾರ್ಗರಿಟಾ ಅವರು ಭಾರತೀಯ ನಿಯೋಗದ ಭಾಗವಾಗುವ ಸಾಧ್ಯತೆ ಇದೆ ಎಂದು ರಾಜತಾಂತ್ರಿಕ ಮೂಲಗಳು ತಿಳಿಸಿವೆ.

ಖಾಮೇನಿ ಅವರ ಅಂತ್ಯಕ್ರಿಯೆ ಜುಲೈ 4ರಿಂದ ಟೆಹ್ರಾನ್‌ನಲ್ಲಿ ಆರಂಭವಾಗಿ, ಕ್ವೋಮ್ ಹಾಗೂ ಇರಾಕ್ನ ಕೆಲವು ಧಾರ್ಮಿಕ ಸ್ಥಳಗಳಲ್ಲಿ ಶ್ರದ್ಧಾಂಜಲಿ ಕಾರ್ಯಕ್ರಮಗಳ ಬಳಿಕ ಜುಲೈ 9ರಂದು ಮಶ್ಹದ್‌ನಲ್ಲಿ ಅಂತ್ಯಸಂಸ್ಕಾರ ನಡೆಯಲಿದೆ. ಈ ಸಂದರ್ಭದಲ್ಲಿ ಲಕ್ಷಾಂತರ ಜನರು ಹಾಗೂ ಅನೇಕ ದೇಶಗಳ ಪ್ರತಿನಿಧಿಗಳು ಭಾಗವಹಿಸುವ ನಿರೀಕ್ಷೆಯಿದೆ. ಭದ್ರತಾ ದೃಷ್ಟಿಯಿಂದ ಇರಾನ್ ದೇಶಾದ್ಯಂತ ಕಟ್ಟೆಚ್ಚರ ವಹಿಸಲಾಗಿದ್ದು, ಪ್ರಮುಖ ನಗರಗಳಲ್ಲಿ ವಿಶೇಷ ಭದ್ರತಾ ಕ್ರಮಗಳನ್ನು ಜಾರಿಗೆ ತರಲಾಗಿದೆ.

## ಧರ್ಮಸ್ಥಳದಲ್ಲಿ ಮಂಜುನಾಥಸ್ವಾಮಿ ದರ್ಶನ ಪಡೆದ ವೀರಪ್ಪ ಮೊಯ್ಲಿ



**ಧರ್ಮಸ್ಥಳ:** ಮಾಜಿ ಮುಖ್ಯಮಂತ್ರಿ ಡಾ.ಎಂ. ವೀರಪ್ಪ ಮೊಯ್ಲಿ ಹಾಗೂ ಮಾಜಿ ಸಚಿವ ಅಭಯಚಂದ್ರ ಜೈನ್ ಅವರು ಗುರುವಾರ ಶ್ರೀಕ್ಷೇತ್ರ ಧರ್ಮಸ್ಥಳಕ್ಕೆ ಭೇಟಿ ನೀಡಿ ಮಂಜುನಾಥ ಸ್ವಾಮಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.

ಬಳಿಕ ಧರ್ಮಸ್ಥಳದ ಧರ್ಮಾಧಿಕಾರಿ ಪರಮಪೂಜ್ಯ ಡಾ। ಡಿ. ವೀರೇಂದ್ರ ಹೆಗ್ಗಡೆ ಅವರನ್ನು ಭೇಟಿಯಾಗಿ ಆಶೀರ್ವಾದ ಪಡೆದು ಮಾತುಕತೆ ನಡೆಸಿದರು. ಈ ಸಂದರ್ಭದಲ್ಲಿ ಜಿಲ್ಲೆಯ ಕಾಂಗ್ರೆಸ್ ಪಕ್ಷದ ಪ್ರಮುಖ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಹಿಮಾಚಲ ಪ್ರದೇಶದಲ್ಲಿ ಮುಂಗಾರು ಅಬ್ಬರ: ಮೊದಲ ಮಳೆಗೆ 6 ಜನರ ಬಲಿ, 10 ಮಂದಿಗೆ ಗಾಯ, ಹಲವು ರಸ್ತೆಗಳು ಬಂದ್

**ಶಿಮ್ಲಾ,ಜು.2:** ಹಿಮಾಚಲ ಪ್ರದೇಶದಲ್ಲಿ ಮಳೆಗಾಲ ಆರಂಭವಾಗುತ್ತಿದ್ದಂತೆ, ಪ್ರತಿ ವರ್ಷ ಭೂಕುಸಿತ, ಮೇಘಸ್ಫೋಟ ಮತ್ತು ರಸ್ತೆ ಕುಸಿಯುವಂತಹ ಸಮಸ್ಯೆಗಳು ಎದುರಾಗುತ್ತವೆ. ಈ ವರ್ಷದ ಮಳೆಗಾಲದ ಮೊದಲ ಮಳೆಯೇ ಹಲವಾರು ಕುಟುಂಬಗಳಿಗೆ ದುರಂತವನ್ನು ತಂದಿದೆ.

ಲೋಕೋಪಯೋಗಿ ಇಲಾಖೆ ಮಳೆಗಾಲದ ಸವಾಲುಗಳನ್ನು ಎದುರಿಸಲು ಸಮಗ್ರ ಕಾರ್ಯತಂತ್ರವನ್ನು ಮುಂಚಿತವಾಗಿಯೇ ಸಿದ್ಧಪಡಿಸಿದೆ. ಆದರೂ ರಾಜ್ಯದಲ್ಲಿ ಭಾರೀ ಮಳೆ, ಭೂಕುಸಿತ ಮತ್ತು ರಸ್ತೆ ಅಪಘಾತಗಳಿಂದಾಗಿ ಆರು ಜನರು ಪ್ರಾಣ ಕಳೆದುಕೊಂಡಿದ್ದಾರೆ.

ಲೋಕೋಪಯೋಗಿ ಇಲಾಖೆ ರಸ್ತೆಗಳಲ್ಲಿ ಸುಗಮ ಸಂಚಾರವನ್ನು ಖಚಿತಪಡಿಸಿಕೊಳ್ಳಲು ರಾಜ್ಯ ಪ್ರಧಾನ ಕಚೇರಿಯಲ್ಲಿ ಮತ್ತು ಎಲ್ಲ ವೃತ್ತ ಮತ್ತು ವಿಭಾಗ ಮಟ್ಟದಲ್ಲಿ ನಿಯಂತ್ರಣ ಕೊಠಡಿಗಳನ್ನು ಸ್ಥಾಪಿಸಿದೆ. ಇವೆಲ್ಲವೂ ದಿನದ 24 ಗಂಟೆಗಳ ಕಾಲ ಕಾರ್ಯನಿರ್ವಹಿಸಲು ಪ್ರಾರಂಭಿಸಿವೆ.

**ಮೊದಲ ಮುಂಗಾರು ಮಳೆಯಲ್ಲಿ 6 ಮಂದಿ ಸಾವು**

ಭಾರಿ ಮಳೆ ಮತ್ತು ಭೂಕುಸಿತಗಳಿಂದ ಉಂಟಾದ ವಿವಿಧ ಘಟನೆಗಳಲ್ಲಿ ಆರು



ಜನರು ಪ್ರಾಣ ಕಳೆದುಕೊಂಡಿದ್ದಾರೆ ಮತ್ತು 10 ಜನರು ಗಾಯಗೊಂಡಿದ್ದಾರೆ. ಕಾಂಗ್ರಾ ಜಿಲ್ಲೆಯಲ್ಲಿ ಅತಿ ಹೆಚ್ಚು ಸಾವುನೋವುಗಳು ದಾಖಲಾಗಿವೆ. ಕುಲ್ಲು, ಕಾಂಗ್ರಾ ಮತ್ತು ಮಂಡಿ ಜಿಲ್ಲೆಗಳಲ್ಲಿ ಭಾರೀ ಮಳೆ ಮತ್ತು ಬಿರುಗಾಳಿ ಅತ್ಯಂತ ತೀವ್ರವಾಗಿದೆ. ಜಿಲ್ಲೆಗಳಾದ್ಯಂತ ಹಲವಾರು ಪ್ರದೇಶಗಳಲ್ಲಿ ರಸ್ತೆ ಅಡಚಣೆಗಳು ಮತ್ತು ವಿದ್ಯುತ್ ಕಡಿತದಿಂದಾಗಿ ಜನರು ಹೆಚ್ಚಿನ ತೊಂದರೆಗಳನ್ನು ಎದುರಿಸುತ್ತಿದ್ದಾರೆ.

**ಹಿಮಾಚಲದಲ್ಲಿ 35 ರಸ್ತೆಗಳು ಕ್ಲೋಸ್:** 127 ಟ್ರಾನ್ಸ್‌ಫಾರ್ಮರ್‌ಗಳು ಸ್ಥಗಿತ

ರಾಜ್ಯದ 35 ರಸ್ತೆಗಳಲ್ಲಿ ಸಂಚಾರ ಸ್ಥಗಿತಗೊಂಡಿದೆ. ಕುಲ್ಲು ಜಿಲ್ಲೆಗೆ ಅತಿ ಹೆಚ್ಚು ಹಾನಿಯಾಗಿದ್ದು, 18 ರಸ್ತೆಗಳು ಮುಚ್ಚಲ್ಪಟ್ಟಿವೆ. ಮಂಡಿಯಲ್ಲಿ ಹನ್ನೊಂದು ರಸ್ತೆಗಳು ಮುಚ್ಚಲ್ಪಟ್ಟಿದ್ದರೆ, ಉನಾ, ಸಿರ್ಮೌರ್ ಮತ್ತು ಲಹೌಲ್-ಸ್ಪಿಟಿಯಲ್ಲಿ ತಲಾ ಎರಡು ರಸ್ತೆಗಳು ಮುಚ್ಚಲ್ಪಟ್ಟಿವೆ. ಲೋಕೋಪಯೋಗಿ ಇಲಾಖೆಯು ಯಂತ್ರೋಪಕರಣಗಳು ಮತ್ತು ಸಿಬ್ಬಂದಿಯನ್ನು ಬಳಸಿಕೊಂಡು ನಿರ್ಬಂಧಿಸಲಾದ ಮಾರ್ಗಗಳನ್ನು ಸಾಧ್ಯವಾದಷ್ಟು ಬೇಗ ಪುನಃಸ್ಥಾಪಿಸಲು ಪ್ರಯತ್ನಿಸುತ್ತಿದೆ.

**ಸಿಬ್ಬಂದಿ ರಜೆ ರದ್ದು:** ಮಳೆಗಾಲದಲ್ಲಿ ಯಾವುದೇ ತುರ್ತು ಪರಿಸ್ಥಿತಿಗಳನ್ನು ತ್ವರಿತವಾಗಿ ನಿರ್ವಹಿಸಲು, ಇಲಾಖೆಯು ತನ್ನ ಕ್ಷೇತ್ರ ಸಿಬ್ಬಂದಿಯ ರಜೆಯನ್ನು ರದ್ದುಗೊಳಿಸಿದೆ. ಇನ್ನುಂದೆ ನೌಕರರಿಗೆ ಅತ್ಯಂತ ತುರ್ತು ಸಂದರ್ಭಗಳಲ್ಲಿ ಮಾತ್ರ ರಜೆ ನೀಡಲಾಗುವುದು. ಒಟ್ಟು 17,243 ಇಲಾಖೆ ನೌಕರರನ್ನು ರಸ್ತೆ ಪುನಃಸ್ಥಾಪನೆ ಕಾರ್ಯಕ್ಕಾಗಿ ನಿಯೋಜಿಸಲಾಗಿದೆ. ಈ ಕಾರ್ಯಪಡೆಯಲ್ಲಿ 4,828 ಬಹು-ಕಾರ್ಯ ಕಾರ್ಯಕರ್ತರು ಮತ್ತು 11,137 ರಸ್ತೆ ನಿರ್ವಹಣಾ ಕಾರ್ಮಿಕರು ಸೇರಿದ್ದಾರೆ.

**ಥುನಾಗ್‌ನಲ್ಲಿ 11 ಸದಸ್ಯರ ಎಸ್‌ಡಿಆರ್‌ಎಫ್ ತಂಡ ನಿಯೋಜನೆ:** ಮಾನ್ಸೂನ್‌ಗೆ ಮುಂಚಿತವಾಗಿ ಆಡಳಿತವು ಪೂರ್ವಭಾವಿ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ. ಥುನಾಗ್‌ನಲ್ಲಿ ಎಸ್ಡಿಆರ್‌ಎಫ್ ತಂಡವನ್ನು ನಿಯೋಜಿಸಲಾಗುತ್ತಿದೆ. ಇಲ್ಲಿನ ಸೆರಾಜ್ ಪ್ರದೇಶದ ಆಡಳಿತವು ಸಂಪೂರ್ಣ ಎಚ್ಚರಿಕೆಯ ಕ್ರಮಕ್ಕೆ ಇಳಿದಿದೆ. ಯಾವುದೇ ತುರ್ತು ಪರಿಸ್ಥಿತಿಯನ್ನು ತ್ವರಿತವಾಗಿ ಮತ್ತು ಪರಿಣಾಮಕಾರಿಯಾಗಿ ನಿರ್ವಹಿಸಲು ರಾಜ್ಯ ವಿಪತ್ತು ಪ್ರತಿಕ್ರಿಯೆ ಪಡೆಯ 11 ಸದಸ್ಯರ ತಂಡವನ್ನು ಥುನಾಗ್ ಉಪವಿಭಾಗದಲ್ಲಿ ನಿಯೋಜಿಸಲಾಗಿದೆ.

## ವಿಬಿ-ಜಿ ರಾಮ್ ಜಿ ವಿರೋಧಿಸಿ ಪಿಎಂಗೆ ಸಿಎಂ ವಿಜಯ್ ಪತ್ರ

**ಚೆನ್ನೈ, ಜು.2:** ತಮಿಳುನಾಡು ಮುಖ್ಯಮಂತ್ರಿ ಸಿ ಜೋಸೆಫ್ ವಿಜಯ್ ಅವರು ಕೇಂದ್ರ ಸರ್ಕಾರದ ವಿಕ್ಷಿತ್ ಭಾರತ್ ಗ್ಯಾರಂಟಿ ಯೋಜನೆ (ವಿಬಿ-ಜಿ ರಾಮ್ ಜಿ) ಯೋಜನೆಯನ್ನು ವಿರೋಧಿಸಿದ್ದು, ಈ ಸಂಬಂಧ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದಿದ್ದಾರೆ. ಈ ಹೊಸ ಬದಲಾವಣೆಯು ರಾಜ್ಯದ ಮೇಲೆ 5,000 ಕೋಟಿ ರೂ.ಗಳಿಗೂ ಹೆಚ್ಚು ಹೆಚ್ಚುವರಿ ಆರ್ಥಿಕ ಹೊರೆಯನ್ನು ಹೇರುತ್ತದೆ. ಇದು ಹಲವು ಸವಾಲುಗಳನ್ನು ಹೊಂದಿದೆ ಎಂದು ವಿಜಯ್ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ವಿಬಿ-ಜಿ ರಾಮ್ ಜಿ ಕಾಯ್ದೆ 2025ರಲ್ಲಿ ಹಲವು ನಿಬಂಧನೆಗಳನ್ನು ಸಡಿಲಿಕೆ ಮತ್ತು ಬದಲಾವಣೆ ಮಾಡುವ ಅಗತ್ಯವಿದೆ. ಈ ಬದಲಾವಣೆ ಹೊರತು ಯೋಜನೆಯ ಸುಗಮ ಮತ್ತು ಪರಿಣಾಮಕಾರಿ ಅನುಷ್ಠಾನ ಸಾಧ್ಯವಿಲ್ಲ. ಗ್ರಾಮೀಣ ಉದ್ಯೋಗ ಕಾರ್ಯಕ್ರಮದ ಮೇಲೆ ಅವಲಂಬಿತವಾಗಿರುವ ಗ್ರಾಮೀಣ ಜನರ ಮೇಲೆ ಇದು ಕೆಟ್ಟ ಪರಿಣಾಮ ಬೀರುತ್ತದೆ ಎಂದು ಹೇಳಿದ್ದಾರೆ.

ಹಾಗೆಯೇ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಲ್ಲಿ ಮಹಾತ್ಮಾ ಗಾಂಧಿ? ಅವರ ಹೆಸರನ್ನು ಯಥಾವತ್ತಾಗಿ ಉಳಿಸಿಕೊಳ್ಳಬೇಕು ಎಂದೂ ಸಿಎಂ ವಿಜಯ್ ಪತ್ರದಲ್ಲಿ ಪ್ರತ್ಯೇಕವಾಗಿ ವಿನಂತಿಸಿದ್ದಾರೆ. ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯು ಗಾಂಧೀಜಿಯವರ ಪರಂಪರೆ ಮತ್ತು ಸಾರ್ವಜನಿಕ ನಂಬಿಕೆಯೊಂದಿಗೆ ಬೆರೆತುಹೋಗಿದೆ. ಆದ್ದರಿಂದ ಅವರ ಹೆಸರನ್ನು ಯೋಜನೆಯಲ್ಲಿ ಯಥಾವತ್ತಾಗಿ ಉಳಿಸಬೇಕು ಎಂದು ಮನವಿ ಮಾಡಿದ್ದಾರೆ.




ದಕ್ಷಿಣ ಕಾಶ್ಮೀರದ ಪಹಲ್ಗಾಮ್ ಮತ್ತು ಮಧ್ಯ ಕಾಶ್ಮೀರದ ಗಂದರ್‌ಬಾರ್ ಜಿಲ್ಲೆಯ ಬಾಲ್ಟಾಲ್ ಎಂಬ ಎರಡು ಮಾರ್ಗಗಳ ಮೂಲಕ ಶುಕ್ರವಾರ ಆರಂಭವಾಗಲಿರುವ ವಾರ್ಷಿಕ ಅಮರನಾಥ ಯಾತ್ರೆ ಸುಗಮವಾಗಿ ನಡೆಸಲು ಅಭೂತಪೂರ್ವ ಭದ್ರತಾ ವ್ಯವಸ್ಥೆ ಕಲ್ಪಿಸಲಾಗಿದೆ.

## ಅವಸರದಲ್ಲಿ ಟಿಎಂಸಿ ಬ್ಯಾಂಕ್ ಖಾತೆ ಸ್ಥಗಿತ ಮಾಡಿದ್ದೇಕೆ: ಕೋರ್ಟ್

**ಕೋಲ್ಕತ್ತಾ, ಜು.2:** ತೃಣಮೂಲ ಕಾಂಗ್ರೆಸ್ (ಟಿಎಂಸಿ) ಪಕ್ಷದ ಬ್ಯಾಂಕ್ ಖಾತೆಗಳನ್ನು ಸ್ಥಗಿತ ಮಾಡಿರುವ ಪಶ್ಚಿಮ ಬಂಗಾಳದ ಬಿದಾನಗರ ಪೊಲೀಸ್ ಕಮಿಷನರೇಟ್‌ನ ಸೈಬರ್ ಕ್ರೈಮ್ನ ತರಾತುರಿಯನ್ನು ಕೋಲ್ಕತ್ತಾ ಹೈಕೋರ್ಟ್ ಪ್ರಶ್ನಿಸಿದೆ. ಎಫ್‌ಐಆರ್ ದಾಖಲಾದ ಬೆನ್ನಲ್ಲೇ ಇಷ್ಟೊಂದು ವೇಗವಾಗಿ ಖಾತೆಗಳನ್ನು ಸ್ಥಗಿತದಿಂದಾಗಿ ಹಿಂದೆ ಇರುವ ಬಲವಾದ ಆಧಾರಗಳೇನು ಎಂದು ನ್ಯಾಯಾಲಯ ಪ್ರಶ್ನಿಸಿದೆ.

ಬಂಡಾಯ ನಾಯಕ ರಿತಬ್ರತ ಬ್ಯಾನರ್ಜಿ ಬಣದ ಶಾಸಕರು ನೀಡಿದ ದೂರಿನ ಮೇರೆಗೆ ಬಿಧಾನನಗರ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯ ಸೈಬರ್ ಕ್ರೈಂ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು. ಸುಮಾರು 440 ಕೋಟಿ ರೂ. ಹೊಂದಿರುವ ಮೂರು ಪ್ರಮುಖ ಬ್ಯಾಂಕ್ ಖಾತೆಗಳ ಮೇಲೆ ಈ ಹಿಂದೆ ಡೆಬಿಟ್ ಫ್ರೀಜ್ ವಿಧಿಸಲಾಗಿತ್ತು. ಈ ಹಣದ ಮೂಲ ಕಾನೂನುಬದ್ಧವಾಗಿದೆಯೇ ಅಥವಾ ಅಕ್ರಮವಾಗಿ ಸಂಗ್ರಹಿಸಲಾದ ಹಣವೇ ಎಂಬುದರ ತನಿಖೆಗೆ ಶಾಸಕರು ಒತ್ತಾಯಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸೌಗತ ಭಟ್ಟಾಚಾರ್ಯ ಅವರ ಪೀಠವು, ಎಫ್‌ಐಆರ್ ದಾಖಲಾದ ಕೇವಲ ಒಂದೇ ದಿನದಲ್ಲಿ ಬ್ಯಾಂಕ್ ಖಾತೆಗಳನ್ನು ಫ್ರೀಜ್ ಮಾಡಲು ಸೈಬರ್ ಕ್ರೈಮ್‌ಗೆ ಇದ್ದ ತುರ್ತು ಮತ್ತು ಅದರ ಹಿಂದಿರುವ ಸಾಕ್ಷ್ಯಗಳ ಬಗ್ಗೆ ಪ್ರಶ್ನೆ ಮಾಡಿದೆ. ದೂರಿನಲ್ಲಿ ನಿರ್ದಿಷ್ಟ ಆರೋಪಗಳಿಲ್ಲದೆ ಕೇವಲ ಸಾಮಾನ್ಯ ಅಥವಾ ಅಸ್ಪಷ್ಟ ಆರೋಪಗಳಿವೆ ಎಂದು ಕೋರ್ಟ್ ಹೇಳಿದೆ.

ಇನ್ನು ಟಿಎಂಸಿ ಪರವಾಗಿ ಹಿರಿಯ ವಕೀಲರಾದ ಅಭಿಷೇಕ್ ಮನು ಸಿಂಘ್ವಿ ಮತ್ತು ಕಿಶೋರ್ ದತ್ತಾ ಅವರು ವಾದ ಮಂಡಿಸಿದ್ದಾರೆ. ಬ್ಯಾಂಕ್ ಖಾತೆಗಳ ಫ್ರೀಜ್ನಿಂದಾಗಿ ರಾಜಕೀಯ ಪಕ್ಷದ ದೈನಂದಿನ ಹಣಕಾಸು ವ್ಯವಹಾರಗಳು ಸಂಪೂರ್ಣವಾಗಿ ಸ್ಥಗಿತಗೊಂಡಿವೆ. ಆದ್ದರಿಂದ ತಕ್ಷಣವೇ ಮಧ್ಯಂತರ ಪರಿಹಾರ ನೀಡಬೇಕು ಎಂದು ಕೋರಿದರು. ಆದರೆ, ಹೈಕೋರ್ಟ್ ತಕ್ಷಣದ ಮಧ್ಯಂತರ ಪರಿಹಾರ ನೀಡಲು ನಿರಾಕರಿಸಿದೆ.

ಯಾವುದೇ ನಿರ್ಧಾರ ಕೈಗೊಳ್ಳುವ ಮುನ್ನ, ಫ್ರೀಜ್ ಮಾಡಲಾದ ಬ್ಯಾಂಕ್ ಖಾತೆಗಳಲ್ಲಿರುವ ಒಟ್ಟು ಮೊತ್ತದ ವಿವರಗಳು ಹಾಗೂ ತನಿಖೆಯ ವೇಳೆ ಸಂಗ್ರಹಿಸಲಾದ ಸಾಕ್ಷ್ಯಾಧಾರಗಳನ್ನು ತನ್ನ ಮುಂದೆ ಮಂಡಿಸುವಂತೆ ಸೈಬರ್ ಕ್ರೈಮ್ ತಂಡಕ್ಕೆ ಹೈಕೋರ್ಟ್ ನಿರ್ದೇಶನ ನೀಡಿದೆ.

## 15 ದಾಖಲೆ ಸಲ್ಲಿಸಿದರೂ ನಾಗರಿಕತ್ವ ಸಾಬೀತುಪಡಿಸಲು ಕೂಲಿ ಕಾರ್ಮಿಕ ವಿಫಲ

**ಗುವಾಹಟಿ,ಜು.2:** ಹಲವು ವರ್ಷಗಳ ಪೂರ್ವಜ್ಜರ ಮತದಾರ ಪಟ್ಟಿ, ಪ್ಯಾನ್ ಕಾರ್ಡ್, ವೋಟರ್ ಐಡಿ ಮತ್ತು ಶಾಲಾ ಪ್ರಮಾಣಪತ್ರ ಸೇರಿದಂತೆ 15 ದಾಖಲೆ ಸಲ್ಲಿಸಿದ್ದರೂ ವ್ಯಕ್ತಿಯೊಬ್ಬ ತನ್ನ ಭಾರತೀಯ ನಾಗರಿಕತ್ವವನ್ನು ಸಾಬೀತುಪಡಿಸಲು ವಿಫಲನಾಗಿದ್ದಾನೆ.

ಅಸ್ಸಾಂನಲ್ಲಿ ದಿನಗೂಲಿ ಕಾರ್ಮಿಕನಾಗಿರುವ ಅರ್ಜಿದಾರ, ವಿದೇಶಿ ನ್ಯಾಯಾಧಿಕರಣದಲ್ಲಿ ತನ್ನ ನಾಗರಿಕತ್ವ ಸಾಬೀತುಪಡಿಸಲು ಅವನು 15 ದಾಖಲೆಗಳನ್ನು ಸಲ್ಲಿಸಿದ್ದನು. ಇವುಗಳಲ್ಲಿ 1951ರ ಎನ್‌ಆರ್‌ಸಿಯಲ್ಲಿ ಅವನ ತಂದೆ ಮತ್ತು ಅಜ್ಜ-ಅಜ್ಜಿಯ ಹೆಸರುಗಳು, 1966ರಿಂದ 2017ರವರೆಗಿನ ವಿವಿಧ ವೋಟರ್ ಪಟ್ಟಿಗಳು, 1973ರ ಭೂಮಿ ಖರೀದಿ ದಸ್ತಾವೇಜು, 2017ರ ಶಾಲಾ ಪ್ರಮಾಣಪತ್ರ, ಪ್ಯಾನ್ ಕಾರ್ಡ್ ಮತ್ತು ವೋಟರ್ ಫೋಟೋ ಐಡಿ ಇದ್ದವು.

ಅವನ ಕುಟುಂಬವು ನದಿ ಕೊರೆಯುವಿಕೆಯಿಂದಾಗಿ ಹಲವು ಬಾರಿ ಗ್ರಾಮಗಳನ್ನು ಬದಲಾಯಿಸಿದೆ ಎಂದು ಅವನು ಹೇಳಿದ್ದಾನೆ. ಮೊದಲು ಚರಾಯಿ ಖಾಸ್ರಾ, ನಂತರ ಧೋಬುಕುರಾ, ಘುಗುಡೋಬಾ ಮತ್ತು ಅಂತಿಮವಾಗಿ ಹಶ್ಡೋಬಾ ಗ್ರಾಮದಲ್ಲಿ ನೆಲೆಸಿದ್ದಾರೆ ಎಂದು ತಿಳಿಸಿದ್ದಾನೆ. ತನ್ನ ಹಕ್ಕನ್ನು ಬೆಂಬಲಿಸಲು ತಂದೆಯ ಸಾಕ್ಷ್ಯವನ್ನೂ ಸಲ್ಲಿಸಿದ್ದನು.

**ಕೋರ್ಟ್ ಯಾವ ದಸ್ತಾವೇಜುಗಳನ್ನು ತಿರಸ್ಕರಿಸಿತು?**

ಮೇಲ್ಮನವಿ ಅರ್ಜಿ ವಿಚಾರಣೆ ನಡೆಸಿದ ಗುವಾಹಟಿ ಹೈಕೋರ್ಟ್ ಮುಖ್ಯವಾಗಿ 1951ರ ಎನ್‌ಆರ್‌ಸಿ ಪ್ರತಿಯನ್ನು ತಿರಸ್ಕರಿಸಿದೆ. ಇದು ಕೇವಲ ಕಂಪ್ಯೂಟರ್ನಿಂದ ತೆಗೆದ ರೆಕಾರ್ಡ್ ಆಗಿದ್ದು, ಭಾರತೀಯ ಸಾಕ್ಷ್ಯ ಕಾನೂನಿನ ಪ್ರಕಾರ ಪ್ರಮಾಣೀಕರಣಗೊಂಡಿಲ್ಲ ಎಂದು ಹೇಳಿದೆ. ಜನಗಣನಾ ಕಾಯಿದೆ 1948ರ ಸೆಕ್ಷನ್ 15 ಪ್ರಕಾರ ಜನಗಣನಾ ದಾಖಲೆಗಳು ನೇರವಾಗಿ ನಾಗರಿಕತ್ವ ಸಾಬೀತುಪಡಿಸುವ ಸಾಕ್ಷ್ಯವಾಗಲಾರವು ಎಂದೂ ಸ್ಪಷ್ಟಪಡಿಸಿದೆ.

ಶಾಲಾ ಪ್ರಮಾಣಪತ್ರವನ್ನು ತಿರಸ್ಕರಿಸಲಾಗಿದೆ ಏಕೆಂದರೆ ಶಾಲಾ ಪ್ರಿನ್ಸಿಪಾಲ್ ಅವರನ್ನು ಸಾಕ್ಷಿಯಾಗಿ ಪರಿಗಣಿಸಿಲ್ಲ ಮತ್ತು ಪ್ರವೇಶ ರಜಿಸ್ಟರ್ ಸಲ್ಲಿಸಲಿಲ್ಲ. 1973ರ ಭೂಮಿ ಖರೀದಿ ದಸ್ತಾವೇಜು ಕುಟುಂಬದ ಉತ್ತರಾಧಿಕಾರಿಗಳಿಗೆ ಹೇಗೆ ತಲುಪಿತು ಎಂಬುದನ್ನು ಸಾಬೀತುಪಡಿಸಲಿಲ್ಲ.

ಪ್ಯಾನ್ ಕಾರ್ಡ್ ಮತ್ತು ವೋಟರ್ ಐಡಿ ಕೇವಲ ಗುರುತಿನ ಅಥವಾ ತೆರಿಗೆ ಸಂಬಂಧಿತ ದಸ್ತಾವೇಜುಗಳು ಎಂದು ಕೋರ್ಟ್ ಸ್ಪಷ್ಟಪಡಿಸಿದೆ. ಇವುಗಳು ಭಾರತೀಯ ನಾಗರಿಕತ್ವದ ಪ್ರಮಾಣವಲ್ಲ. ವೋಟರ್ ಪಟ್ಟಿಗಳಲ್ಲೂ ಗಂಭೀರ ವ್ಯತ್ಯಾಸಗಳಿದ್ದವು. ಕುಟುಂಬ ಸದಸ್ಯರ ವಯಸ್ಸು ವಿವಿಧ ವರ್ಷಗಳಲ್ಲಿ ಅಸಾಧಾರಣವಾಗಿ ಬದಲಾಗಿತ್ತು. ಮೂರು ವಿವಿಧ ಗ್ರಾಮಗಳ ವೋಟರ್ ಪಟ್ಟಿಗಳಲ್ಲಿ ಹೆಸರುಗಳಿದ್ದರೂ, ಅವುಗಳ ನಡುವೆ ವಿಶ್ವಾಸಾರ್ಹ ಸಂಬಂಧ ಸಾಬೀತುಪಡಿಸಲು ಸಾಧ್ಯವಾಗಲಿಲ್ಲ.

ನಾಗರಿಕತ್ವ ಸಾಬೀತುಪಡಿಸುವ ಜವಾಬ್ದಾರಿ ವ್ಯಕ್ತಿಯದ್ದೇ ಆಗಿದೆ. ಕೇವಲ ದಸ್ತಾವೇಜುಗಳನ್ನು ಸಲ್ಲಿಸುವುದು ಸಾಕಾಗಲ್ಲ. ಅವು ಕಾನೂನುಬದ್ಧವಾಗಿ ಸ್ವೀಕಾರಾರ್ಹವಾಗಿರಬೇಕು ಮತ್ತು ವ್ಯಕ್ತಿಯು ತನ್ನ ಪೂರ್ವಜರೊಂದಿಗೆ ಸ್ಪಷ್ಟ ಸಂಬಂಧ ಹೊಂದಿದ್ದಾನೆ ಎಂದು ಸಾಬೀತುಪಡಿಸಬೇಕು ಎಂದು ಹೈಕೋರ್ಟ್ ಒತ್ತಿ ಹೇಳಿದೆ.

## ಕಲ್ಲುಕ್ವಾರಿ ದುರಂತ: ಮಾಲೀಕರ ವಿರುದ್ಧ ಕ್ರಮ ಜರುಗಿಸಿ–ಛಲವಾದಿ ನಾರಾಯಣಸ್ವಾಮಿ ಆಗ್ರಹ



**ಬೆಂಗಳೂರು, ಜು.2:** ದುರಂತ ನಡೆದ ಕ್ರಷರ್ ಕ್ವಾರಿ ಯಾರಿಗೇ ಸೇರಿದ್ದರೂ ಕ್ರಮ ಜರುಗಿಸಬೇಕು ಎಂದು ವಿಧಾನಪರಿಷತ್ತಿನ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆಗ್ರಹಿಸಿದ್ದಾರೆ.

ಬೆಂಗಳೂರು ದಕ್ಷಿಣ ತಾಲೂಕಿನ ಮಾದಪಟ್ಟಣದ ಕ್ರಷರ್ ಕ್ವಾರಿ ದುರಂತದಲ್ಲಿ ಗಾಯಗೊಂಡು ಕೆಂಗೇರಿಯ ಆರ್.ಆರ್.ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಕಾರ್ಮಿಕರನ್ನು ಇಂದು ಭೇಟಿ ಮಾಡಿದ ಅವರು ಆರೋಗ್ಯ ವಿಚಾರಿಸಿದ ಬಳಿಕ ಮಾಧ್ಯಮಗಳ ಜೊತೆ, ರಾಜಕಾರಣ ಮಾಡುವುದು ಗಣಿಗಾರಿಕೆಗಾಗಿ ಅಲ್ಲ; ರಿಯಲ್ ಎಸ್ಟೇಟ್, ಗಣಿಗಾರಿಕೆ ರಾಜಕಾರಣದ ಭಾಗವಲ್ಲ ಎಂದು ನುಡಿದರು. ಜನರ ಸಮಸ್ಯೆಗೆ ಸ್ಪಂದಿಸಿ ಕೆಲಸ ಮಾಡುವುದು ರಾಜಕಾರಣದ ಭಾಗ ಎಂದು ತಿಳಿಸಿದರು. ವಿವಿಧ ಗಲಭೆ ಪ್ರಕರಣದ ಕ್ರಿಮಿನಲ್ ಮೊಕದ್ದಮೆಗಳನ್ನು ಹಿಂಪಡೆಯುವ ಸರಕಾರದ ನಿರ್ಧಾರಕ್ಕೆ ಹೈಕೋರ್ಟ್ ತಡೆ ನೀಡಿದ ಕುರಿತ ಪ್ರಶ್ನೆಗೆ ಅವರು ಉತ್ತರಿಸಿದರು. ಹಿಂದೆ ಏನೇನು ಘಟನೆಗಳು ನಡೆದಿವೆ ಎಂಬುದು ಪೊಲೀಸರ ವರದಿಯಲ್ಲಿದೆ. ಪೊಲೀಸರ ಮೇಲೆ ಹಲ್ಲೆ ಆಗಿದೆ. ಪೊಲೀಸರ ವಾಹನಗಳು ಜಖಂ ಆಗಿದೆ. ಅಲ್ಲಿ ತಳವಾರು, ಕತ್ತಿ ಝಳಪಿಸಿದ್ದನ್ನು ನೋಡಿದ್ದೇವೆ. ಇವೆಲ್ಲವೂ ವರದಿಯಲ್ಲಿದ್ದರೂ ಈ ಸರಕಾರ ಓಟ್ ಬ್ಯಾಂಕಿನ ಓಲೈಕೆಗಾಗಿ ಮಾಡುವ ತಪ್ಪುಗಳು ಸಮಾಜಘಾತುಕ ಶಕ್ತಿಗಳಿಗೆ ಪ್ರೇರೇಪಣೆ ಆಗುತ್ತಿವೆ ಎಂದು ಟೀಕಿಸಿದರು.

ಇಂಥವುಗಳನ್ನು ವಾಪಸ್ ತೆಗೆಯಬಾರದೆಂದು ನಮ್ಮ ಹೋರಾಟ ನಡೆದಿತ್ತು. ಅದಕ್ಕೆ ಸರಿಯಾಗಿ ಇವತ್ತು ಕೋರ್ಟಿನಲ್ಲೂ ಅವರಿಗೆ ಮೋಕ್ಷ ಆಗಿದೆ.ಹೇಳೋದು ಸಂವಿಧಾನ– ತಿನ್ನೋದು ಬದನೆಕಾಯಿ ಅಲ್ಲವೇ ಎಂದು ಟೀಕಿಸಿದರು. ಆನೆ ಹೋಗಿದ್ದೇ ದಾರಿ ಎಂಬಂತೆ ನಡೆದುಕೊಂಡರೆ ನಿಮಗೆ ಬುದ್ಧಿ ಹೇಳಲು ಕೋರ್ಟ್ ಇದೆ. ಜನರೂ ಇದ್ದಾರೆ ಎಂದು ತಿಳಿಸಿದರು.

## ಜು.7-8 ರಂದು 14ನೇ ಅಖಿಲ ಭಾರತ ಶರಣ ಸಾಹಿತ್ಯ ಸಮ್ಮೇಳನ



**ಬೆಂಗಳೂರು, ಜು.2:** 1986ರಲ್ಲಿ ಸುತ್ತೂರು ವೀರಸಿಂಹಾಸನ ಮಹಾಸಂಸ್ಥಾನ ಮಠದ ಪರಮಪೂಜ್ಯ ಡಾ. ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಸ್ಥಾಪಿಸಿದ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ಶರಣ ಸಾಹಿತ್ಯ ಪ್ರಕಟಣೆ ಮತ್ತು ಪ್ರಸಾರ ಕಾರ್ಯದಲ್ಲಿ ಪ್ರಾಮಾಣಿಕವಾಗಿ ಶ್ರಮಿಸುತ್ತಾ ಬಂದಿದೆ. ಪರಿಷತ್ತಿನ ಆಶ್ರಯದಲ್ಲಿ ಪ್ರತಿವರ್ಷ ತಾಲ್ಲೂಕು, ಜಿಲ್ಲೆ ಮತ್ತು ರಾಜ್ಯಮಟ್ಟದಲ್ಲಿ ಸಮ್ಮೇಳನಗಳು ವಿಚಾರಗೋಷ್ಠಿಗಳು ದತ್ತಿ ಉಪನ್ಯಾಸಗಳು ನಿರಂತರವಾಗಿ ನಡೆಯತ್ತಿವೆ. ಅಖಿಲ ಭಾರತ ಶರಣ ಸಾಹಿತ್ಯ ಸಮ್ಮೇಳನಗಳನ್ನು ರಾಜ್ಯದ ವಿವಿಧೆಡೆ ಬಹಳ ಅರ್ಥಪೂರ್ಣವಾಗಿ ತುಂಬ ವ್ಯವಸ್ಥಿತವಾಗಿ ಆಚರಿಸುತ್ತಾ ಬರಲಾಗಿದೆ. ಕಳೆದ ವರ್ಷ ಚಿತ್ರದುರ್ಗದಲ್ಲಿ 13ನೆಯ ಶರಣ ಸಾಹಿತ್ಯ ಸಮ್ಮೇಳನವನ್ನು ಅತ್ಯಂತ ವಿಜೃಂಭಣೆಯಿಂದ ಆಚರಿಸಲಾಯಿತು. ಈ ವರ್ಷ ಅಖಿಲ ಭಾರತ 14ನೆಯ ಶರಣ ಸಾಹಿತ್ಯ ಸಮ್ಮೇಳನವನ್ನು ಜುಲೈ 7 ಮತ್ತು 8 ರಂದು ಬೆಂಗಳೂರಿನ ವಿಜಯನಗರದ ಶ್ರೀಬಸವೇಶ್ವರ ಸುಜ್ಞಾನ ಮಂಟಪದಲ್ಲಿ ಆಚರಿಸಲು ಯೋಜಿಸಲಾಗಿದೆ. ಈ ಸಮ್ಮೇಳನದಲ್ಲಿ ನಾಡಿನ ವಿವಿಧ ಜಿಲ್ಲೆಗಳ ಶರಣ ಸಾಹಿತ್ಯ ಪರಿಷತ್ತಿನ ಸದಸ್ಯರುಗಳು ಮತ್ತು ಶರಣತತ್ವ ಅಭಿಮಾನಿಗಳು ಪಾಲ್ಗೊಳ್ಳಲಿದ್ದಾರೆ.

ಜುಲೈ 7ರಂದು ಬೆಳಗ್ಗೆ 10.30ಕ್ಕೆ ನಡೆಯುವ ಈ ಉದ್ಘಾಟನಾ ಸಮಾರಂಭದ ದಿವ್ಯ ಸಾನ್ನಿಧ್ಯವನ್ನು ಜಗದ್ಗುರು ಶ್ರೀ ಸುತ್ತೂರು ವೀರಸಿಂಹಾಸನ ಮಹಾಸಂಸ್ಥಾನ ಮಠದ ಪರಮಪೂಜ್ಯ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು ಮತ್ತು ಶ್ರೀ ಸಿದ್ಧಗಂಗಾ ಕ್ಷೇತ್ರ ಪರಮಪೂಜ್ಯ ಶ್ರೀ ಸಿದ್ಧಲಿಂಗ ಮಹಾಸ್ವಾಮಿಗಳವರುಗಳು ವಹಿಸಲಿದ್ದಾರೆ. ಉದ್ಘಾಟನೆಯನ್ನು ನಮ್ಮ ರಾಜ್ಯದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೆರವೇರಿಸಲಿದ್ದಾರೆ.

ಕಲ್ಯಾಣ ಸಂಗಮ ಸ್ಮರಣ–ಸಂಚಿಕೆಯನ್ನು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಖಾತೆ ರಾಜ್ಯ ಸಚಿವ ವಿ. ಸೋಮಣ್ಣನವರು ಬಿಡುಗಡೆ ಮಾಡಲಿದ್ದಾರೆ. ಮಹಾಮನೆ ವಿಶೇಷ ಸಂಚಿಕೆಯನ್ನು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವರೂ ಹಾಗೂ ಅಖಿಲ ಭಾರತ 14ನೆಯ ಶರಣ ಸಾಹಿತ್ಯ ಸಮ್ಮೇಳನದ ಸ್ವಾಗತ ಸಮಿತಿಯ ಅಧ್ಯಕ್ಷ ಡಾ. ಎಂ.ಬಿ.ಪಾಟೀಲ್‌ರವರು ಬಿಡುಗಡೆ ಮಾಡಲಿದ್ದಾರೆ. ಈ ಸಮ್ಮೇಳನದ ಸರ್ವಾಧ್ಯಕ್ಷರಾಗಿ ನಾಡಿನ ಹಿರಿಯ ಸಾಹಿತಿಗಳಾದ ನಾಡೋಜ ಗೊ.ರು. ಚನ್ನಬಸಪ್ಪರವರು ಆಯ್ಕೆಯಾಗಿದ್ದಾರೆ.

ಎರಡು (2) ದಿನಗಳ ಕಾಲ ನಡೆಯುವ ಈ ಸಮ್ಮೇಳನದಲ್ಲಿ ಸಾಂಸ್ಕೃತಿಕ ನಾಯಕ ಬಸವಣ್ಣ, ಶರಣ ಸಾಹಿತ್ಯದಲ್ಲಿ ಮಹಿಳಾ ಸಂವೇದನೆ, ವಚನ ಪಿತಾಮಹ ಡಾ. ಫ. ಗು ಹಳಕಟ್ಟಿ ಸಂಸ್ಮರಣೆ' ಹಾಗು 'ಯುವ ಜನರತ್ತ ಶರಣ ಸಾಹಿತ್ಯ' ಗೋಷ್ಠಿಗಳು ನಡೆಯಲಿವೆ. ಇದರೊಂದಿಗೆ ಆಧುನಿಕ ವಚನ ಗೋಷ್ಠಿಯನ್ನು ಸಹ ಏರ್ಪಡಿಸಲಾಗಿದೆ. ವೈಜಯಂತಿ ಕಾಶಿರವರಿಂದ ನೃತ್ಯರೂಪಕ, ಎಂ.ಡಿ. ಪಲ್ಲವಿ, ಸಂಗೀತಾ ಕಟ್ಟಿ, ಮೃತ್ಯುಂಜಯ ದೊಡ್ಡವಾಡ, ಪಂ. ರವೀಂದ್ರ ಸೊರಗಾವಿ, ಕಿಕ್ಕೇರಿ ಕೃಷ್ಣಮೂರ್ತಿ, ಪಾವನಿ ಭಾರದ್ವಾಜ್ ಅವರಿಂದ ವಚನ ಗಾಯನವನ್ನು ಸಹ ಏರ್ಪಡಿಸಲಾಗಿದೆ. ಸಮಾರೋಪ ಸಮಾರಂಭದಲ್ಲಿ, ಧಾರವಾಡದ ನಾಗರತ್ನ ಹಡಗಲಿರವರ ರತಿಕಾ ನೃತ್ಯ ಕಲಾ ನಿಕೇತನರವರಿಂದ ನೃತ್ಯರೂಪಕ ಹಾಗೂ ಶಿವರಾತ್ರಿ ನಾಟಕವನ್ನು ಪ್ರದರ್ಶಿಸಲಾಗುತ್ತದೆ.

ಈ ಸಮ್ಮೇಳನದ ಸಮಾರೋಪ ಸಮಾರಂಭ ಜುಲೈ 8ರಂದು ಸಂಜೆ 5.00ಗಂಟೆಗೆ ನಡೆಯಲಿದ್ದು, ಸಮಾರಂಭದ ದಿವ್ಯ ಸಾನಿಧ್ಯವನ್ನು ಜಗದ್ಗುರು ಡಾ. ಶ್ರೀ ತೋಂಟದ ಸಿದ್ಧರಾಮ ಮಹಾಸ್ವಾಮಿಗಳು, ಜಗದ್ಗುರು ಡಾ. ಶ್ರೀ ಗುರುಸಿದ್ದ ರಾಜ ಯೋಗೀಂದ್ರ ಮಹಾಸ್ವಾಮಿಗಳು, ಮೂರು ಸಾವಿರ ಮಠ, ಹುಬ್ಬಳ್ಳಿ, ಡಾ. ಶ್ರೀ ಬಸವಲಿಂಗ ಪಟ್ಟದ್ದೇವರು ಶ್ರೀ ಹಿರೇಮಠ ಮಹಾಸಂಸ್ಥಾನ, ಭಾಲ್ಕಿರವರು ವಹಿಸಲಿದ್ದಾರೆ.

ಈ ಸಮಾರಂಭದಲ್ಲಿ ನಾಡಿನ ಹಿರಿಯ ಸಾಧಕರಿಗೆ ಸಂಸದ ಆದ ಬಸವರಾಜ ಎಸ್. ಬೊಮ್ಮಾಯಿಯವರು ಅಭಿನಂದನೆ ಸಲ್ಲಿಸಲಿದ್ದಾರೆ. ಈ ಸಂದರ್ಭದಲ್ಲಿ ಶರಣ ಸಾಹಿತ್ಯಕ್ಕೆ ಸಂಬಂಧಿಸಿದ ಅನೇಕ ಅನುಭಾವ ಕೃತಿಗಳನ್ನು ಕರ್ನಾಟಕ ಸರ್ಕಾರದ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾದ ಶ್ರೀ ಈಶ್ವರ್ ಬಿ. ಖಂಡ್ರೆಯವರು ಬಿಡುಗಡೆ ಮಾಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಕೆ.ಎಲ್.ಇ. ವಿಶ್ವವಿದ್ಯಾಲಯದ ಕುಲಾಧಿಪತಿಗಳು ಮತ್ತು ಮಾಜಿ ಸಂಸದರೂ ಆದ ಪದ್ಮಶ್ರೀ ಡಾ. ಪ್ರಭಾಕರ್ ಕೋರೆ ಮತ್ತು ಶಾಸಕರು, ಭಾರತೀಯ ಜನತಾ ಪಕ್ಷದ ಕರ್ನಾಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರರವರು ಮತ್ತು ಕರ್ನಾಟಕ ವೀರಶೈವ ವಿದ್ಯಾಭಿವೃದ್ಧಿ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಬಿ.ಎಸ್ ಪರಮಶಿವಯ್ಯ ಅವರು ಹಾಗೂ ರಮಣಶ್ರೀ ಸಮೂಹ ಸಂಸ್ಥೆಗಳ ಅಧ್ಯಕ್ಷ ನಾಡೋಜ ಎಸ್. ಷಡಕ್ಷರಿ ಅವರು ಪಾಲ್ಗೊಳ್ಳಲಿದ್ದಾರೆ.

1988ರಲ್ಲಿ ಡಾ. ಆರ್.ಸಿ. ಹಿರೇಮಠರವರು ಸಮ್ಮೇಳನಾಧ್ಯಕ್ಷರಾಗಿದ್ದ ಅಖಿಲ ಭಾರತ 2ನೆಯ ಶರಣ ಸಾಹಿತ್ಯ ಸಮ್ಮೇಳನವು ಬೆಂಗಳೂರಿನಲ್ಲಿ ನಡೆದಿತ್ತು.

ಆನಂತರ ಇದೀಗ ದೀರ್ಘಾವಧಿಯ ನಂತರ ಬೆಂಗಳೂರಿನಲ್ಲಿ ಅಖಿಲ ಭಾರತ 14ನೆಯ ಶರಣ ಸಾಹಿತ್ಯ ಸಮ್ಮೇಳನವು ನಡೆಯುತ್ತಿರುವುದು ತುಂಬ ಗಮನಾರ್ಹ ವಿಷಯವಾಗಿವೆ. ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ। ಸಿ. ಸೋಮಶೇಖರ ತಿಳಿಸಿದ್ದಾರೆ.

## ಅರಿವು ಕೇಂದ್ರಗಳ ಬಲವರ್ಧನೆ, ಕಲೆ–ಸಂಸ್ಕೃತಿ ವಿನಿಮಯಕ್ಕಾಗಿ ಜರ್ಮನ್ ಸಂಸ್ಥೆಯೊಂದಿಗೆ ಒಡಂಬಡಿಕೆ: ಸಚಿವ ಈಶ್ವರ ಖಂಡ್ರೆ

**ಬೆಂಗಳೂರು, ಜು.2:** ರಾಜ್ಯದ 5886 ಅರಿವು ಕೇಂದ್ರ (ಗ್ರಾಮ ಗ್ರಂಥಾಲಯಗಳ) ಬಲವರ್ಧನೆಗೆ ಹಾಗೂ ಕಲೆ ಮತ್ತು ಸಂಸ್ಕೃತಿಯ ವಿನಿಮಯಕ್ಕಾಗಿ ಜರ್ಮನಿಯ ಗೋಥೆ ಸಂಸ್ಥೆಯೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.

ವಿಕಾಸಸೌಧದ ಕಚೇರಿಯಲ್ಲಿಂದು ಒಡಂಬಡಿಕೆ ಒಪ್ಪಂದ ವಿನಿಮಯದ ಬಳಿಕ ಮಾತನಾಡಿದ ಅವರು, ಗೋಥೆ ಸಂಸ್ಥೆ ಕಲೆ, ಸಂಸ್ಕೃತಿ ಮತ್ತು ಶಿಕ್ಷಣ ಜಾಲವನ್ನು ರೂಪಿಸುವ ಮೂಲಕ ಗ್ರಾಮೀಣ ಜನರಿಗೆ ವಿಶೇಷವಾಗಿ ವಿದ್ಯಾರ್ಥಿಗಳಿಗೆ ನೆರವಾಗಲಿದೆ ಎಂದರು. ಅವಧಿಗೆ ಗೋಥೆ ಇನ್ಸ್ ಸ್ಟಿಟ್ಯೂಟ್ ಮುಂದಿನ 2 ವರ್ಷದಲ್ಲಿ 1.8 ಕೋಟಿ ರೂ. ವೆಚ್ಚ ಮಾಡುತ್ತಿದ್ದು, 9 ಲಕ್ಷ ರೂ. ಮೌಲ್ಯದ ಮಕ್ಕಳ ಕಥಾ ಪುಸ್ತಕಗಳನ್ನು ಅರಿವು ಕೇಂದ್ರಗಳಿಗೆ



ಕೊಡುಗೆಯಾಗಿ ನೀಡಿದೆ ಎಂದರು.

ಇದಕ್ಕೆ ಕನೆಕ್ಟಿಂಗ್ ಡಾಟ್ಸ್ ಅಂದರೆ ವಿವಿಧ ಸಂಸ್ಥೆಗಳ ಅನುಭವವನ್ನು ಒಗ್ಗೂಡಿಸಿ, ಗ್ರಾಮೀಣ ಮತ್ತು ನಗರ ಪ್ರದೇಶದ ವಿದ್ಯಾರ್ಥಿಗಳ, ಜನರ ನಡುವೆ ಇರುವ ಜ್ಞಾನ ಕಂದಕವನ್ನು ನಿವಾರಿಸಲು ಒಂದು ಉತ್ತಮ ಸಂಪರ್ಕ ಜಾಲವನ್ನು ರೂಪಿಸುತ್ತದೆ ಎಂದರು.

ಕರ್ನಾಟಕದಲ್ಲಿ 5928 ಗ್ರಾಮ ಪಂಚಾಯಿತ್ತಿಗಳಿದ್ದು, ರಾಜ್ಯದಾದ್ಯಂತ ಒಟ್ಟು 5886 ಅರಿವು ಕೇಂದ್ರ ಅಥವಾ ಗ್ರಾಮೀಣ ಗ್ರಂಥಾಲಯಗಳಿವೆ. ಈ ಎಲ್ಲ ಗ್ರಂಥಾಲಯಗಳಲ್ಲಿರುವ ಮೇಲ್ವಿಚಾರಕರು ಅಂದರೆ ಗ್ರಂಥಪಾಲಕರ ಸಾಮರ್ಥ್ಯ ಬಲವರ್ಧನೆಗೆ ಪಂಚಾಯತ್ ರಾಜ್ ಇಲಾಖೆ ಮತ್ತು ಗೋಥೆ ಸಂಸ್ಥೆ ಒಗ್ಗೂಡಿ ಶ್ರಮಿಸಲಿವೆ. ಜೊತೆಗೆ ಕಲೆ, ಸಂಸ್ಕೃತಿಯ ವಿನಿಮಯ ಕಾರ್ಯಕ್ರಮದಡಿ ಕರ್ನಾಟಕದ ಗ್ರಾಮೀಣ ಕಲೆಗಳನ್ನು ಜರ್ಮನಿಯ ಜನರಿಗೆ ಪರಿಚಯಿಸುವ ಅದೇ ರೀತಿಯಲ್ಲಿ ಜರ್ಮನಿಯ ಸಾಂಸ್ಕೃತಿಕ ಕಲೆಗಳನ್ನು ಕರುನಾಡ ಗ್ರಾಮೀಣ ಜನತೆಗೆ ವಿಶೇಷವಾಗಿ ಯುವಜನರಿಗೆ ಪರಿಚಯಿಸುವ ವಿನಿಮಯ ಕಾರ್ಯಕ್ರಮವನ್ನೂ ಆಯೋಜಿಸುತ್ತದೆ ಎಂದರು.

**ಜರ್ಮನಿಯಲ್ಲಿ ಉದ್ಯೋಗಾವಕಾಶ:–** ಜರ್ಮನಿಯಲ್ಲಿ ಕುಶಲಿ ಕಾರ್ಮಿಕರ ಬೇಡಿಕೆ ಇದ್ದು, ಈ ಯೋಜನೆಯಡಿ ಗ್ರಾಮೀಣ ಭಾಗದ ಕುಶಲ ಯುವಜನರಿಗೆ ಜರ್ಮನ್ ಭಾಷೆಯನ್ನು ಕಲಿಸುವ ಮೂಲಕ ಭಾರತದ ಗ್ರಾಮೀಣ ಅಭ್ಯರ್ಥಿಗಳಿಗೆ ಜರ್ಮನಿಯಲ್ಲಿ ಉದ್ಯೋಗ ಪಡೆಯಲೂ ನೆರವಾಗಲಿದೆ. ಇಂದು ಸರ್ಕಾರ ಮತ್ತು ಗೋಥೆ ಇನ್ಸ್ಟಿಟ್ಯೂಟ್ ನಡುವೆ ಒಡಂಬಡಿಕೆ ಪತ್ರವನ್ನು ವಿನಿಮಯ ಮಾಡಿಕೊಳ್ಳಲಾಗುತ್ತಿದ್ದು, ಈ ಸಮಾರಂಭಕ್ಕೆ ನಾವೆಲ್ಲರೂ ಸಾಕ್ಷಿಯಾಗಿದ್ದೇವೆ ಎಂದರು.

ಜರ್ಮನಿಯಿಂದ ಆಗಮಿಸಿರುವ ಗೋಥೆ ಇನ್ಸ್‌ಸ್ಟಿಟೂಟ್‌ನ ನಿರ್ದೇಶಕರಾದ ಮಿಷಲ್ ಐನ್ಸ್ ಸ್ಟಿನ್, ಮ್ಯಾಕ್ಸ್ ಮುಲ್ಲರ್ ಭವನದ ಪ್ರಧಾನ ಗ್ರಂಥಪಾಲಕರಾದ ಶೇಷಗಿರಿ ಕುಲಕರ್ಣಿ, ಇಲಾಖೆ ಕಾರ್ಯದರ್ಶಿಗಳಾದ ಡಿ. ರಂದೀಪ್, ಆಯುಕ್ತೆ ಡಾ. ಅರುಂಧತಿ ಚಂದ್ರಶೇಖರ್ ಮೊದಲಾದವರು ಇದ್ದರು.



ತೆಲಂಗಾಣ ಸಚಿವ ಡಿ ಶ್ರೀಧರ್ ಬಾಬು ಅವರು ಸಿಎಂ ಡಿ ಕೆ ಶಿವಕುಮಾರ್ ಅವರನ್ನು ಸದಾಶಿವನಗರ ನಿವಾಸದಲ್ಲಿ ಗುರುವಾರ ಭೇಟಿ ಮಾಡಿ ಸಮಾಲೋಚನೆ ನಡೆಸಿದರು.

### ಕಲಬುರಗಿ ಜವಳಿಪಾರ್ಕ್‌ಗೆ ಸಂಪುಟ ಅನುಮೋದನೆ

## ಕೆಐಎಡಿಬಿ ಮೂಲಕ ಅಭಿವೃದ್ಧಿಪಡಿಸಲು ಒಪ್ಪಿಗೆ: ಸಚಿವ ಪ್ರಿಯಾಂಕ್ ಖರ್ಗೆ

**ಬೆಂಗಳೂರು,ಜು.2:** ರಾಜ್ಯದ ಕೈಗಾರಿಕಾ ಹಾಗೂ ಉದ್ಯೋಗ ಸೃಷ್ಟಿ ಕ್ಷೇತ್ರದಲ್ಲಿ ಮಹತ್ವದ ಹೆಜ್ಜೆಯಾಗಿ, ಕಲ್ಯಾಣ ಕರ್ನಾಟಕ ಭಾಗದ ಕಲಬುರಗಿ ಜಿಲ್ಲೆಯಲ್ಲಿ ಸ್ಥಾಪನೆಗೊಳ್ಳುತ್ತಿರುವ ಪಿಎಂ–ಮಿತ್ರ ಬೃಹತ್ ಜವಳಿ ಪಾರ್ಕ್ ಅಭಿವೃದ್ಧಿಗೆ ಸಂಬಂಧಿಸಿದ ಮಹತ್ವದ ನಿರ್ಣಯವನ್ನು ಇಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಕೈಗೊಳ್ಳಲಾಗಿದೆ ಎಂದು ಗೃಹ, ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ–ಆಡಳಿತ



ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಪಿಎಂ–ಮಿತ್ರ ಯೋಜನೆಯಡಿ ಕಲಬುರಗಿಯಲ್ಲಿ 1000 ಎಕರೆ ಪ್ರದೇಶದಲ್ಲಿ ದೇಶದ ಅತಿದೊಡ್ಡ ಸಮಗ್ರ ಜವಳಿ ಉದ್ಯಾನವನ ಸ್ಥಾಪನೆಗೆ ಈಗಾಗಲೇ ಅನುಮೋದನೆ ದೊರೆತಿದ್ದು, ಯೋಜನೆಯನ್ನು ಇನ್ನಷ್ಟು ವೇಗವಾಗಿ ಮತ್ತು ಸ್ಪರ್ಧಾತ್ಮಕವಾಗಿ ಅಭಿವೃದ್ಧಿಪಡಿಸುವ ಉದ್ದೇಶದಿಂದ ಇದುವರೆಗೆ ಪ್ರಸ್ತಾಪಿಸಲಾಗಿದ್ದ ಪಿಪಿಪಿ ಮಾದರಿಯಿಂದ ರಾಜ್ಯದ ಸಂಸ್ಥೆಯಾದ ಕೆ.ಐ.ಎ.ಡಿ.ಬಿ ಮೂಲಕ ಅಭಿವೃದ್ಧಿಪಡಿಸಲು ಸಂಪುಟ ಅನುಮೋದನೆ ನೀಡಿದೆ.

### 1700 ಕೋಟಿ ವೆಚ್ಚ, ಲಕ್ಷಕ್ಕೂ ಹೆಚ್ಚು ಉದ್ಯೋಗ

**ಈ ಯೋಜನೆಯ ಒಟ್ಟು ಅಂದಾಜು ವೆಚ್ಚ 1700 ಕೋಟಿ ರೂ. ಆಗಿದ್ದು, ಮೊದಲ ಹಂತದಲ್ಲಿ ಸುಮಾರು 320 ಕೋಟಿ ರೂ. ವೆಚ್ಚದಲ್ಲಿ ಮೂಲಸೌಕರ್ಯ ಅಭಿವೃದ್ಧಿ ಕಾರ್ಯಗಳು ಕೈಗೊಳ್ಳಲಾಗುತ್ತದೆ. ಇದರಲ್ಲಿ 1000 ಎಕರೆ ಪ್ರದೇಶದ ಭೂ ಅಭಿವೃದ್ಧಿ, ರಸ್ತೆ ನಿರ್ಮಾಣ, ಚರಂಡಿ, ಒಳಚರಂಡಿ ಮತ್ತು ಅಪ್ಲುವೆಂಟ್ ಲೈನ್ ನೆಟ್‌ವರ್ಕ್, ವಿದ್ಯುತ್ ವಿತರಣಾ ವ್ಯವಸ್ಥೆ, ಬೀದಿ ದೀಪಗಳು, 2.5 ಎಂ.ಎಲ್.ಡಿ ಸಾಮರ್ಥ್ಯದ ಶುದ್ಧೀಕರಣ ಘಟಕ, ಪ್ಲಗ್ ಅಂಡ್ ಪ್ಲೆ ಕೈಗಾರಿಕಾ ಕಟ್ಟಡಗಳು, ನೀರು ಸರಬರಾಜು ವ್ಯವಸ್ಥೆ ಸೇರಿದಂತೆ ಮೂಲಭೂತ ಸೌಕರ್ಯಗಳು ನಿರ್ಮಾಣವಾಗಲಿವೆ. ಈ ಯೋಜನೆಯಿಂದ ಕಲ್ಯಾಣ ಕರ್ನಾಟಕ ಭಾಗದಲ್ಲಿ ಕೈಗಾರಿಕೀಕರಣಕ್ಕೆ ಹೊಸ ಉತ್ತೇಜನ ಸಿಗಲಿದ್ದು, ಒಂದು ಲಕ್ಷಕ್ಕೂ ಹೆಚ್ಚು ನೇರ ಮತ್ತು ಪರೋಕ್ಷ ಉದ್ಯೋಗಾವಕಾಶಗಳು ಸೃಷ್ಟಿಯಾಗಲಿವೆ. ರಾಜ್ಯದ ಜವಳಿ ಮತ್ತು ರೆಡಿಮೇಡ್ ಗಾರ್ಮೆಂಟ್ ಕ್ಷೇತ್ರಕ್ಕೆ ಜಾಗತಿಕ ಮಾರುಕಟ್ಟೆ ಅವಕಾಶಗಳು ವಿಸ್ತಾರವಾಗಲಿದ್ದು, ಹೂಡಿಕೆ ಆಕರ್ಷಣೆ ಹಾಗೂ ರಫ್ತು ಸಾಮರ್ಥ್ಯವೂ ಹೆಚ್ಚಲಿದೆ ಎಂದು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ವಿವರಿಸಿದ್ದಾರೆ.**

**ರಾಜ್ಯ ಸರ್ಕಾರವು ಉದ್ಯೋಗ ಸೃಷ್ಟಿ, ಕೈಗಾರಿಕಾ ಹೂಡಿಕೆ ಆಕರ್ಷಣೆ ಮತ್ತು ಪ್ರಾದೇಶಿಕ ಸಮತೋಲ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡುತ್ತಿದ್ದು, ಪಿಎಂ–ಮಿತ್ರ ಯೋಜನೆ ರಾಜ್ಯದ ಕೈಗಾರಿಕಾ ಇತಿಹಾಸದಲ್ಲಿ ಮಹತ್ವದ ಮೈಲಿಗಲ್ಲಾಗಲಿದೆ ಎಂದು ಅವರು ಹೇಳಿದ್ದಾರೆ.**

## ಗೃಹಲಕ್ಷ್ಮಿ ಯೋಜನೆ ಅಕ್ರಮಗಳ ತನಿಖೆಗೆ ಎಸ್‌ಐಟಿ ರಚಿಸಿ: ಸಿ.ಟಿ.ರವಿ ಆಗ್ರಹ

**ಬೆಂಗಳೂರು, ಜು.2:** ಗೃಹಲಕ್ಷ್ಮಿ ಯೋಜನೆ ಅನುಷ್ಠಾನದಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ಕುರಿತು ಸಮಗ್ರ ತನಿಖೆ ನಡೆಸಲು ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸಬೇಕು ಎಂದು ರಾಜ್ಯ ಸರ್ಕಾರಕ್ಕೆ ಬಿಜೆಪಿ ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಆಗ್ರಹಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಯೋಜನೆಯಡಿ ನಕಲಿ ಬ್ಯಾಂಕ್ ಖಾತೆಗಳಿಗೆ ಹಾಗೂ ಮೃತಪಟ್ಟ ಫಲಾನುಭವಿಗಳ ಖಾತೆಗಳಿಗೂ ಹಣ ಜಮೆ ಮಾಡಲಾಗಿದೆ ಎಂಬ ಆರೋಪ ಕೇಳಿಬಂದಿದ್ದು, ಈ ವಿಚಾರವನ್ನು ಲೆಕ್ಕಪರಿಶೋಧಕ ಮತ್ತು ಮಹಾಲೆಕ್ಕಪಾಲಕರ (CAG) ವರದಿಯಲ್ಲೂ ಉಲ್ಲೇಖಿಸಲಾಗಿದೆ ಎಂದು ಹೇಳಿದರು.



ಗೃಹಲಕ್ಷ್ಮಿ ಯೋಜನೆಯಡಿ ಸುಮಾರು 5,000 ಕೋಟಿ ರೂ. ಮೊತ್ತ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ಜಮೆಯಾಗಿಲ್ಲ ಎಂದು ಆರೋಪಿಸಿದ ರವಿ, ಈ ಹಣ ದುರುಪಯೋಗ ಅಥವಾ ಅಕ್ರಮವಾಗಿ ವರ್ಗಾವಣೆಯಾಗಿರುವ ಸಾಧ್ಯತೆ ಇದೆ ಎಂದು ಅನುಮಾನ ವ್ಯಕ್ತಪಡಿ ಸಿದರು.

ಫಲಾನುಭವಿಗಳ ಖಾತೆಗೆ ಜಮೆಯಾಗಬೇಕಿದ್ದ ಹಣವನ್ನು ಲೂಟಿ ಮಾಡಲು ಕಾಂಗ್ರೆಸ್ ಸರ್ಕಾರ ಬೆಂಬಲ ನೀಡುತ್ತಿದೆಯೇ? ಈ ಪ್ರಕರಣದಲ್ಲಿ ಇದುವರೆಗೆ ಏಕೆ ಎಫ್‌ಐಆರ್ ದಾಖಲಿಸಿಲ್ಲ ಎಂದು ಪ್ರಶ್ನಿಸಿದರು.

ಯೋಜನೆಯಡಿ ಎರಡು ತಿಂಗಳ ಕಾಲ ಫಲಾನುಭವಿಗಳ ಖಾತೆಗೆ ಹಣ ಜಮೆಯಾಗಿರಲಿಲ್ಲ. ಈ ವಿಚಾರ ವಿಧಾನಸಭೆಯಲ್ಲೂ ವ್ಯಾಪಕ ಚರ್ಚೆಗೆ ಗ್ರಾಸವಾಗಿತ್ತು. ಆದರೂ ಸರ್ಕಾರ ಯಾವುದೇ ಸ್ಪಷ್ಟ ಕ್ರಮ ಕೈಗೊಂಡಿಲ್ಲ ಎಂದು ಟೀಕಿಸಿದರು.

ಇದೇ ವೇಳೆ, ಗ್ಯಾರಂಟಿ ಯೋಜನೆಗಳಿಗೆ ಸರ್ಕಾರ ವಿವಿಧ ಷರತ್ತುಗಳನ್ನು ವಿಧಿಸುತ್ತಿರುವ ಕ್ರಮವನ್ನೂ ಸಿ.ಟಿ. ರವಿ ಖಂಡಿಸಿದರು. ಸರ್ಕಾರ ಜನರಿಗೆ ನೀಡಿರುವ ಭರವಸೆಗಳನ್ನು ಯಾವುದೇ ಹೆಚ್ಚುವರಿ ಷರತ್ತುಗಳಿಲ್ಲದೆ ಜಾರಿಗೊಳಿಸಬೇಕು ಎಂದು ಆಗ್ರಹಿಸಿದರು.

### 2 ದಿನದಲ್ಲಿ 115 ಕಿ.ಮೀ. ಪಾದಚಾರಿ ಮಾರ್ಗಕ್ಕೆ ಮುಕ್ತಿ

## ಗುರುವಾರವೂ ನಗರದ ಐದು ಪಾಲಿಕೆ ವ್ಯಾಪ್ತಿಯಲ್ಲಿ ಒತ್ತುವರಿ ತೆರವು ಕಾರ್ಯಾಚರಣೆ

**ಬೆಂಗಳೂರು, ಜು.2:** ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರ ನಿರ್ದೇಶನದಂತೆ, ಜಿಬಿಎ ಮುಖ್ಯ ಆಯುಕ್ತರ ಮಾರ್ಗದರ್ಶನದಲ್ಲಿ ನಗರದ ಐದು ನಗರಪಾಲಿಕೆಗಳ ವ್ಯಾಪ್ತಿಯಲ್ಲಿ ಫುಟ್ಪಾತ್ ಒತ್ತುವರಿ ತೆರವು ಕಾರ್ಯಾಚರಣೆ ಗುರುವಾರವೂ ಮುಂದುವರಿಯಿತು.



ಪಾದಚಾರಿಗಳಿಗೆ ಸುರಕ್ಷಿತ ಮತ್ತು ಮುಕ್ತ ಸಂಚಾರ ಕಲ್ಪಿಸುವ ಉದ್ದೇಶದಿಂದ ಆರಂಭಿಸಿರುವ ಕಾರ್ಯಾಚರಣೆಯಲ್ಲಿ ಮೊದಲ ಎರಡು ದಿನಗಳಲ್ಲಿ ಒಟ್ಟು 115 ಕಿಲೋಮೀಟರ್ ಪಾದಚಾರಿ ಮಾರ್ಗವನ್ನು ಒತ್ತುವರಿಯಿಂದ ಮುಕ್ತಗೊಳಿಸಲಾಗಿದೆ.

ಮೊದಲ ದಿನ 70 ಕಿಲೋಮೀಟರ್ ಪಾದಚಾರಿ ಮಾರ್ಗ ತೆರವುಗೊಳಿಸಲಾಗಿದ್ದು, ಸುಮಾರು 2,000ಕ್ಕೂ ಹೆಚ್ಚು ತಾತ್ಕಾಲಿಕ ಶೆಡ್‌ಗಳನ್ನು ತೆರವುಗೊಳಿಸಲಾಯಿತು. ಮೆಟ್ರೋ ನಿಲ್ದಾಣ, ಬಸ್ ನಿಲ್ದಾಣ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿನ ಹೋಟೆಲ್, ತರಕಾರಿ ಅಂಗಡಿ, ತಳ್ಳುವ ಗಾಡಿ, ಅನಧಿಕೃತ ಜಾಹೀರಾತು ಫಲಕ, ತಾತ್ಕಾಲಿಕ ಶೆಲ್ಟರ್ ಸೇರಿದಂತೆ ಪಾದಚಾರಿಗಳಿಗೆ ಅಡ್ಡಿಯಾಗಿದ್ದ ಎಲ್ಲಾ ರೀತಿಯ ಒತ್ತುವರಿಗಳನ್ನು ತೆರವುಗೊಳಿಸಲಾಗಿದೆ.

ಇದರ ಜೊತೆಗೆ ಪಾದಚಾರಿ ಮಾರ್ಗದಲ್ಲಿದ್ದ ಅಕ್ರಮ ಸಿಮೆಂಟ್ ಕಟ್ಟೆಗಳು, ಗೋಡೆಗಳು, ಮರಗಳ ಸುತ್ತಲಿನ ಕಟ್ಟೆ–ಕಂಬಿಗಳು ಹಾಗೂ ನಂದಿನಿ ಹಾಲಿನ ಕೇಂದ್ರಗಳ ಬಳಿಯ ಅನಧಿಕೃತ ನಿರ್ಮಾಣಗಳನ್ನೂ ತೆರವು ಮಾಡಿ ಸಾರ್ವಜನಿಕರ ಓಡಾಟಕ್ಕೆ ಅನುಕೂಲ ಮಾಡಿಕೊಡಲಾಗಿದೆ ಎಂದು ನಗರಪಾಲಿಕೆ ಅಧಿಕಾರಿಗಳು ತಿಳಿಸಿದ್ದಾರೆ.

ಎರಡನೇ ದಿನವೂ ಕಾರ್ಯಾಚರಣೆ ಮುಂದುವರಿದಿದ್ದು, ಸುಮಾರು 45 ಕಿಲೋಮೀಟರ್ ರಸ್ತೆ ವ್ಯಾಪ್ತಿಯಲ್ಲಿ ಅನಧಿಕೃತ ಶೆಡ್ ಹಾಗೂ ಅಂಗಡಿಗಳನ್ನು ತೆರವು ಮಾಡಲಾಗಿದೆ. ಫುಟ್ಪಾತ್ ಮೇಲೆ ವ್ಯಾಪಾರ ನಡೆಸುತ್ತಿದ್ದ 700ಕ್ಕೂ ಹೆಚ್ಚು ವ್ಯಾಪಾರಿಗಳನ್ನು ತೆರವುಗೊಳಿಸಿ ಪಾದಚಾರಿಗಳಿಗೆ ಮುಕ್ತ ಸಂಚಾರಕ್ಕೆ ಅವಕಾಶ ಕಲ್ಪಿಸಲಾಗಿದೆ. ಆದರೆ ಕಾರ್ಯಾಚರಣೆಗೆ ವಿರೋಧವೂ ವ್ಯಕ್ತವಾಗಿದೆ. ತಮ್ಮ ಜೀವನೋಪಾಯ ಕಳೆದುಕೊಳ್ಳುತ್ತಿರುವ ಬಡ ವ್ಯಾಪಾರಿಗಳು, "ಇದು ಬಡವರ ಮೇಲಿನ ದಬ್ಬಾಳಿಕೆ" ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಗೌರಿಪಾಳ್ಯ ಹಾಗೂ ಟ್ಯಾನರಿ ರಸ್ತೆ ಭಾಗಗಳಲ್ಲಿ ಮಾತ್ರ ಒತ್ತುವರಿ ತೆರವು ಮಾಡಿಲ್ಲ ಎಂಬ ಆರೋಪವನ್ನೂ ಕೆಲವರು ಮಾಡಿದ್ದಾರೆ.

ಇನ್ನೊಂದೆಡೆ, ಸ್ಥಳೀಯ ರಾಜಕೀಯ ಮುಖಂಡರು ತಮ್ಮ ಕ್ಷೇತ್ರದ ವ್ಯಾಪಾರಿಗಳನ್ನು ತೆರವು ಮಾಡದಂತೆ ಅಧಿಕಾರಿಗಳ ಮೇಲೆ ಒತ್ತಡ ಹೇರುತ್ತಿದ್ದಾರೆ ಎಂಬ ಆರೋಪ ಕೇಳಿಬಂದಿದೆ. "ನಮ್ಮ ಕ್ಷೇತ್ರದ ಮತದಾರರನ್ನು ತೆರವು ಮಾಡಬೇಡಿ" ಎಂಬ ದೂರವಾಣಿ ಕರೆಗಳು ಬರುತ್ತಿವೆ. ಮುಂದಿನ ತಿಂಗಳು ನಡೆಯಲಿರುವ ಜಿಬಿಎ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಕೆಲ ನಾಯಕರು ರಾಜಕೀಯ ಒತ್ತಡ ಹೇರುತ್ತಿದ್ದಾರೆ ಎಂದು ಹೆಸರು ಬಹಿರಂಗಪಡಿಸಲು ಇಚ್ಛಿಸದ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಫುಟ್‌ಪಾತ್‌ಗಳನ್ನು ಪಾದಚಾರಿಗಳಿಗೆ ಮುಕ್ತಗೊಳಿಸುವ ಸರ್ಕಾರದ ಕಾರ್ಯಾಚರಣೆ ಒಂದು ಕಡೆ ವೇಗ ಪಡೆದುಕೊಂಡಿದ್ದರೆ, ಮತ್ತೊಂದೆಡೆ ಬಡ ವ್ಯಾಪಾರಿಗಳ ಅಸಮಾಧಾನ ಮತ್ತು ರಾಜಕೀಯ ಒತ್ತಡದ ಆರೋಪಗಳು ಚರ್ಚೆಗೆ ಗ್ರಾಸವಾಗಿವೆ.

## ಪಿಯು ಉಪನ್ಯಾಸಕರನ್ನು ಪ್ರೌಢಶಾಲೆಗಳಿಗೆ ನಿಯೋಜಿಸುವ ಕರಡು ನಿಯಮಕ್ಕೆ ವಿಜಯಪುರದಲ್ಲಿ ತೀವ್ರ ವಿರೋಧ

**ವಿಜಯಪುರ, ಜು.02–** ಪ್ರೌಢಶಾಲೆಗಳ 9 ಮತ್ತು 10ನೇ ತರಗತಿಗಳಿಗೆ ಪದವಿಪೂರ್ವ ಕಾಲೇಜು ಉಪನ್ಯಾಸಕರನ್ನು ನಿಯೋಜಿಸಲು ರಾಜ್ಯ ಸರ್ಕಾರ ಹೊರಡಿಸಿರುವ ಕರಡು ನಿಯಮಕ್ಕೆ ಕರ್ನಾಟಕ ರಾಜ್ಯ ಪದವಿಪೂರ್ವ ಕಾಲೇಜು ಉಪನ್ಯಾಸಕರ ಸಂಘ (ರಿ) ವಿಜಯಪುರ ಜಿಲ್ಲಾ ಘಟಕ ತೀವ್ರ ವಿರೋಧ ವ್ಯಕ್ತಪಡಿಸಿದೆ. ಈ ಸಂಬಂಧ ಸಂಘವು ಸಿದ್ಧಪಡಿಸಿರುವ 20 ಪುಟಗಳ ಸವಿಸ್ತಾರ ಆಕ್ಷೇಪಣಾ ಮನವಿಯನ್ನು ಜಿಲ್ಲೆಯ ಹಿರಿಯ ಮುಖಂಡರು ಹಾಗೂ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರಾದ ಎಂ.ಬಿ.ಪಾಟೀಲ್ ಅವರಿಗೆ ಸಲ್ಲಿಸಿ, ಸರ್ಕಾರದ ಮಟ್ಟದಲ್ಲಿ ತಕ್ಷಣ ಮಧ್ಯಪ್ರವೇಶಿಸಿ ಕರಡು ಅಧಿ ಸೂಚನೆಯನ್ನು ಹಿಂಪಡೆಯುವಂತೆ ಮನವಿ ಮಾಡಿದೆ.

ಸಂಘದ ಪದಾಧಿಕಾರಿಗಳ ಪ್ರಕಾರ, ಪಿಯು ಉಪನ್ಯಾಸಕರನ್ನು ಪ್ರೌಢಶಾಲೆಗಳಿಗೆ ನಿಯೋಜಿಸುವುದರಿಂದ ಪದವಿಪೂರ್ವ ಶಿಕ್ಷಣದ ಗುಣಮಟ್ಟಕ್ಕೆ ಧಕ್ಕೆಯಾಗಲಿದ್ದು, ರಾಷ್ಟ್ರೀಯ ಶಿಕ್ಷಣ ನೀತಿ (**NEP**–2020) ಆಶಯಕ್ಕೂ ವಿರುದ್ಧವಾಗಲಿದೆ. ಜೊತೆಗೆ ನೀಟ್ , ಜೆಇಇ ಹಾಗೂ ಸಿಇಟಿ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ವಿದ್ಯಾರ್ಥಿಗಳಿಗೆ ಅಗತ್ಯವಾದ ವಿಶೇಷ ತರಬೇತಿ ಮತ್ತು ಮಾರ್ಗದರ್ಶನ ನೀಡಲು ಉಪನ್ಯಾಸಕರಿಗೆ ಸಮಯದ ಕೊರತೆಯಾಗುತ್ತದೆ. ಇದರಿಂದ ಗ್ರಾಮೀಣ ಹಾಗೂ ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯದ ಮೇಲೆ ಪ್ರತಿಕೂಲ ಪರಿಣಾಮ ಬೀಳಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಇದಲ್ಲದೆ, ಗೆಜೆಟೆಡ್ ಗ್ರೂಪ್–ಬಿ ವೃಂದದ ಉಪನ್ಯಾಸಕರನ್ನು ಅವರ ಮೂಲ ಸೇವಾ ನಿಯಮಗಳಿಗೆ ವಿರುದ್ಧವಾಗಿ ಪ್ರೌಢಶಾಲೆಗಳಿಗೆ ನಿಯೋಜಿಸುವುದು ವೃತ್ತಿಪರ ಘನತೆ ಹಾಗೂ ಕಾನೂನುಬದ್ಧ ಸೇವಾ ಹಕ್ಕುಗಳ ಉಲ್ಲಂಘನೆಯಾಗಿದೆ ಎಂದು ಸಂಘ ಅಭಿಪ್ರಾಯಪಟ್ಟಿದೆ.

ಪ್ರೌಢಶಾಲೆಗಳಲ್ಲಿ ಶಿಕ್ಷಕರ ಕೊರತೆಯಿದ್ದರೆ ಹೊಸ ಶಿಕ್ಷಕರ ನೇಮಕಾತಿ ಪ್ರಕ್ರಿಯೆಯನ್ನು



ತ್ವರಿತವಾಗಿ ಆರಂಭಿಸಬೇಕು. ಬದಲಾಗಿ ಪಿಯು ಉಪನ್ಯಾಸಕರನ್ನು ನಿಯೋಜಿಸುವ ನಿರ್ಧಾರವನ್ನು ಸರ್ಕಾರ ಕೈಬಿಡಬೇಕು ಎಂದು ಸಂಘ ಒತ್ತಾಯಿಸಿದೆ.

ಸಚಿವ ಎಂ . ಬಿ . ಪಾಟೀಲ್ ಅವರು ಈ ವಿಷಯವನ್ನು ಮುಖ್ಯಮಂತ್ರಿ ಹಾಗೂ ಶಿಕ್ಷಣ ಸಚಿವರ ಗಮನಕ್ಕೆ ತಂದು ಕರಡು ಅಧಿಸೂಚನೆಯನ್ನು ಹಿಂಪಡೆಯಲು ಕ್ರಮ ಕೈಗೊಳ್ಳುವಂತೆ ಮನವಿ ಸಲ್ಲಿಸಲಾಗಿದೆ. ಬೇಡಿಕೆಗಳನ್ನು ಸರ್ಕಾರ ಪರಿಗಣಿಸದಿದ್ದರೆ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸುವುದಾಗಿ ವಿಜಯಪುರ ಜಿಲ್ಲಾ ಘಟಕ ಎಚ್ಚರಿಕೆ ನೀಡಿದೆ.

## ಇಸ್ರೋ ಕೇಂದ್ರ ಕಚೇರಿಗೆ ಬಾಂಬ್ ಬೆದರಿಕೆ ಸಂದೇಶ

**ಬೆಂಗಳೂರು, ಜು.2:** ಇಸ್ರೋ ಕೇಂದ್ರ ಕಚೇರಿಗೆ ಬಾಂಬ್ ಬೆದರಿಕೆ ಇ–ಮೇಲ್ ಸಂದೇಶ ಕಳುಹಿಸಿದ್ದು, ಕಿಡಿಗೇಡಿಗಳು ಇಮೇಲ್ ಮೂಲಕ ಬಾಂಬ್ ಬೆದರಿಕೆ ಸಂದೇಶ ಕಳುಹಿಸಿದ್ದಾರೆ.

ಬೆದರಿಕೆ ಸಂದೇಶ ನೋಡಿದ ತಕ್ಷಣ ಪೊಲೀಸರಿಗೆ ಮಾಹಿತಿ ನೀಡಲಾಗಿದ್ದು ಸ್ಥಳಕ್ಕೆ ಸಿಐಎಸ್‌ಎಫ್ ಮತ್ತು ಪೊಲೀಸ್ರು ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ. ಬಾಂಬ್ ಪತ್ತೆದಳ ಮತ್ತು ಶ್ವಾನದಳ ದಿಂದಲೂ ಕಚೇರಿಯಲ್ಲಿ ತಪಾಸಣೆ ನಡೆಸಲಾಗುತ್ತಿದೆ. ಸಂಜಯ ನಗರ ಪೊಲೀಸ್ ಠಾಣೆಯಲ್ಲಿ ಈ ಕುರಿತು ಪ್ರಕರಣ ದಾಖಲಾಗಿದೆ.




ಇದಕ್ಕೂ ಮುನ್ನ ಚಾಮರಾಜನಗರ ಜಿಲ್ಲಾ ನ್ಯಾಯಾಲಯ ಹಾಗೂ ಯಾದಗಿರಿ ಜಿಲ್ಲಾ ನ್ಯಾಯಾಲಯಕ್ಕೆ ಇದೇ ರೀತಿಯಾದ ಬೆದರಿಕೆ ಸಂದೇಶ ಬಂದಿತ್ತು. ಯಾದಗಿರಿಯಲ್ಲಿ ನ್ಯಾಯಾಲಯದಲ್ಲಿ ಇದ್ದ ಸಿಬ್ಬಂದಿಗಳು ಹಾಗೂ ವಕೀಲರನ್ನು ಕೋರ್ಟ್ ಹೊರಗಡೆ ಕಳುಹಿಸಿ ತಪಾಸಣೆ ನಡೆಸಲಾಯಿತು.

ಅದೇ ರೀತಿ ಚಾಮರಾಜನಗರದಲ್ಲೂ ಕೂಡ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದರು.



ಮುಂಗಾರು ಸಕ್ರಿಯವಾಗಿರುವುದರಿಂದ ಗುರುವಾರ ಚಿಕ್ಕಮಗಳೂರು ಬಳಿ ಕೃಷಿ ಚಟುವಟಿಕೆಗಳು ಜೋರಾಗಿ ಕಂಡುಬಂದಿವೆ.

# ಮುಡಾ ಪ್ರಕರಣ: ಇ.ಡಿ. ಬಂಧನಕ್ಕೆ ಒಳಗಾಗಿದ್ದ ದಿನೇಶ್ ಕುಮಾರ್‌ಗೆ ಹೈಕೋರ್ಟ್ ಜಾಮೀನು

**ಮೈಸೂರು, ಜು.2:** ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆರೋಪ ಎದುರಿಸಿದ್ದ ಮೂಡಾ ನಿವೇಶನ ಅಕ್ರಮ ಹಂಚಿಕೆ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯದಿಂದ (ಇ.ಡಿ.) ಬಂಧನಕ್ಕೆ ಒಳಗಾಗಿದ್ದ ಮುಡಾ ಮಾಜಿ ಆಯುಕ್ತ ಜಿ.ಟಿ. ದಿನೇಶ್ ಕುಮಾರ್‌ಗೆ ಹೈಕೋರ್ಟ್ ಜಾಮೀನು ಮಂಜೂರು ಮಾಡಿದೆ.

ಇಡಿ ದಾಖಲಿಸಿದ್ದ ಪ್ರಕರಣ ಸಂಬಂಧ ಜಾಮೀನು ಕೋರಿ ಐದನೇ ಆರೋಪಿ ಜಿ.ಟಿ.ದಿನೇಶ್ ಕುಮಾರ್ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರ ಏಕಸದಸ್ಯ ಪೀಠ ಪುರಸ್ಕರಿಸಿದೆ.

ಅರ್ಜಿದಾರರು ಐದು ಲಕ್ಷ ರೂಪಾಯಿ ಮೊತ್ತದ ವೈಯಕ್ತಿಕ ಬಾಂಡ್ ಹಾಗೂ ಅಷ್ಟೇ ಮೊತ್ತಕ್ಕೆ ವಿಚಾರಣಾ ನ್ಯಾಯಾಲಯಕ್ಕೆ ತೃಪ್ತಿದಾಯಕವಾದ ಇಬ್ಬರ ಭದ್ರತಾ ಖಾತರಿ ಒದಗಿಸಬೇಕು. ಪ್ರತ್ಯೇಕ ಹಾಗೂ ಪರೋಕ್ಷವಾಗಿ ಪ್ರಾಸಿಕ್ಯೂಷನ್ ಸಾಕ್ಷ್ಯ ತಿರುಚಲು ಹಾಗೂ ತನಿಖೆ ಅಡ್ಡಿಪಡಿಸಲು ಯತ್ನಿಸಬಾರದು. ಸಕಾರಣಕ್ಕೆ ವಿಚಾರಣಾ ನ್ಯಾಯಾಲಯದಿಂದ ವಿನಾಯಿತಿ ಪಡೆಯುವುದರ ಹೊರತಾಗಿ ಎಲ್ಲಾ ನಿಗದಿತ ದಿನಾಂಕಗಳು ವಿಚಾರಣೆಗಳಿಗೆ ಕಡ್ಡಾಯವಾಗಿ ಹಾಜರಾಗಬೇಕು. ಈ ಯಾವುದೇ ಷರತ್ತು ಉಲ್ಲಂಘನೆ ಮಾಡಿದರೂ ಅರ್ಜಿದಾರ ಜಾಮೀನು ಆದೇಶ ರದ್ದತಿಗೆ ಕೋರಲು ಜಾರಿ ನಿರ್ದೇಶನಾಲಯವು ಸ್ವತಂತ್ರವಾಗಿದೆ ಎಂದು ಹೈಕೋರ್ಟ್ ಸ್ಪಷ್ಟಪಡಿಸಿದೆ.

ಪ್ರಕರಣ ಸಂಬಂಧ 2026ರ ಜನವರಿ 20ರಂದು ಮೊದಲಿಗೆ ಜಾಮೀನು ತಿರಸ್ಕರಿಸಿದ್ದ ನ್ಯಾಯಾಲಯವು ವಿಚಾರಣೆ ಪ್ರಗತಿ ಹೊಂದದಿದ್ದರೆ ಅಥವಾ ಬದಲಾದ ಸನ್ನಿವೇಶದಲ್ಲಿ ಮತ್ತೆ ಹೈಕೋರ್ಟ್ ಮೊರೆ ಹೋಗಬಹುದು ಎಂದು ಅರ್ಜಿದಾರರಿಗೆ ತಿಳಿಸಿತ್ತು. ಇದಾದ ಎರಡು ತಿಂಗಳ ನಂತರ 2026ರ ಮಾರ್ಚ್ 3ರಂದು ಆರೋಪ ಪಟ್ಟಿಯನ್ನು ಸಲ್ಲಿಸಲಾಯಿತು. ನಂತರವೇ ಅರ್ಜಿದಾರರಿಗೆ ಇದೇ ಅಪರಾಧ ಸಂಬಂಧ (ಪ್ರಿಡಿಕೇಟ್ ಅಫೆನ್ಸ್) ಲೋಕಾಯುಕ್ತ ಪೊಲೀಸರು ದಾಖಲಿಸಿದ್ದ ದೂರಿನ ಕುರಿತಂತೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು 2026ರ ಮಾರ್ಚ್



16ರಂದು ಅರ್ಜಿದಾರರಿಗೆ ಜಾಮೀನು (ಡೀಫಾಲ್ಟ್) ಮಂಜೂರು ಮಾಡಿತ್ತು ಎಂದು ಪೀಠ ಆದೇಶದಲ್ಲಿ ಅಭಿಪ್ರಾಯ ಪಟ್ಟಿದೆ. ಇದಾದ ನಂತರ 2026ರ ಮಾರ್ಚ್ 28ರಂದು ಮೂವರು ಆರೋಪಿಗಳ (ಎ2 ರಿಂದ 4) ವಿರುದ್ಧ ಇಡಿ ಪೂರಕ ದೂರು ದಾಖಲಿಸಿತು. ಇಡಿ ಅವರನ್ನು ಬಂಧನ ಮಾಡಿಲ್ಲ. ಅರ್ಜಿದಾರರು ಸಹ 2ರಿಂದ 4ನೇ ಆರೋಪಿಗಳ ಸ್ಥಾನದಲ್ಲಿಯೇ ನಿಲ್ಲುತ್ತಾರೆ ಎಂಬುದು ಅವರ ವಾದ.

ಇಡಿ ನ್ಯಾಯಾಲಯವು 2026ರ ಏಪ್ರಿಲ್ 4ರಂದು ಇಡಿ ದೂರನ್ನು ದೂರನ್ನು ಪರಿಗಣಿಸಿತ್ತು. ಆಗಲೂ ಸಹ ಇಡಿಯ ಪೂರಕ ದೂರು ಸಂಬಂಧ 2ರಿಂದ 4ನೇ ಆರೋಪಿ ವಿರುದ್ಧದ ವಿಚಾರಣೆಯು ಪೂರ್ವ ಕಾಗ್ನಿಜೆನ್ಸ್ ಹಂತದಲ್ಲಿಯೇ ಉಳಿದಿದೆ. ಈ ಐದು ಅಂಶಗಳು ಪ್ರಕರಣದಲ್ಲಿ ಬದಲಾದ ಸನ್ನಿವೇಶಗಳಿಗೆ ದ್ಯೋತಕವಾಗಿದೆ. ಇದರಿಂದ ಅರ್ಜಿದಾರರಿಗೆ ಜಾಮೀನು ನೀಡಬಹುದಾಗಿದೆ ಎಂದು ಪೀಠ ಆದೇಶದಲ್ಲಿ ತಿಳಿಸಿದೆ.

**ಪ್ರಕರಣದ ಹಿನ್ನೆಲೆ:** ಮುಡಾ ಆಯುಕ್ತರಾಗಿದ್ದ ಅವಧಿಯಲ್ಲಿ ಅಧಿಕಾರ ದುರ್ಬಳಕೆ ಮಾಡಿಕೊಂಡು ಅಕ್ರಮವಾಗಿ ಅನರ್ಹರಿಗೆ ನಿವೇಶನಗಳನ್ನು ಹಂಚಿದ್ದಾರೆ ಎಂಬ ಆರೋಪವನ್ನು ಜಿ.ಟಿ.ದಿನೇಶ್ ಕುಮಾರ್ ಎದುರಿಸುತ್ತಿದ್ದಾರೆ. ಈ ಸಂಬಂಧ ಪಿಎಂಎಲ್‌ಎ ಕಾಯಿದೆ ಅಡಿ ಪ್ರಕರಣ ದಾಖಲಿಸಿಕೊಂಡಿರುವ ಜಾರಿ ನಿರ್ದೇಶನಾಲಯ 2025ರ ಸೆಪ್ಟೆಂಬರ್ 17ರಂದು ದಿನೇಶ್ ಅವರನ್ನು ಬಂಧಿಸಿತ್ತು. ಸದ್ಯ ಅವರು ನ್ಯಾಯಾಂಗ ಬಂಧನದಲ್ಲಿದ್ದಾರೆ. ಆ ನಂತರ ಅಕ್ಟೋಬರ್ 5ಕ್ಕೆ ಇಡಿ, ದಿನೇಶ್ ಕುಮಾರ್ಗೆ ಸೇರಿದ ಸುಮಾರು 40 ಕೋಟಿ ರೂಪಾಯಿ ಮೌಲ್ಯದ ಆಸ್ತಿಯನ್ನು ಮುಟ್ಟುಗೋಲು ಹಾಕಿಕೊಂಡಿದೆ.

ಅಲ್ಲದೆ, ದಿನೇಶ್ ಕುಮಾರ್ ವಿರುದ್ಧ 2025ರ ನವೆಂಬರ್ 19ರಂದು ಆರೋಪಪಟ್ಟಿ ಸಲ್ಲಿಸಿದ್ದು, ಅನರ್ಹರಿಗೆ ಒಟ್ಟು 450 ಕೋಟಿ ರೂಪಾಯಿಗೂ ಅಧಿಕ ಬೆಲೆಬಾಳುವ 283 ನಿವೇಶನಗಳನ್ನು ಅಕ್ರಮವಾಗಿ ಹಂಚಿಕೆ ಮಾಡಿದ್ದಾರೆ ಎಂದು ಉಲ್ಲೇಖಿಸಿದೆ.

2025ರ ಅಕ್ಟೋಬರ್ 10ರಂದು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ದಿನೇಶ್ ಕುಮಾರ್ ಜಾಮೀನು ಅರ್ಜಿಯನ್ನು ವಜಾಗೊಳಿಸಿತ್ತು. ಹಾಗಾಗಿ, ಅವರು ಹೈಕೋರ್ಟ್ ಮೊರೆ ಹೋಗಿದ್ದರು. ಆ ಅರ್ಜಿಯನ್ನು 2026ರ ಜನವರಿ 20ರಂದು ತಿರಸ್ಕರಿಸಿದ್ದ ಹೈಕೋರ್ಟ್, ಮೂರು ತಿಂಗಳ ನಂತರ ಬದಲಾದ ಸನ್ನಿವೇಶದಲ್ಲಿ ಜಾಮೀನು ಕೋರಿ ಮತ್ತೆ ಅರ್ಜಿ ಸಲ್ಲಿಸಬಹುದು ಎಂದು ದಿನೇಶ್‌ಗೆ ಸೂಚಿಸಿತ್ತು. ಮಾರ್ಚ್ 16ರಂದು ಜನಪ್ರತಿನಿಧಿಗಳ ನ್ಯಾಯಾಲಯ ಜಾಮೀನು ನೀಡಿದ್ದರೂ ಇಡಿ ಪ್ರಕರಣ ಬಾಕಿಯಿದ್ದ ಹಿನ್ನೆಲೆಯಲ್ಲಿ ಬಿಡುಗಡೆಯಾಗಿರಲಿಲ್ಲ. ನಂತರ ಜಾಮೀನು ಕೋರಿ ಜೂನ್ 2ರಂದು ಮತ್ತೆ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

# ವಾರದಲ್ಲಿ 5ನೇ ಬಾರಿಗೆ ಚಾಮರಾಜನಗರ ಜಿಲ್ಲಾ ನ್ಯಾಯಾಲಯಕ್ಕೆ ಬಾಂಬ್ ಬೆದರಿಕೆ

**ಚಾಮರಾಜನಗರ, ಜು.2:** ಚಾಮರಾಜನಗರ ಜಿಲ್ಲಾ ನ್ಯಾಯಾಲಯಕ್ಕೆ ಮತ್ತೆ ಬಾಂಬ್ ಬೆದರಿಕೆ ಸಂದೇಶ ಬಂದಿದೆ. ಒಂದೇ ವಾರದಲ್ಲಿ 5ನೇ ಬಾರಿಗೆ ಇಮೇಲ್ ಬೆದರಿಕೆ ಸಂದೇಶ ಬಂದಿದೆ ಡಿಎಂಕೆ ನಿಷ್ಠಾವಂತ ಕಾರ್ಯಕರ್ತನಾಗಿದ್ದಕ್ಕೆ ಕಿರುಕುಳ ಎಂದು ಸಂದೇಶ ಬಂದಿದ್ದು ತಮಿಳುನಾಡಿನ ರಾಜಕೀಯ ವಿಚಾರದ ಮೇಲೆ ಪದೇಪದೆ ಈ ರೀತಿ ಬೆದರಿಕೆ ಸಂದೇಶಗಳು ಬರುತ್ತಿವೆ. ಮಾಹಿತಿ ತಿಳಿದ ತಕ್ಷಣ ಘಟನಾ ಸ್ಥಳಕ್ಕೆ ಪೊಲೀಸರು, ಬಾಂಬ್ ನಿಷ್ಕ್ರಿಯದಳ ಹಾಗೂ ಶ್ವಾನ ದಳ ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆಅಲ್ಲದೇ ಯಾದಗಿರಿಯ ನೂತನ ಜಿಲ್ಲಾ ನ್ಯಾಯಾಲಯಗಳ ಸಂಕೀರ್ಣಕ್ಕೆ ಗುರುವಾರ ಬಾಂಬ್ ಬೆದರಿಕೆಯ ಇ–ಮೇಲ್ ಬಂದಿದ್ದು, ಪೊಲೀಸರು ತೀವ್ರ ತಪಾಸಣೆ ನಡೆಸಿದರು.

ಬಾಂಬ್ ಬೆದರಿಕೆ ಸಂದೇಶದಿಂದಾಗಿ ಕೋರ್ಟ್ ಕಲಾಪಗಳಲ್ಲಿ ವ್ಯತ್ಯಯವಾಯಿತು. ಗೊಂದಲದ ವಾತಾವರಣವೂ ನಿರ್ಮಾಣವಾಯಿತು. ಸಾರ್ವಜನಿಕರು, ವಕೀಲರು, ಸಿಬ್ಬಂದಿಯನ್ನು ಪೊಲೀಸರು ಹೊರಗೆ ಕಳುಹಿಸಿದರು. ಬಾಂಬ್ ನಿಷ್ಕ್ರಿಯ ದಳ, ಶ್ವಾನದಳದ ಸಿಬ್ಬಂದಿ ನ್ಯಾಯಾಲಯದ ಸಭಾಂಗಣ, ಕೊಠಡಿ, ವಿವಿಧ ಕೊಠಡಿಗಳು ಸೇರಿ ಇಡೀ ನ್ಯಾಯಾಲಯ ಹಾಗೂ ಆವರಣದಲ್ಲಿ ತಪಾಸಣೆ ನಡೆಸಿದರು.

### ಅತಿ ಹಿಂದುಳಿದ ಮಠಾಧೀಶರ ಚಿಂತನಾ ಶಿಬಿರ

# ದೇವರಾಜ ಅರಸು ಆಡಳಿತ ಹಿಂದುಳಿದ ವರ್ಗಗಳ ಸುವರ್ಣಯುಗ: ಪೂರ್ಣಾನಂದಶ್ರೀ ಅಭಿಮತ




**ಕಲಬುರಗಿ, ಜು. 2:** ದಿವಂಗತ ದೇವರಾಜ ಅರಸು ಅವರ ಆಡಳಿತಾವಧಿ ಹಿಂದುಳಿದ ವರ್ಗಗಳ ಸುವರ್ಣಯುಗ ವಾಗಿತ್ತು. ಎಲ್ಲ ಹಿಂದುಳಿದ ವರ್ಗಗಳನ್ನು ಗುರುತಿಸಿ ಅವರಿಗೆ ರಾಜಕೀಯ ಮತ್ತು ಎಲ್ಲ ಸರ್ಕಾರಿ ಸೌಲಭ್ಯಗಳನ್ನು ನೀಡುವ ಮೂಲಕ, ಸಮಾಜದಲ್ಲಿ ಸಮಾನ ಅವಕಾಶಗಳನ್ನು ನೀಡಿದರು ಎಂದು ಗಾಣಿಗ ಸಮಾಜದ ಜಗದ್ಗುರು ಶ್ರೀ ಪೂರ್ಣಾನಂದ ಪುರಿ ಮಹಾಸ್ವಾಮಿಗಳು ಹೇಳಿದರು.

ನಗರದ ಯಾತ್ರಿನಿವಾಸದಲ್ಲಿ ಅತಿ ಹಿಂದುಳಿದ ಮಠಾಧೀಶರ ಎರಡು ದಿನಗಳ ಚಿಂತನಾ ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, 1947ರಿಂದ 1972ರ ವರೆಗೆ ಹಿಂದುಳಿದ ವರ್ಗಗಳು ಸಾಕಷ್ಟು ಅವಕಾಶಗಳಿಂದ ವಂಚಿತವಾಗಿದ್ದವು ಎಂದ ಅವರು, ಹಿಂದುಳಿದ ವರ್ಗಗಳ ರಾಜಕೀಯ ಮತ್ತು ಸಾಮಾಜಿಕ ಬೆಳವಣಿಗೆ ಕುರಿತು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು. ದೇವರಾಜ ಅರಸು, ಎಸ್. ಬಂಗಾರಪ್ಪ, ಧರ್ಮಸಿಂಗ್, ವೀರಪ್ಪ ಮೊಯ್ಲಿ ಹಾಗೂ ಸಿದ್ದರಾಮಯ್ಯ ಅವರು ಹಿಂದುಳಿದ ವರ್ಗಗಳಿಂದ ಮುಖ್ಯಮಂತ್ರಿಗಳಾಗಿ ರಾಜ್ಯದ ಆಡಳಿತ ನಡೆಸಿದ ಬಗ್ಗೆ ಉಲ್ಲೇಖಿಸಿದ ಅವರು, ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಇನ್ನಷ್ಟು ಸಮರ್ಪಕ ಕ್ರಮಗಳ ಅಗತ್ಯವಿವ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಹಾಸಭೆಯ ರಾಜ್ಯಾಧ್ಯಕ್ಷ ಡಾ. ಪ್ರಣವಾನಂದ ಸ್ವಾಮೀಜಿ ವಹಿಸಿದ್ದರು. ರಾಷ್ಟ್ರೀಯ ಅಧ್ಯಕ್ಷರಾದ ಬಸವನಾಗಿದೇವ ಶರಣರು ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಶಿಬಿರದಲ್ಲಿ ವಿಶ್ವಕರ್ಮ ಸಮಾಜದ ದೊಡ್ಡೇಂದ್ರ ಸ್ವಾಮೀಜಿ, ಕುಂಬಾರ ಸಮುದಾಯದ ಬಸವಮೂರ್ತಿ ಸ್ವಾಮೀಜಿ, ಕುಂಬಾರ ಗುಂಡಯ್ಯ ಸ್ವಾಮೀಜಿ, ಮಾದಿಗ ಸಮುದಾಯದ ಶಿವಮೂರ್ತಿ ಸ್ವಾಮೀಜಿ ಸೇರಿದಂತೆ ಸುಮಾರು 25 ಅತಿ ಹಿಂದುಳಿದ ಸಮುದಾಯಗಳ ಮಠಾಧೀಶರು ಭಾಗವಹಿಸಿದ್ದರು.

ಎರಡು ದಿನಗಳ ಕಾಲ ನಡೆಯಲಿರುವ ಈ ಚಿಂತನ ಶಿಬಿರದಲ್ಲಿ ವಿವಿಧ ಸಾಮಾಜಿಕ, ಶೈಕ್ಷಣಿಕ ಹಾಗೂ ರಾಜಕೀಯ ವಿಷಯಗಳ ಕುರಿತು ಚರ್ಚೆ ನಡೆಸಿ ಪ್ರಮುಖ ನಿರ್ಣಯಗಳನ್ನು ಕೈಗೊಳ್ಳಲಾಗುವುದು ಎಂದು ಮಹಾಸಭೆಯ ರಾಷ್ಟ್ರೀಯ ಕಾರ್ಯದರ್ಶಿ ಶ್ರೀ ದೊಡ್ಡೇಂದ್ರ ಸ್ವಾಮೀಜಿ ಅವರು ಕಾರ್ಯಕ್ರಮದ ಉದ್ದೇಶಗಳನ್ನು ವಿವರಿಸಿದರು.

# ಸಂಪ್ರದಾಯದ ಗೊಂದಲಗಳಿಗೆ ಪರಿಹಾರವೂ ಇದೆ: ಕನ್ನೇರಿ ಸ್ವಾಮೀಜಿ



**ಬೀದರ್, ಜು. 2:** ಸಂಪ್ರದಾಯಗಳು ನಾವು ರೂಪಿಸಿದ್ದು. ಹಾಗಾಗಿ ನಮ್ಮ ಅನೇಕ ಸಂಪ್ರದಾಯಗಳ ಕುರಿತು ಗೊಂದಲಗಳಿವೆ. ಅವುಗಳ ಪರಿಹಾರವೂ ನಮ್ಮ ಹಿಂದೂ ಸಮಾಜದಲ್ಲಿದೆ. ಹಿಂದೂ ಸಮಾಜವೆಂದರೆ ಕಾಲ ಕಾಲಕ್ಕೆ ತಕ್ಕಂತೆ ಯೋಗ್ಯ ಬದಲಾವಣೆಗಳನ್ನು ಮಾಡಿಕೊಂಡು ಸಂಪ್ರದಾಯವನ್ನು ಉಳಿಸಿಕೊಂಡು ಬರುವ ಏಕೈಕ ಸಮಾಜವಾಗಿದೆ. ಹಿಂದೂ ಎಂದರೆ ನಮ್ಮ ಸಿಂಧೂ ನದಿಯ ಜೀವನ ಶೈಲಿ. ಆದ್ದರಿಂದ ಸಿಂಧೂ ನಾಗರಿಕತೆಯಲ್ಲಿ ಜೀವಿಸಿದ ಪ್ರತಿಯೊಂದು ಸಮಾಜವೂ ಹಿಂದೂ ಎಂದು ಕರೆಯಲ್ಪಡುತ್ತದೆ. ಆದ್ದರಿಂದ ನಾವು ಇರಾಜ್ಯದ ಎಲ್ಲೆಡೆ ನಡೆಸುತ್ತಿರುವುದು ಬಸವಾದಿ ಶರಣರ ಹಿಂದೂ ಸಮಾವೇಶ ಎಂದು ಕನ್ನೇರಿ ಅದೃಶ್ಯ ಕಾಡಸಿದ್ದೇಶ್ವರ ಸ್ವಾಮಿಗಳು ಹೇಳಿದರು.

ಜಿಲ್ಲೆಯ ಬಸವಕಲ್ಯಾಣದಲ್ಲಿ ಆಯೋಜಿಸಿದ್ದ ಬಸವಾದಿ ಶರಣರ ಬೃಹತ್ ಹಿಂದೂ ಸಮಾವೇಶದ ಅಂಗವಾಗಿ ಮುಚಳಂಬಾ ಗ್ರಾಮದ ನಾಗಭೂಷಣ ಶಿವಯೋಗಿ ಮಠದಲ್ಲಿ ನಡೆದ ಭಕ್ತರ ಮತ್ತು ಮಠಾಧಿಪತಿಗಳ ಸಭೆಯಲ್ಲಿ ಮಾತನಡಿದ ಅವರು, ಬಸವಣ್ಣನ ಹೆಸರಿನಲ್ಲಿ ಮಠಗಳನ್ನು ಕಟ್ಟಿಕೊಂಡು ಕುಳಿತಿರುವವರ ಬಗ್ಗೆ ನನಗೆ ಯಾವ ತಕರಾರೂ ಇಲ್ಲ. ಆದರೆ ಅವರು ಬಸವಣ್ಣನವರನ್ನು ಎಡಪಂಥೀಯರಿಗೆ ಒಪ್ಪಿಸುತ್ತಿದ್ದರೆ ಮತ್ತು ಇಸ್ಲಾಮ್–ಬಸವ ಪಂಥ ಒಂದೇ ಎಂದು ವಾದಿಸುತ್ತಿದ್ದಾರೆ. ಎಡಪಂಥ ಮತ್ತು ಇಸ್ಲಾಮ್ ಎರಡೂ ನಮ್ಮ ಹಿಂದೂ ಸಂಸ್ಕೃತಿ ನಾಶಮಾಡಲು ಬಂದಿರುವಂಥವುಗಳು. ಇದರ ಬಗ್ಗೆ ನಮ್ಮ ವಿರೋಧವಿದೆ. ಈ ನಡವಳಿಕೆಯಿಂದ ಬಸವ ಪಂಥಕ್ಕೆ ಬಹುದೊಡ್ಡ ಹಾನಿಯಾಗಲಿದೆ. ಹಾನಿ ಆದ ನಂತರ ಪಶ್ಚಾತ್ತಾಪ ಪಡುವ ಬದಲು ಈಗಲೇ ಅರ್ಥಮಾಡಿಕೊಂಡು ಬಸವಣ್ಣನವರ ಆಶಯಗಳನ್ನು ಬಿತ್ತಿರಿಸುವ ಕೆಲಸ ಈ ಮಠಾಧೀಶರು ಮಾಡಬೇಕೆಂಬುದು ನಮ್ಮ ಆಶಯವಾಗಿದೆ ಎಂದರು.

ಈ ಸಂದರ್ಭದಲ್ಲಿ ಮಾತನಾಡಿದ ಶಂಕರ ಮೃತ್ಯುಂಜಯ ಸ್ವಾಮೀಜಿ, ದೀಪಾವಳಿ ಹಬ್ಬದಂದು ಲಕ್ಷ್ಮೀಪೂಜೆ ಮಾಡುವ ಸಂಪ್ರದಾಯವೂ ನಮ್ಮ ಸಂಸ್ಕೃತಿಯ ಭಾಗವಾಗಿದೆ. ಆದರೆ, ಇತ್ತೀಚಿನ ದಿನಗಳಲ್ಲಿ ಸನಾತನ ಧರ್ಮದ ದೇವರುಗಳನ್ನು ಹೀಯಾಳಿಸುವ ಮೂಲಕ ಲಕ್ಷ್ಮೀಪೂಜೆ, ಗಣಪತಿ ಮತ್ತು ಹನುಂತ ಸೇರಿದಂತೆ ಸಂಪ್ರದಾಯಗಳ ಬಗ್ಗೆ ಪ್ರಶ್ನೆಗಳನ್ನು ಎತ್ತಿ ಭಕ್ತರಲ್ಲಿ ಗೊಂದಲ ಮೂಡಿಸಲಾಗುತ್ತಿದೆ ಎಂದು ಹೇಳಿದರು.

ಮನೆಯ ಜಗುಲಿಯ ಮೇಲೆ ಭಕ್ತಿಯಿಂದ ಪೂಜಿಸುವ ಮನೆದೇವರು ಮತ್ತು ಗ್ರಾಮದೇವತೆಗಳ ಆರಾಧನೆಯನ್ನು ಮೂಢನಂಬಿಕೆ. ಅವುಗಳನ್ನು ಎತ್ತಿ ಹೊತ್ತೊಯ್ದು ನದಿ ಕೆರೆಗಳಲ್ಲಿ ಬಿಸಾಡಿ ಎಂದು ಬಿಂಬಿಸಿ, ಬಹುದೇವತಾ ಆರಾಧನೆಯ ಪರಂಪರೆಯನ್ನು ಅಳಿಸಿಹಾಕುವ ಪ್ರಯತ್ನಗಳು ನಡೆಯುತ್ತಿವೆ. ಭಕ್ತರನ್ನು ದಿಕ್ಕು ತಪ್ಪಿಸಿ, ಅವರ ಧಾರ್ಮಿಕ ನಂಬಿಕೆಗಳನ್ನು ಕಡೆಗಣಿಸುವ ಕೆಲಸವನ್ನು ಕೆಲವು ಸ್ವಾಮೀಜಿಗಳು ಮಾಡುತ್ತಿದ್ದಾರೆ. ಇಂತಹ ಪ್ರಯತ್ನಗಳಿಂದ ಸಮಾಜ ಎಚ್ಚೆತ್ತುಕೊಳ್ಳಬೇಕು ಎಂದು ಹೇಳಿದರು.

# ರೊಟ್ಟಿ ಗ್ಲೋಬಲ್ ಚಾಲೆಂಜ್, ಯುವ ಪ್ರತಿಭೆಗಳಿಂದ ಸ್ಟಾರ್ಟ್‌ಅಪ್ ವೇದಿಕೆ: ಎಸಿ ಸಾಹಿತ್ಯ ಅಲದಕಟ್ಟಿ




**ಕಲಬುರಗಿ, ಜು. 2:** ಜಿಲ್ಲಾಡಳಿತವು ಕೆಡಿಇಎಂ ಸಹಭಾಗಿತ್ವದಲ್ಲಿ ಕಲಬುರಗಿ ರೊಟ್ಟಿ ಗ್ಲೋಬಲ್ ಚಾಲೆಂಜ್ 2026" ಅನ್ನು ಆಯೋಜಿಸುತ್ತಿದೆ. ನಮ್ಮ ಜಿಐ ಟ್ಯಾಗ್ ಪಡೆದ ಕಲಬುರಗಿ ರೊಟ್ಟಿಯಿಂದ ಒಂದು ಆಹಾರ ಬ್ರ್ಯಾಂಡ್ ಕಟ್ಟುವುದು ನಮ್ಮ ಗುರಿಯಾಗಿದೆ. ಈ ಚಾಲೆಂಜ್ ಎಲ್ಲರಿಗೂ ಮುಕ್ತವಾಗಿದ್ದು, ವಿಶೇಷವಾಗಿ ಕಾಲೇಜು ವಿದ್ಯಾರ್ಥಿಗಳು ಹಾಗೂ ಇತ್ತೀಚೆಗೆ ಪದವಿ ಪಡೆದವರನ್ನು ಪ್ರೋತ್ಸಾಹಿಸಲಾಗುತ್ತಿದೆ ಎಂದು ಕಲಬುರಗಿ ಉಪ ವಿಭಾಗದ ಸಹಾಯಕ ಆಯುಕ್ತೆ ಸಾಹಿತ್ಯ ಆಲದಕಟ್ಟಿ ಹೇಳಿದರು.

ಪತ್ರಿಕಾಗೋಷ್ಠಿ ಯಲ್ಲಿ, ಕಲಬುರಗಿ ರೊಟ್ಟಿ ಮತ್ತು ಸಂಬಂಧಿತ ಉತ್ಪನ್ನಗಳನ್ನು ರಾಷ್ಟ್ರೀಯ ಹಾಗೂ ಅಂತಾರಾಷ್ಟ್ರೀಯ ಮಟ್ಟದಲ್ಲಿ ಈಗಾಗಲೇ ಸ್ಥಾನ ಪಡೆದುಕೊಂಡಿದೆ. ಅದನ್ನು ಹೇಗೆ ವಿಸ್ತರಿಸಬಹುದು ಎಂಬುದರ ಬಗ್ಗೆ ನಾವೀನ್ಯಪೂರ್ಣ ಆಲೋಚನೆಗಳನ್ನು ತರಲು ತಂಡಗಳನ್ನು ಪ್ರೋತ್ಸಾಹಿಸಲಾಗುತ್ತಿದೆ ಎಂದರು.

ಇದೆ 2026 ಜುಲೈ 6 ರಂದು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಪ್ರಾದೇಶಿಕ ಕೇಂದ್ರದಲ್ಲಿ ತಂಡಗಳ ಪರಿಶೀಲನೆ (ಸ್ಕ್ರೀನಿಂಗ್) ನಡೆಯಲಿದ್ದು, ನಂತರ ಜುಲೈ 12, ರಂದು ಅಂತಿಮ ಸುತ್ತು ನಡೆಯಲಿದೆ. ಆಯ್ಕೆಯಾದ ತಂಡಕ್ಕೆ ಇನ್ಕ್ಯುಬೇಶನ್, ಸೀಡ್ ಫಂಡಿಂಗ್‌ಗೆ ನೆರವು ಹಾಗೂ ಅವರ ಸ್ಟಾರ್ಟ್‌ಅಪ್‌ಗೆ ಮಾರ್ಗದರ್ಶನ ಬೆಂಬಲ ನೀಡಲಾಗುವುದು.

ಕಲ್ಯಾಣ ಕರ್ನಾಟಕ ಭಾಗದ ಎಲ್ಲ ಆಸಕ್ತರು ಪೋಸ್ಟರ್‌ದಲ್ಲಿರುವ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ, ಇದೇ 2026ರ ಜುಲೈ 5ರೊಳಗೆ ನೋಂದಣಿ ಮಾಡಿಕೊಳ್ಳಬಹುದು. ಇದಕ್ಕೆ ಯಾವುದೇ ವಯಸ್ಸಿನ ಮಿತಿಯಿರುವುದಿಲ್ಲ. ಯಾವುದೇ ಸ್ಪಷ್ಟೀಕರಣ ಮತ್ತು ಸಂದೇಹಗಳಿಗೆ ಹಾಗೂ ಹೆಚ್ಚಿನ ಮಾಹಿತಿಗಾಗಿ ನೀಡಲಾದ ಕೆಡಿಇಎಂ ಸಹಾಯವಾಣಿ 7259885680 ಸಂಖ್ಯೆಗೆ ಕರೆ ಮಾಡಬಹುದು ಎಂದು ತಿಳಿಸಿದರು.

### ನ್ಯೂನತೆಗಳು ಸಾಕಷ್ಟಿರುತ್ತವೆ, ಸರಿಪಡಿಸುವುದು ಮುಖ್ಯ: ಶಾಸಕ ಬಸವರಾಜ ರಾಯರಡ್ಡಿ

# ಸರ್ಕಾರಿ ಯೋಜನೆ ಫಲಾನುಭವಿಗಳ ಪೈಕಿ ಅನರ್ಹರ ಪತ್ತೆಗೆ ಪರಿಷ್ಕರಣೆ

**ಕೊಪ್ಪಳ, ಜು.2:** ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಪರಿಷ್ಕರಣೆ ಕುರಿತು ವಿರೋಧ ಪಕ್ಷಗಳು ತೀವ್ರ ವಾಗ್ದಾಳಿ ನಡೆಸುತ್ತಿವೆ. ಮತ್ತೊಂದೆಡೆ, ಆಡಳಿತಾರೂಢ ಕಾಂಗ್ರೆಸ್‌ನ ಹಿರಿಯ ಶಾಸಕ ಬಸವರಾಜ್ ರಾಯರೆಡ್ಡಿ ಸ್ವಪಕ್ಷದ ಸರ್ಕಾರದ ಆಡಳಿತಾತ್ಮಕ ಲೋಪಗಳನ್ನು ಬಹಿರಂಗವಾಗಿ ಒಪ್ಪಿಕೊಂಡಿದ್ದಾರೆ.



ಕೊಪ್ಪಳ ಜಿಲ್ಲೆಯ ಯಲಬುರ್ಗಾದಲ್ಲಿ ಗುರುವಾರ ಮಾತನಾಡಿದ ಅವರು, ಸರ್ಕಾರ ಅಂದಮೇಲೆ ನ್ಯೂನತೆಗಳು ಸಾಕಷ್ಟಿರುತ್ತವೆ ಎನ್ನುವ ಮೂಲಕ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಲೋಪಗಳಿರುವುದನ್ನು ಪರೋಕ್ಷವಾಗಿ ಒಪ್ಪಿಕೊಂಡಿದ್ದಾರೆ. ಗೃಹಲಕ್ಷ್ಮಿ ಯೋಜನೆಯಡಿ ಸದ್ಯ 2 ಲಕ್ಷ ಅರ್ಹ ಫಲಾನುಭವಿಗಳಿಗೆ ತಾಂತ್ರಿಕ ಕಾರಣಗಳಿಂದ ಹಣ ತಲುಪುತ್ತಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಗ್ಯಾರಂಟಿ ಯೋಜನೆಗಳ ಸಾಂಖ್ಯಿಕ ವಿವರ ನೀಡಿದ ಶಾಸಕ ರಾಯರೆಡ್ಡಿ, ಗೃಹಲಕ್ಷ್ಮಿ ಯೋಜನೆಯಡಿ ಒಟ್ಟು 1 ಕೋಟಿ 26 ಲಕ್ಷ ಜನರಿಗೆ ಹಣ ನೀಡಬೇಕು. ಆದರೆ ಪ್ರಸ್ತುತ ದಾಖಲಾತಿ ದೋಷ ಹಾಗೂ ತಾಂತ್ರಿಕ ಸಮಸ್ಯೆಗಳಿಂದಾಗಿ 1 ಕೋಟಿ 24 ಲಕ್ಷ ಜನರಿಗೆ ಮಾತ್ರ ಹಣ ತಲುಪುತ್ತಿದ್ದು, 2 ಲಕ್ಷ ಜನರಿಗೆ ಹಣ ಸಿಗುತ್ತಿಲ್ಲ. ಪ್ರತಿ ತಿಂಗಳು ಭ್ರಷ್ಟಾಚಾರ ರಹಿತವಾಗಿ ನೇರವಾಗಿ 2,500 ಕೋಟಿ ರೂ. ಹಣವನ್ನು ಫಲಾನುಭವಿಗಳ ಖಾತೆಗೆ ಜಮೆ ಮಾಡಲಾಗುತ್ತಿದೆ. ಆದರೆ ಪ್ರಸ್ತುತ ಪರಿಷ್ಕರಣೆ ನಡೆಸುತ್ತಿರುವುದಕ್ಕೆ ಮುಖ್ಯ ಕಾರಣವೆಂದರೆ, ರಾಜ್ಯದಲ್ಲಿ ಹಲವು ಫಲಾನುಭವಿಗಳು ಮೃತಪಟ್ಟಿದ್ದರೂ ಅವರ ಖಾತೆಗಳಿಗೆ ಹಣ ಜಮೆಯಾಗುತ್ತಿರುವುದು ಪತ್ತೆಯಾಗಿದೆ.

ಇನ್ನು ಗೃಹಜ್ಯೋತಿ ಯೋಜನೆಯಡಿ 1 ಕೋಟಿ 68 ಲಕ್ಷ ಜನರಿಗೆ ಉಚಿತ ವಿದ್ಯುತ್ ನೀಡಲಾಗುತ್ತಿದ್ದು, ಇದರಲ್ಲಿ ಕೆಲವು ಸರ್ಕಾರಿ ನೌಕರರ ಮನೆಗಳೂ ಸೇರಿವೆ. ಹೀಗಾಗಿ ಅನರ್ಹರನ್ನು ಗುರುತಿಸಲು ಪರಿಷ್ಕರಣೆ ಅನಿವಾರ್ಯವಾಗಿದೆ ಎಂದು ಹೇಳಿದ್ದಾರೆ.

ಪ್ರತಿವರ್ಷ ಗ್ಯಾರಂಟಿ ಯೋಜನೆಗಳಿಗಾಗಿ 52 ಸಾವಿರ ಕೋಟಿ ರೂ. ಹಣ ನೀಡುವುದು ಅನಿವಾರ್ಯವಾಗಿದ್ದು, ಇದನ್ನು ಬದಲಾಯಿಸಲು ಸಾಧ್ಯವಿಲ್ಲ. ಡಿಕೆ ಶಿವಕುಮಾರ್ ಈಗ ಮುಖ್ಯಮಂತ್ರಿ ಆಗಿದ್ದಾರೆ. ಗ್ಯಾರಂಟಿಗಳನ್ನು ಮುಂದುವರಿಸಿಕೊಂಡು ಹೋಗುವ ಬದ್ಧತೆ ಅವರಿಗಿದೆ. ಇದು ಯಾವುದೇ ವ್ಯಕ್ತಿಯ ವೈಯಕ್ತಿಕ ಕಾರ್ಯಕ್ರಮವಲ್ಲ, ಇದು ಕಾಂಗ್ರೆಸ್ ಪಕ್ಷದ ಕಾರ್ಯಕ್ರಮ. ಯಾರೇ ಮುಖ್ಯಮಂತ್ರಿಯಾದರೂ ಯೋಜನೆಗಳು ನಿಲ್ಲುವುದಿಲ್ಲ ಎಂದು ರಾಯರೆಡ್ಡಿ ಭರವಸೆ ನೀಡಿದರು.

ಇದೇ ವೇಳೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ವಿರುದ್ಧ ವಾಗ್ದಾಳಿ ನಡೆಸಿದ ಅವರು, ವಿರೋಧ ಪಕ್ಷದವರು ಸರಿಯಾಗಿ ಸ್ಟಡಿ ಮಾಡುತ್ತಿಲ್ಲ, ಸುಮ್ಮನೆ ಆರೋಪ ಮಾಡುತ್ತಿದ್ದಾರೆ. ಸರ್ಕಾರವನ್ನು ಎಲ್ಲಿ ಹಿಡಿಯಬೇಕೋ ಅಲ್ಲಿ ಹಿಡಿಯುತ್ತಿಲ್ಲ ಎಂದು ಲೇವಡಿ ಮಾಡಿದರು. ಅಲ್ಲದೆ, ಇನ್ನು ಒಂದು ವಾರದಲ್ಲಿ ಸಚಿವ ಸಂಪುಟ ವಿಸ್ತರಣೆಯಾಗಲಿದ್ದು, ಸಿದ್ದರಾಮಯ್ಯ ಅವರ ಮಾರ್ಗದರ್ಶನದಲ್ಲಿ ಉತ್ತಮ ಆಡಳಿತ ನೀಡಲಾಗುವುದು ಎಂದು ರಾಯರೆಡ್ಡಿ ವಿಶ್ವಾಸ ವ್ಯಕ್ತಪಡಿಸಿದರು.

# ಸೌಲಭ್ಯ ಕಲ್ಪಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ: ಈಶ್ವರ ಖಂಡ್ರೆ

**ಬೀದರ, ಜು. 2:** ರಾಜ್ಯದ ಶೇ 61ರಷ್ಟು ಜನರು ಗ್ರಾಮೀಣ ಭಾಗದಲ್ಲಿ ವಾಸವಾಗಿದ್ದಾರೆ. ಅವರಿಗೆ ಅಗತ್ಯ ಮೂಲ ಸೌಲಭ್ಯ ಕಲ್ಪಿಸಿ ಸ್ವಾವಲಂಬಿ ಜೀವನ ನಡೆಸಲು ನೆರವಾಗಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ನನಗೆ ನೀಡಿರುವ ಖಾತೆಗೆ ನ್ಯಾಯ ಒದಗಿಸಬೇಕಾದರೆ ಗ್ರಾಮೀಣ ಜನರ ಸೇವೆ ದೊರೆತಿರುವುದನ್ನ ಭಾಗ್ಯವೆಂದು ಭಾವಿಸಿ ಕೆಲಸ ಮಾಡುವೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವ ಈಶ್ವರ ಖಂಡ್ರೆ ಹೇಳಿದರು.

ನಗರದ ಹಿರೇಮಠ ಸಂಸ್ಥಾನದಲ್ಲಿ ಮಠದ ವತಿಯಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಜನರಿಗೆ ಶುದ್ಧ ಕುಡಿಯುವ ನೀರು



ಬೀದರ ಜಿಲ್ಲೆಯ ಬಾಲ್ಕಿ ಹಿರೇಮಠ ಸಂಸ್ಥಾನದ ವತಿಯಿಂದ ಸಚಿವ ಈಶ್ವರ ಖಂಡ್ರೆ ಅವರಿಗೆ ಸಮಸ್ತ ಭಕ್ತರ ಪರವಾಗಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಸನ್ಮಾನಿಸಿದರು.

ಪೂರೈಕೆ, ರಸ್ತೆ, ಚರಂಡಿ ನಿರ್ಮಾಣ, ಬೀದಿದೀಪ ಅಳವಡಿಕೆ ಸೇರಿದಂತೆ ಯುವಕರಿಗೆ ಕೌಶಲ ತರಬೇತಿ ನೀಡಿ ಗ್ರಾಮೀಣ ಭಾಗದ ಜನರು ನಗರ ಪ್ರದೇಶಕ್ಕೆ ವಲಸೆ ಹೋಗುವುದನ್ನು ತಡೆಯಲು ಪೂರಕ ಯೋಜನೆಗಳನ್ನು ರೂಪಿಸಲಾಗುವುದು ಎಂದು ಭರವಸೆ ನೀಡಿದರು.

ಸಾನ್ನಿಧ್ಯ ವಹಿಸಿದ್ದ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಮಾತನಾಡಿ, ಈಶ್ವರ ಖಂಡ್ರೆ ಅವರು ಬೀದರ್ ಜಿಲ್ಲೆ ಅಷ್ಟೇ ಅಲ್ಲದೆ, ರಾಜ್ಯದ ಅಭಿವೃದ್ಧಿಗಾಗಿ ಹಗಲಿರುಳು ಶ್ರಮಿಸುತ್ತಿದ್ದಾರೆ. ನೂತನ ಖಾತೆಯಲ್ಲಿಯೂ ಮಾದರಿಯ ಕಾರ್ಯಗಳು ಮಾಡುತ್ತರೆಂಬ ಭರವಸೆ ನಮ್ಮೆಲ್ಲರಿಗೆ ಇದೆ ಎಂದು ತಿಳಿಸಿದರು.

### ಖಾಸಗಿ ಐವಿಎಫ್ ಮಾಫಿಯಾ ಬಯಲು

# ಚಿಕಿತ್ಸೆ ಪಡೆದರೂ ಮಕ್ಕಳಾಗಿಲ್ಲ, ಹಣ ಮಾತ್ರ ಹೋಯಿತು

**ರಾಯಚೂರು, ಜು. 2:** ಮಕ್ಕಳಾಗದ ದಂಪತಿಗಳು ಐವಿಎಫ್ ಎಂಬ ತಂತ್ರಜ್ಞಾನದಡಿಯ ಚಿಕಿತ್ಸೆಗೆ ಹೋಗುವುದು ಮಾಮೂಲು. ಆದರೆ ಇದೇ ಐವಿಎಫ್‌ನಿಂದ ಮಕ್ಕಳಾಗಿಲ್ಲ, ಸುಮ್ಮನೆ ಹಣ ವಸೂಲಿಮಾಡಿದ್ದಾರೆ ಎಂದು ಗಡಿ ಜಿಲ್ಲೆಯ ಖಾಸಗಿ ಆಸ್ಪತ್ರೆ ವಿರುದ್ಧ ಇಲ್ಲಿಗೆ ಭೇಟಿ ನೀಡಿದವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಹಣ ಪಡೆದು ಚಿಕಿತ್ಸೆಯ ನೀಡಿದ ನಂತರ, ಮಕ್ಕಳಾಗುತ್ತವೆ ಅಂತಾ ನಾವು ಶೇ.100 ಗ್ಯಾರಂಟಿ ಕೊಟ್ಟಿಲ್ಲ. ಐವಿಎಫ್ ರಿಸಲ್ಟ್ ಇರುವುದು ಶೇ.40 ಪರ್ಸೆಂಟ್ ಮಾತ್ರ ಅಂತ ಆಸ್ಪತ್ರೆ ನೀಡಿರುವ ಹೇಳಿಕೆ ಶಾಕ್ ಉಂಟುಮಾಡಿದೆ.

**ಭರವಸೆ ಕೊಟ್ಟು ವಂಚನೆ:** ಒಂದು ಮಗುವಾದರೂ ಇರಬೇಕು ಅನ್ನೋದು ಪ್ರತಿ ದಂಪತಿಯ ಕನಸು. ಆದರೆ ಮಕ್ಕಳಾಗದೇ ಹಿನ್ನೆಲೆ ಈಗಿನ ಜನ ಐವಿಎಫ್ ಅನ್ನೋ ಹೊಸ ತಂತ್ರಜ್ಞಾನದ ಚಿಕಿತ್ಸೆ ಪಡೆಯೋದು ಮಾಮೂಲಾಗಿದೆ. ಇಂತಹದ್ದೇ ಐವಿಎಫ್ ಆಸ್ಪತ್ರೆ ಶೇ.100 ರಷ್ಟು ಮಕ್ಕಳು ಮಾಡುತ್ತೇವೆ ಅಂತ ಭರವಸೆ ಕೊಟ್ಟು ವಂಚಿಸುತ್ತಿದ್ದಾರೆ ಅನ್ನೋ ಆರೋಪ ಕೇಳಿಬಂದಿದೆ.

ರಾಯಚೂರು ನಗರದಲ್ಲಿರುವ ಖಾಸಗಿ ಐವಿಎಫ್ ಆಸ್ಪತ್ರೆ ವಿರುದ್ಧವೇ ಅಲ್ಲಿ ಚಿಕಿತ್ಸೆ ಪಡೆದವರೇ ಈಗ ಆಸ್ಪತ್ರೆ ವಿರುದ್ಧ ಕೆರಳಿ ಕೆಂಡವಗಿದ್ದಾರೆ. ಮಕ್ಕಳ ಭಾಗ್ಯ ಕರುಣಿಸದೇ ಕೇವಲ ಹಣ ವಸೂಲಿ ಮಾಡ್ತಿದ್ದಾರೆ ಅಂತ ಭೇಟಿ ನೀಡಿ ನಿರಾಶೆಯದ ಆಸ್ಪತ್ರೆ ವಿರುದ್ಧ ಕೆಲವರು ಗಂಭೀರ ಆರೋಪ ಮಾಡಿದ್ದಾರೆ. ಚಿಕಿತ್ಸೆ ಪಡೆದು ಲಕ್ಷಾಂತರ ರೂ ಖರ್ಚು ಮಾಡಿದರೂ ಮಕ್ಕಳಾಗಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿರುವ ರೋಗಿಗಳು, ಮೋದಲು ಆಸ್ಪತ್ರೆ ಶೇ.100 ಯಶಸ್ಸಿನ ಭರವಸೆ ನೀಡಿ ಹಣ ಪಡೆದಿದ್ದಾರೆ ಎಂದು ಉಮೇಶ್ ಹಾಗೂ ಶಾಲಮ್ ಎನ್ನುವವರು ಆರೋಪಿಸಿದ್ದಾರೆ. ಇದೇ ರೀತಿ ಸಾಕಷ್ಟು ಜನಕ್ಕೆ ಮೋಸ ಮಾಡಲಾಗಿದೆ ಎನ್ನಲಾಗುತ್ತಿದೆ.

ರಾಯಚೂರಿನ ಇದೇ ಖಾಸಗಿ ಐವಿಎಫ್ ಆಸ್ಪತ್ರೆ ವಿರುದ್ಧ ನಗರದ ನಿವಾಸಿಗಳಾದ ಉಮೇಶ್ ಹಾಗೂ ಶಾಲಮ್ ಎಂಬವರು ಕೆರಳಿದ್ದಾರೆ. ಉಮೇಶ್ ಹಾಗೂ ಶಾಲಮ್ ಇದೇ ಖಾಸಗಿ ಆಸ್ಪತ್ರೆಯಲ್ಲಿ ಮಕ್ಕಳಾಗು ಚಿಕಿತ್ಸೆ ಪಡೆದುಕೊಂಡಿದ್ದರಂತೆ. ಇವರು ಮೂರು–ನಾಲ್ಕು ಹಂತಗಳಲ್ಲಿ ಐವಿಎಫ್ ಚಿಕಿತ್ಸೆ ಪಡೆದರೂ ಮಕ್ಕಳಾಗಲಿಲ್ಲ. ಒಬ್ಬೊಬ್ಬರಿಂದ ಎರಡು ಲಕ್ಷ ರೂಗಳಿಗಿಂತ ಹೆಚ್ಚು ಹಣ




ಪಡೆದಿದ್ದಾರಂತೆ. ಶೆ.100 ಮಕ್ಕಳಾಗುತ್ತದೆ ಎಂಬ ಭರವಸೆ ನೀಡಿ ವಂಚನೆ ಮಾಡಲಾಗಿದೆ. ಜೊತೆಗೆ ಆಸ್ಪತ್ರೆ ಅನಧಿಕೃತವಾಗಿ ಕಾರ್ಯ ನಿರ್ವಹಿಸುತ್ತಿದೆ ಎಂದು ರೋಗಿಗಳು ಆರೋಪಿಸಿದ್ದು, ಇದಕ್ಕೆ ಆರೋಗ್ಯ ಇಲಾಖೆ ಅಧಿಕಾರಿಗಳ ಕುಮ್ಮಕ್ಕು ಕೂಡ ಇದೆ ಎಂದು ದೂರಿದ್ದಾರೆ.

ಆರೋಪ ನಿರಾಕರಣೆ: ಮಕ್ಕಳಾಗುತ್ತದೆ ಎಂದು ನಂಬಿಸಿ ಲಕ್ಷಾಂತರ ರೂಪಾಯಿ ಹಣ ಪಡೆದು ಚಿಕಿತ್ಸೆ ನೀಡಿದರೂ ಯಾವುದೇ ಫಲಿತಾಂಶ ಸಿಕಿಲ್ಲ ಅಂತ ಈ ರೋಗಿಗಳು ಆರೋಪಿಸಿದ್ದಾರೆ. ಇದಷ್ಟೇ ಅಲ್ಲದೇ, ಕಾನೂನು ಬಾಹಿರವಾಗಿ ಅನಧಿಕೃತವಾಗಿ ಅಸ್ಪತ್ರೆ ನಡೆಸಲಾಗುತ್ತಿದೆ ಅಂತ ಶಾಲಮ್ ಡಿಎಚ್‌ಓಗೂ ದೂರು ನೀಡಿದ್ದಾರೆ. ಆದರೆ ಈ ಆರೋಪದ ಬಗ್ಗೆ ಖಾಸಗಿ ಆಸ್ಪತ್ರೆ ಮಾಲಕಿ ಡಾ. ದೀಪಾ ಹನಮಸಾಗರ್, ಎಲ್ಲಾ ಆರೋಪಗಳನ್ನು ತಳ್ಳಿಹಾಕಿದ್ದಾರೆ. ಆಸ್ಪತ್ರೆ ಕಾನೂನುಬದ್ಧ ಲೈಸೆನ್ಸ್ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಐವಿಎಫ್ ಚಿಕಿತ್ಸೆಯಲ್ಲಿ ಶೇ.100 ಯಶಸ್ಸಿನ ಗ್ಯಾರಂಟಿ ನೀಡಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ವೈದ್ಯಕೀಯವಾಗಿ ಐವಿಎಫ್ ಯಶಸ್ಸಿನ ಪ್ರಮಾಣ ಶೇ.30 ರಿಂದ 40 ರಷ್ಟು ಇರುತ್ತೆ. ತಮ್ಮ ವಿರುದ್ಧ ಮಾಡಲಾಗಿರುವ ಆರೋಪಗಳು ಸುಳ್ಳು ಮತ್ತು ನಿರಾಧಾರ ಎಂದು ಹೇಳಿದ್ದಾರೆ.

ಡಿಎಚ್‌ಓ ಸ್ಪಷ್ಟನೆ: ಇನ್ನು ಈ ಬಗ್ಗೆ ಡಿಎಚ್‌ಓ ಡಾ. ಸುರೇಂದ್ರ ಬಾಬು ಪ್ರತಿಕ್ರಿಯಿಸಿದ್ದು, ಆರೋಪಿತ ಖಾಸಗಿ ಆಸ್ಪತ್ರೆ ಲೈಸೆನ್ಸ್ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿದೆ. ಐವಿಎಫ್ ಚಿಕಿತ್ಸೆಯಲ್ಲಿ 100% ಮಕ್ಕಳಾಗುತ್ತದೆ ಎಂದು ಭರವಸೆ ನೀಡಿ ರೋಗಿಗಳನ್ನು ವಂಚಿಸುವ ಬಗ್ಗೆ ದೂರು ಬಂದಲ್ಲಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು.

ಅಗತ್ಯವಿದ್ದರೆ ಆಸ್ಪತ್ರೆಯ ಲೈಸೆನ್ಸ್ ಕೂಡ ರದ್ದುಗೊಳಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಒಟ್ಟಿನಲ್ಲಿ ಐವಿಎಫ್ ವಿಚಾರ ಜಿಲ್ಲೆಯಲ್ಲಿ ಸಂಚಲನ ಸೃಷ್ಟಿಸಿದ್ದು, ಆರೋಗ್ಯ ಇಲಾಖೆ ಈ ಬಗ್ಗೆ ಏನೆಲ್ಲಾ ಕ್ರಮಕೈಗೊಳ್ಳತ್ತೆ ಕಾದು ನೋಡಬೇಕಿದೆ.

# ಕೋರ್ಟ್, ತಹಸೀಲ್ ಕಚೇರಿಗೆ ಹುಸಿ ಬಾಂಬ್ ಬೆದರಿಕೆ

**ಬೀದರ್, ಜು.2:** ನಗರದ ಜಿಲ್ಲಾ ನ್ಯಾಯಾಲಯ ಮತ್ತು ತಹಸೀಲ್ ಕಚೇರಿಗೆ ಬಾಂಬ್ ಬೆದರಿಕೆಯ ಇ-ಮೇಲ್ ಬಂದಿದ್ದು, ಕೆಲಕಾಲ ಕಚೇರಿ ಸಿಬ್ಬಂದಿಗಳು ನ್ಯಾಯಾಲಯ ಹಗೂ ಅಲ್ಲಿಗೆ ಬಂದಿರುವ ಜನರಲ್ಲಿ ಭಯದ ವಾತಾವರಣ ಉಂಟಾಗಿತ್ತು. ತಪಾಸಣೆ ಬಳಿಕ ಹುಸಿ ಕರೆ ಎಂಬುದು ದೃಢಪಟ್ಟಿದೆ. ಜಿಲ್ಲಾ ಸತ್ರ ನ್ಯಾಯಾಲಯದ ಅಧಿಕೃತ ಮೇಲ್ ವಿಳಾಸಕ್ಕೆ ಬಾಂಬ್ ಬೆದರಿಕೆ ಸಂದೇಶ ಬಂದಿದ್ದು, ಈ ವಿಷಯ ಗೊತ್ತಾಗುತ್ತಿದ್ದಂತೆ ನ್ಯಾಯಾಧೀಶರು, ನ್ಯಾಯವಾದಿಗಳು ಮತ್ತು ಕಕ್ಷಿದಾರರು ಕಟ್ಟಡದಿಂದ ಹೊರಗಡೆ ಬಂದಿದ್ದಾರೆ.

ಸ್ಥಳದಲ್ಲೇ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು.



ತಕ್ಷಣ ಮಾರ್ಕೆಟ್ ಠಾಣೆ ಪೊಲೀಸರಿಗೆ ಮಾಹಿತಿ ನೀಡಿದ್ದು, ಕೂಡಲೇ ಅಲರ್ಟ್ ಆದ ಪೊಲೀಸರು ಶ್ವಾನ ದಳ ಹಾಗೂ ಬಾಂಬ್ ನಿಷ್ಕ್ರಿಯ ದಳದೊಂದಿಗೆ ಸ್ಥಳಕ್ಕೆ ಆಗಮಿಸಿ ಕೋರ್ಟ್ ಆವರಣ, ಜಡ್ಜ್ ಹಾಲ್ ಹಾಗೂ ವಿವಿಧ ಕೊಠಡಿ ಸೇರಿ ನ್ಯಾಯಾಲಯದ ಪರಿಸರ ಪರಿಶೀಲನೆ ನಡೆಸಿದ್ದಾರೆ.

ನ್ಯಾಯಾಲಯದ ಪಕ್ಕದಲ್ಲೇ ಇರುವ ತಹಸೀಲ್ ಕಚೇರಿಗೂ ಇಂಥಹದ್ದೆ ಮೇಲೆ ಬಂದಿದ್ದು, ಅಲ್ಲೂ ಸಹ ಪರಿಶೀಲಿಸಿದಾಗ ಇದೊಂದು ಸುಳ್ಳು ಬೆದರಿಕೆ ಇಮೇಲ್ ಎಂಬುದು ದೃಢಪಟ್ಟಿದೆ. ಒಂದು ವರ್ಷದ ಹಿಂದೆ ಇಲ್ಲಿನ ಪ್ರಸಿದ್ಧ ಗುರುದ್ವಾರ ನಾನಕ್ ಝೀರಾಗೂ ಬಾಂಬ್ ಸ್ಫೋಟದ ಬೆದರಿಕೆ ಇ-ಮೇಲ್ ಬಂದಿತ್ತು.



ಗುರುವಾರ ಚಿಕ್ಕಮಗಳೂರು ಜಿಲ್ಲಾ ಮತ್ತು ಸತ್ರ ನ್ಯಾಯಾಲಯವನ್ನು ಗುರಿಯಾಗಿಸಿಕೊಂಡು ದೊಡ್ಡ ಬಾಂಬ್ ಬೆದರಿಕೆ ಘಟನೆ ಸಂಭವಿಸಿದೆ. ಭದ್ರತಾ ಪಡೆಗಳು ಆವರಣವನ್ನು ಸಂಪೂರ್ಣವಾಗಿ ಪರಿಶೀಲಿಸಿದವು ಮತ್ತು ಯಾವುದೇ ಸ್ಫೋಟಕ ವಸ್ತುಗಳು ಪತ್ತೆಯಾಗದ ನಂತರ ಅದನ್ನು ಅಧಿಕೃತವಾಗಿ ಸುಳ್ಳು ಎಂದು ಘೋಷಿಸಿದವು.

### ರಾಯಚೂರಿನಲ್ಲಿ ಕಾರಹುಣ್ಣಿಮೆ ಸಂಭ್ರಮ

## ಒಂದು ಟನ್ ಕಲ್ಲು ಎಳೆದು ಶಕ್ತಿ ಪ್ರದರ್ಶಿಸಿದ ಎತ್ತುಗಳು

**ರಾಯಚೂರು, ಜು. 2:** ಕಾರಹುಣ್ಣಿಮೆ ಹಬ್ಬದ ಅಂಗವಾಗಿ ರಾಯಚೂರು ಜಿಲ್ಲೆಯ ವಿವಿಧೆಡೆ ಮುಂಗಾರು ಸಾಂಸ್ಕೃತಿಕ ಉತ್ಸವ ಸಂಭ್ರಮದಿಂದ ನಡೆಯುತ್ತಿದ್ದು, ತಾಲೂಕಿನ ಆಶಾಪುರ ಗ್ರಾಮದಲ್ಲಿ ಎತ್ತುಗಳಿಗೆ ಭಾರ ಎಳೆಯುವ ವಿಶಿಷ್ಟ ಸ್ಪರ್ಧೆ ಆಯೋಜಿಸಿ ರೈತರು ಹಬ್ಬವನ್ನು ವಿಜೃಂಭಣೆಯಿಂದ ಆಚರಿಸಿದರು.



ರಾಯಚೂರಿನ ಮಂಗಳವಾರಪೇಟೆ ಹಿರೇಮಠದ ಪೀಠಾಧಿಪತಿ ವೀರ ಸಂಗಮೇಶ್ವರ ಶಿವಾಚಾರ್ಯ ಸ್ವಾಮೀಜಿ ಮುಂಗಾರು ಹಬ್ಬಕ್ಕೆ ಚಾಲನೆ ನೀಡಿದರು. ಬಳಿಕ ನಡೆದ ಸ್ಪರ್ಧೆಯಲ್ಲಿ ಜಿಲ್ಲೆಯ ವಿವಿಧ ತಾಲೂಕುಗಳು ಹಾಗೂ ಹೊರ ಜಿಲ್ಲೆಗಳಿಂದ ಆಗಮಿಸಿದ್ದ 15 ಜೋಡಿ ಎತ್ತುಗಳು ಸುಮಾರು ಒಂದು ಟನ್ ತೂಕದ ಬೃಹತ್ ಕಲ್ಲನ್ನು ಎಳೆದು ತಮ್ಮ ಸಾಮರ್ಥ್ಯ ಪ್ರದರ್ಶಿಸಿದವು.

ಆಶಾಪೂರ ಗ್ರಾಮದಲ್ಲಿ ಕಳೆದ 20 ವರ್ಷಗಳಿಂದ ನಿರಂತರವಾಗಿ ಮುಂಗಾರು ಹಬ್ಬವನ್ನು ಆಚರಿಸುವ ಸಂಪ್ರದಾಯ ಮುಂದುವರಿದಿದ್ದು, ಈ ಬಾರಿಯೂ ಸಾವಿರಾರು ಜನರ ಸಮ್ಮುಖದಲ್ಲಿ ಕಾರ್ಯಕ್ರಮ ಅದ್ದೂರಿಯಾಗಿ ನಡೆಯಿತು. ಭಾರ ಎಳೆಯುವ ಸ್ಪರ್ಧೆಯಲ್ಲಿ ಉತ್ತಮ ಪ್ರದರ್ಶನ ನೀಡಿದ ಎತ್ತುಗಳ ಮಾಲೀಕರಿಗೆ ಸನ್ಮಾನಿಸಿ ಬಹುಮಾನ ವಿತರಿಸಲಾಯಿತು.

ಸುತ್ತಮುತ್ತಲಿನ ಗ್ರಾಮಗಳ ರೈತರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಂಭ್ರಮಿಸಿದರು. ಇದೇ ವೇಳೆ ಈ ಬಾರಿ ಉತ್ತಮ ಮುಂಗಾರು ಮಳೆಯಾಗಿ ರೈತರಿಗೆ ಸಮೃದ್ಧ ಬೆಳೆ ಸಿಗಲಿ ಎಂದು ದೇವರಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

## ಬಳ್ಳಾರಿ ಜೆಡಿಎಸ್ ಜಿಲ್ಲಾಧ್ಯಕ್ಷ ಮೀನಳ್ಳಿ ತಾಯಣ್ಣ ಜನ್ಮದಿನಾಚರಣೆ ಅಭಿಮಾನಿಗಳ ಶುಭ ಹಾರೈಕೆ



**ಬಳ್ಳಾರಿ ಜು 02.:** ಜೆಡಿಎಸ್ ಜಿಲ್ಲಾಧ್ಯಕ್ಷ ಮೀನಳ್ಳಿ ತಾಯಣ್ಣ ಅವರ ಜನ್ಮ ದಿನಾಚರಣೆಯನ್ನು, ಅಭಿಮಾನಿಗಳು, ಬೆಂಬಲಿಗರು, ಜೆಡಿಎಸ್ ಕಾರ್ಯಕರ್ತರು ಗುರುವಾರ ಅತ್ಯಂತ ವಿಜೃಂಭಣೆಯಿಂದ ಆಚರಿಸಿದರು. ಜೆಡಿಎಸ್ ನಗರ ಅಧ್ಯಕ್ಷ ಹೊನ್ನೂರು ಸ್ವಾಮಿ (ವಂಡ್ರಿ) ಅವರ ನೇತೃತ್ವದಲ್ಲಿ, ಬೆಳಿಗ್ಗೆ ನಗರದ ಅಧಿದೇವತೆ ಶ್ರೀ ಕನಕ ದುರ್ಗಮ್ಮ ದೇವಿ ದೇವಾಲಯಕ್ಕೆ

ನೂರಾರು ಕಾರ್ಯಕರ್ತರು, ಅಭಿಮಾನಿಗಳು, ಪಕ್ಷದ ಕಾರ್ಯಕರ್ತರು ತೆರಳಿ ವಿಶೇಷ ಪೂಜೆ, ಅರ್ಚನೆ ಸಲ್ಲಿಸಿ, ಸಿಹಿ ಹಂಚಿ ಸಂಭ್ರಮಿಸಿದರು. ನಂತರ ಜೆಡಿಎಸ್ ಜಿಲ್ಲಾ ಕಚೇರಿಯಲ್ಲಿ ನಗರ ಅಧ್ಯಕ್ಷ ಹೊನ್ನೂರು ಸ್ವಾಮಿ (ವಂಡ್ರಿ) ಸೇರಿದಂತೆ ಅಪಾರ ಅಭಿಮಾನಿಗಳು, ಬೆಂಬಲಿಗರು ಬೃಹತ್ ಕೇಕ್ ಕತ್ತರಿಸಿ, ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು.

ಜಿಲ್ಲಾಧ್ಯಕ್ಷ ಮೀನಳ್ಳಿ ತಾಯಣ್ಣ ಅವರು ಜಿಲ್ಲಾ ಕಚೇರಿಗೆ ಆಗಮಿಸುತ್ತಿದ್ದಂತೆ ಜಮಾಯಿಸಿದ ನೂರಾರು ಅಭಿಮಾನಿಗಳು ಪಾತಕಿಗಳನ್ನು ಸಿಡಿಸಿ, ಅತ್ಯಂತ ವೈಭವದಿಂದ ಸ್ವಾಗತಿಸಿದರು. ನಂತರ ಜಮಾಯಿಸಿದ ಎಲ್ಲ ಗಣ್ಯರು ಹೂಗುಚ್ಚ ನೀಡಿ ಹುಟ್ಟು ಹಬ್ಬದ ಶುಭಾಶಯಗಳನ್ನು ತಿಳಿಸಿದರು. ಈ ಸಂದರ್ಭದಲ್ಲಿ ಜೆಡಿಎಸ್ ನಗರ ಅಧ್ಯಕ್ಷ ಹೊನ್ನೂರು ಸ್ವಾಮಿ (ವಂಡ್ರಿ), ಯಲ್ಲನಗೌಡ, ಜಾವೀದ್, ಮುತ್ತು, ಎಸ್ಸಿ ಘಟಕದ ಜಿಲ್ಲಾಧ್ಯಕ್ಷ ವಸಂತ ಕುಮಾರ್, ಮೇಘರಾಜ, ಭಾಷ, ಮಹಿಳಾ ಘಟಕ ಜಿಲ್ಲಾಧ್ಯಕ್ಷೆ ಪುಷ್ಪಾ, ನಾಗರಾಜ್, ಕಾಟನ್ ಮಿಲ್ ವೆಂಕಟೇಶ್ ಸೇರಿದಂತೆ ಅಪಾರ ಅಭಿಮಾನಿಗಳು, ನೂರಾರು ಕಾರ್ಯಕರ್ತರು ಇದ್ದರು.

## ಎಸ್ಐಆರ್ ಪ್ರಕ್ರಿಯೆ ಮೊದಲ ದಿನವೇ ರಾಜ್ಯದಲ್ಲಿಯೇ ಬಳ್ಳಾರಿ ದ್ವಿತೀಯ ಸ್ಥಾನ: ಜಿಲ್ಲಾಧಿಕಾರಿ ಹರ್ಷ

**ಬಳ್ಳಾರಿ, ಜು.01.** ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್.ಐ.ಆರ್) ಪ್ರಕ್ರಿಯೆಯಲ್ಲಿ ಮತದಾರರಿಗೆ ಎನ್ಯುಮರೇಷನ್ ಫಾರಂ ನೀಡಿ ಅವನ್ನು ತುಂಬಿಸಿ, ಡಿಜಿಟಲ್ ಮಾಡಿ ಅಪ್ ಲೋಡ್ ಮಾಡುವುದರಲ್ಲಿ ಮೊದಲ ದಿನ ಬಳ್ಳಾರಿ ಜಿಲ್ಲೆ ರಾಜ್ಯದಲ್ಲಿಯೇ ಎರಡನೇ ಸ್ಥಾನ ಪಡೆದಿದೆ ಎಂದು ಜಿಲ್ಲಾಧಿಕಾರಿ ಕೆ.ನಾಗೇಂದ್ರಪ್ರಸಾದ್ ತಿಳಿಸಿದ್ದಾರೆ. ಈ ಕುರಿತು ವಿವರಣೆ ನೀಡಿದ ಜಿಲ್ಲಾಧಿಕಾರಿಗಳು ಈ ಪ್ರಕ್ರಿಯೆಯಲ್ಲಿ ರಾಯಚೂರು ಜಿಲ್ಲೆ 15750 ಮತದಾರರ ಹೆಸರು ಡಿಜಿಟಲ್ ಮೂಲಕ ಅಪ್ ಲೋಡ್ ಮಾಡಿ ಮೊದಲ ಸ್ಥಾನದಲ್ಲಿದ್ದರೆ. ಬಳ್ಳಾರಿ ಜಿಲ್ಲೆ 8059 ಮತದಾರರ ಹೆಸರು ಡಿಜಿಟಲ್ ಮಾಡಿದೆ. ಕೊಡುಗು ಜಿಲ್ಲೆ ಕೇವಲ 163 ಮಾಡುವ ಮೂಲಕ ಕೊನೆ ಸ್ಥಾನದಲ್ಲಿದೆ ಎಂದರು.



ಇನ್ನು ಎನ್ಯುಮರೇಷನ್ ಅರ್ಜಿ ಗಳನ್ನು ಮತದಾರರಿಗೆ ವಿತರಿಸುವಲ್ಲಿ ಹಾಸನ. 204110 ಅರ್ಜಿ ವಿತರಿಸಿ ಮೊದಲ ಸ್ಥಾನದಲ್ಲಿದ್ದರೆ. ಬಳ್ಳಾರಿ 41774 ವಿತರಿಸಿ 19ನೇ ಸ್ಥಾನದಲ್ಲಿದೆ. ಕೊಡಗು 8670 ವಿತರಿಸಿ ಕೊನೆ ಸ್ಥಾನದಲ್ಲಿದೆ. ಈ ತಿಂಗಳ 29ರವರೆಗೆ ಈ ಪ್ರಕ್ರಿಯೆ ನಡೆಯಲಿದೆ.ಮೊದಲ ದಿನವಾದ್ದರಿಂದ ಒಂದಿಷ್ಟು ಕೆಲ ಅಡೆ ತಡೆಗಳು ಎದುರಾ ಗಿವೆ ಅವನ್ನು ಪರಿಹರಿಸಿಕೊಂಡು ಇನ್ನಷ್ಟು ವೇಗ ಪಡೆ ಯಲಿದೆಂದು ಎಡಿಸಿ ಮಹಮ್ಮದ್ ಝುಬೇರ್ ಅವರು ಹೇಳಿದ್ದು. ಮನೆ ಮನೆಗೆ ಬರುವ ಬಿಎಲ್ಓ ಗಳಿಗೆ ಮತದಾರರು ಅಗತ್ಯ ಮಾಹಿತಿ ನೀಡಿ ಸಹಕರಿಸಬೇಕು.

## ಎಸ್.ಐ.ಆರ್ ಪ್ರಕ್ರಿಯೆಯಲ್ಲಿ ಎಲ್ಲರೂ ಪಾಲ್ಗೊಳ್ಳಿ: ಭಗವಂತ ಖೂಬಾ

ರಾಜ್ಯದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್.ಐ.ಆರ್) ಅಭಿಯಾನದ ಅಂಗವಾಗಿ ಇಂದು ಕೇಂದ್ರದ ಮಾಜಿ ಸಚಿವರಾದ ಭಗವಂತ ಖೂಬಾರವರ ಗೃಹ ಕಚೇರಿಗೆ ಆಗಮಿಸಿದ್ದ ಬೂತ್ ಮಟ್ಟದ ಅಧಿಕಾರಿಯಾದ ಶ್ರೀ ತುಕರಾಮ್ ಕುದರೆಯವರಿಗೆ ಭಗವಂತ ಖೂಬಾ ಅವರು ಮತ್ತು ಅವರ ಕುಟುಂಬ ಸದಸ್ಯರು ಎಲ್ಲಾ ಅಗತ್ಯ ದಾಖಲೆಗಳು ಸಲ್ಲಿಸಿ, ಎಸ್.ಐ.ಆರ್ ಪ್ರಕ್ರೀಯೆಯಲ್ಲಿ ಭಾಗವಹಿಸಿದರು.

ನಂತರ ಬಿ.ಎಲ್.ಓ ಜೊತೆ ಮಾತನಾಡಿದ ಖೂಬಾ, ಎಸ್.ಐ.ಆರ್ ಕುರಿತು ಎಲ್ಲರ ಮನೆಗೆ ತೆರಳಿ, ಅವರಿಗೆ ಫಾರ್ಮಗಳು ನೀಡಿ, ಯಾರಾದರೂ ಊರಲ್ಲಿ ಇಲ್ಲವಾದಲ್ಲಿ ಅವರ ದೂರವಾಣಿ ಸಂಖ್ಯೆ ಪಡೆದು, ಅವರಿಗೆ ಕರೆ ಮಾಡಿ ಮಾಹಿತಿ ನೀಡಿ ಮತ್ತು ಎಲ್ಲರಿಗೂ ಅನುಕೂಲವಾಗುವ ಹಾಗೆ ಕೆಲಸ ಮಾಡಿ ಎಂದು ಸಲಹೆ ನೀಡಿದರು.

ಎಸ್.ಐ.ಆರ್‌ನಲ್ಲಿ ಜನರು ತುಂಬಾ ಉತ್ಸಾಹದಿಂದ ಭಾಗಿಯಾಗಿ, ದಾಖಲೆಗಳು ನೀಡಿ ಸಹಕರಿಸುತ್ತಿದ್ದಾರೆ, ಊರಲ್ಲಿ ಇರದೆ ಇರುವವರಿಗೆ ನಾವು ಕೂಡ ಕಾಲ್ ಮಾಡುತ್ತಿದ್ದೇವೆ ಹಾಗೂ ಜನರೆ ನಮಗೆ ಕಾಲ್ ಮಾಡಿ ನಮ್ಮ ಮನೆಗೆ ಯಾವಾಗ ಬರ್ತಿರಿ, ಇನ್ನು ಯಾಕೆ ಬಂದಿಲ್ಲಾ ಎಂದೆಲ್ಲಾ ಕೇಳುತ್ತಿದ್ದಾರೆ, ಒಟ್ಟಿನಲ್ಲಿ ಜನರಿಂದ ಒಳ್ಳೆಯ ಪ್ರತಿಕ್ರಿಯೆ ಸಿಗುತ್ತಿದೆ ಮತ್ತು ಸಂತೋಷದಿಂದ ಇದರಲ್ಲಿ ಪಾಲ್ಗೊಳ್ಳುತ್ತಿದ್ದಾರೆ ಎಂದು ಅಧಿಕಾರಿಯವರು ಖೂಬಾ ಅವರ ಗಮನಕ್ಕೆ ತಂದರು. ಎಸ್.ಐ.ಆರ್



ಒಂದು ಆಡಳಿತಾತ್ಮಕ ಪ್ರಕ್ರಿಯೆಯಲ್ಲ ; ಪ್ರತಿಯೊಬ್ಬ ಅರ್ಹ ನಾಗರಿಕರ ಮತದಾನದ ಹಕ್ಕನ್ನು ಸಂರಕ್ಷಿಸುವ ಮಹತ್ವದ ಕಾರ್ಯವಾಗಿದೆ, ಆದ್ದರಿಂದ ಮನೆಗೆ ಬರುವ ಬಿ.ಎಲ್.ಓಗಳಿಗೆ ಎಲ್ಲರೂ ಅಗತ್ಯ ಸಹಕಾರ ನೀಡಿ, ದಾಖಲೆಗಳು ಒದಗಿಸಿ ಮತ್ತು ನಿಮ್ಮ ಹೆಸರು ಹಾಗು ವಿವರಗಳು ಮತದಾರರ ಪಟ್ಟಿಯಲ್ಲಿ ನಿಖರವಾಗಿ ದಾಖಲಾಗಿರುವುದನ್ನು ಖಚಿತಪಡಿಸಿಕೊಳ್ಳಬೇಕೆಂದು ಕೇಂದ್ರದ ಮಾಜಿ ಸಚಿವ ಭಗವಂತ ಖೂಬಾ ಸಾರ್ವಜನಿಕರಲ್ಲಿ ವಿನಂತಿಸಿಕೊಂಡಿದ್ದಾರೆ.

### ಗುಟ್ಕಾ ಉಗಿಯಲು ಬಗ್ಗಿದ ಯುವಕ

## ತಲೆಗೆ ಟಿಪ್ಪರ್ ಗುದ್ದಿ ರಸ್ತೆಗೆ ಬಿದ್ದ ರುಂಡ, ಬಸ್ಸಿನಲ್ಲಿ ನೇತಾಡಿದ ಮುಂಡ!

**ಹುಬ್ಬಳ್ಳಿ, ಜು. 2:** ಕೆಎಸ್ಆರ್‌ಟಿಸಿ ಬಸ್ಸಿನಲ್ಲಿ ಪ್ರಯಾಣ ಮಾಡುವಾಗ ಕಿಟಕಿಯಿಂದ ದೇಹದ ಭಾಗಗಳನ್ನು ಹೊರಹಾಕುವುದು ಎಷ್ಟು ಅಪಾಯಕಾರಿ ಎಂಬುದಕ್ಕೆ ಹುಬ್ಬಳ್ಳಿಯಲ್ಲಿ ನಡೆದ ಒಂದು ಭೀಕರ ಅಪಘಾತವೇ ಸಾಕ್ಷಿಯಾಗಿದೆ. ಚಲಿಸುವ ಬಸ್‌ನ ಕಿಟಕಿಯಿಂದ ಹೊರಗೆ ತಲೆ ಹಾಕಿದ್ದ ವಿದ್ಯಾರ್ಥಿಯೊಬ್ಬ ಹಿಂಬದಿಯಿಂದ ಬಂದ ಟಿಪ್ಪರ್ ಡಿಕ್ಕಿಯಾಗಿ ರುಂಡವೇ ಕತ್ತರಿಸಿ ಬಿದ್ದು, ಸ್ಥಳದಲ್ಲೇ ಪ್ರಾಣ ಕಳೆದುಕೊಂಡಿರುವ ಘಟನೆ ಕುಂದಗೋಳ ಪಟ್ಟಣದ ಹೊರವಲಯದಲ್ಲಿ ಸಂಭವಿಸಿದೆ.

**ಸಾರ್ವಜನಿಕರಿಗೆ ಎಚ್ಚರಿಕೆ**

**ಪ್ರಯಾಣದ ವೇಳೆ ಕಿಟಕಿಯಿಂದ ಕೈ ಅಥವಾ ತಲೆಯನ್ನು ಹೊರಹಾಕುವುದು ಮೃತ್ಯುವನ್ನು ಆಹ್ವಾನಿಸಿದಂತೆ. ವಿಶೇಷವಾಗಿ ಯುವಜನತೆ ಮತ್ತು ವಿದ್ಯಾರ್ಥಿಗಳು ಬಸ್ ಅಥವಾ ರೈಲುಗಳಲ್ಲಿ ಪ್ರಯಾಣಿಸುವಾಗ ಸುರಕ್ಷತಾ ನಿಯಮ ಗಳನ್ನು ಪಾಲಿಸಬೇಕು. ಒಂದು ಕ್ಷಣದ ಅಜಾಗರೂಕತೆ ಇಡೀ ಕುಟುಂಬಕ್ಕೆ ತುಂಬಲಾರದ ನಷ್ಟವನ್ನುಂಟು ಮಾಡುತ್ತದೆ ಎಂಬುದಕ್ಕೆ ಈ ಘಟನೆ ಕನ್ನಡಿ ಹಿಡಿದಿದೆ. ಶಿರೂರು ಗ್ರಾಮದ ಬಡ ಕುಟುಂಬದ ಈ ವಿದ್ಯಾರ್ಥಿಯ ಸಾವು ಇಡೀ ಗ್ರಾಮದಲ್ಲಿ ಶೋಕದ ಛಾಯೆ ಮೂಡಿಸಿದೆ.**

**ಘಟನೆಯ ವಿವರ:** ಮೃತಪಟ್ಟ ವಿದ್ಯಾರ್ಥಿಯನ್ನು ಕುಂದಗೋಳ ತಾಲೂಕಿನ ಶಿರೂರು ಗ್ರಾಮದ ನಿವಾಸಿ ಫಕ್ಕಿರೇಶ್ (17) ಎಂದು ಗುರುತಿಸಲಾಗಿದೆ. ಈತ ಐಟಿಐ ವಿದ್ಯಾರ್ಥಿಯಾಗಿದ್ದು, ಇಂದು ಹುಬ್ಬಳ್ಳಿಯಿಂದ ತನ್ನ ಗ್ರಾಮವಾದ ಶಿರೂರಿಗೆ ತೆರಳಲು ಹುಬ್ಬಳ್ಳಿಯಿಂದ ಲಕ್ಷ್ಮೇಶ್ವರಕ್ಕೆ ಹೊರಟಿದ್ದ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಬಸ್ಸನ್ನು ಹತ್ತಿದ್ದನು.



ಫಕ್ಕಿರೇಶ್ ಬಸ್ಸಿನ ಹಿಂಬದಿಯ ಸೀಟಿನಲ್ಲಿ ಕುಳಿತಿದ್ದನು. ಬಸ್ ಕುಂದಗೋಳ ಪಟ್ಟಣದ ಹೊರವಲಯದಲ್ಲಿ ಚಲಿಸುತ್ತಿದ್ದಾಗ, ಗುಟ್ಕಾ ಉಗುಳುವ ಉದ್ದೇಶದಿಂದ ಆತ ಕಿಟಕಿಯ ತಲೆಯನ್ನು ಹೊರಗೆ ಹಾಕಿದ್ದಾನೆ ಎನ್ನಲಾಗಿದೆ. ಇದೇ ಸಮಯದಲ್ಲಿ ಬಸ್ಸಿನ ಹಿಂಬದಿಯಿಂದ ಅತಿ ವೇಗವಾಗಿ ಬಂದ ಟಿಪ್ಪರ್ ಲಾರಿಯೊಂದು ಕಿಟಕಿಯಿಂದ ಹೊರಗಿದ್ದ ಫಕ್ಕಿರೇಶ್ ಅವರ ತಲೆಗೆ ಭೀಕರವಾಗಿ ಡಿಕ್ಕಿ ಹೊಡೆದಿದೆ. ಟಿಪ್ಪರ್ ಡಿಕ್ಕಿಯಾದ ರಭಸಕ್ಕೆ ವಿದ್ಯಾರ್ಥಿಯ ಶಿರವು ದೇಹದಿಂದ ಬೇರ್ಪಟ್ಟಿದ್ದು, ರಸ್ತೆಗೆ ಬಿದ್ದಿದೆ. ದೇಹವು ಬಸ್ಸಿನ ಕಿಟಕಿಯ ಬಳಿಯೇ ನೇತಾಡುತ್ತಿದ್ದ ದೃಶ್ಯ ಸ್ಥಳೀಯರಲ್ಲಿ ಮತ್ತು ಸಹ ಪ್ರಯಾಣಿಕರಲ್ಲಿ ನಡುಕ ಹುಟ್ಟಿಸುವಂತಿತ್ತು. ಘಟನೆಯ ತೀವ್ರತೆಗೆ ಬಸ್ ನಿಲ್ದಾಣದ ಬಳಿ ನೆರೆದಿದ್ದ ಜನರು ದಿಕ್ಕೆಟ್ಟು ಹೋಗಿದ್ದಾರೆ.

**ಪೊಲೀಸ್ ಭೇಟಿ ಮತ್ತು ತನಿಖೆ:** ವಿಷಯ ತಿಳಿಯುತ್ತಿದ್ದಂತೆಯೇ ಕುಂದಗೋಳ ಪೊಲೀಸ್ ಠಾಣೆಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಸ್ಥಳೀಯ ಆಸ್ಪತ್ರೆಗೆ ರವಾನಿಸಲಾಗಿದೆ. ಟಿಪ್ಪರ್ ಚಾಲಕನ ವಿರುದ್ಧ ಪ್ರಕರಣ ದಾಖಲಿಸಿ, ಮುಂದಿನ ಕ್ರಮ ಕೈಗೊಳ್ಳಲಿದ್ದಾರೆ.

## ರೋಗಿಗಳು ವೈದ್ಯರನ್ನು ದೇವರ ರೂಪದಲ್ಲಿ ನೋಡುತ್ತಾರೆ : ಡಾ.ಕಾಮರೆಡ್ಡಿ

**ಕಲಬುರಗಿ, ಜು. 2:** ವೈದ್ಯೋ ನಾರಾಯನ ಹರಿ ಎನ್ನುತ್ತರೆ. ಅಂದರೆ ಜೀವ ಕಾಪಾಡುವ ವೈದ್ಯರು ರೋಗಿಗಳ ಪಾಲಿಗೆ ದೇವರು ಎಂಬುದು ನಿಜ. ರೋಗಿಗಳು ನಮಗೆ ದೇವರ ರೂಪದಲ್ಲಿ ನೊಡುತ್ತಾರೆ ನಾವು ಕೂಡ ರೋಗಿಗೆ ಚಿಕಿತ್ಸೆ ನೀಡುವಾಗ ದೇವರ ರೂಪದಲ್ಲಿ ನೋಡಬೇಕು ಎಂದು ಕಾಮರಡ್ಡಿ ಆಸ್ಪತ್ರೆಯ ಮುಖ್ಯಸ್ಥ ಜಿಲ್ಲೆಯ ಖ್ಯಾತ ವೈದ್ಯರಾದ ಡಾ.ಎಸ್.ಬಿ. ಕಾಮರೆಡ್ಡಿ ಹೇಳಿದ್ದಾರೆ.

ನಗರದ ಕಾಮರಡ್ಡಿ ಆಸ್ಪತ್ರೆಯಲ್ಲಿ ವೈದ್ಯರ ದಿನಾಚರಣೆ ಕಾರ್ಯಕ್ರಮವನ್ನು ರೊಗಿಗಳ ಸಮ್ಮುಖದಲ್ಲಿ ಕೆಕ್ ಕತ್ತರಿಸಿ ಉದ್ಘಾಟಿಸಿ ಮಾತನಾಡಿದವರು, ರೋಗಿಗಳೊಂದಿಗೆ ವೈದ್ಯರು ಹೆಚ್ಚು ಹೊತ್ತು ಮಾತನಾಡಿದಷ್ಟು ಆತ್ಮವಿಶ್ವಾಸ ರೋಗಿಗಳಲ್ಲಿ ಬೆಳೆಯುತ್ತದೆ. ಕಾಯಿಲೆಯ ಬಗ್ಗೆ ವೈದ್ಯರಿಗೂ ಸ್ಪಷ್ಟತೆ ಸಿಗುತ್ತದೆ. ಇದರಿಂದಾಗಿ ಅಗತ್ಯ ಚಿಕಿತ್ಸೆಯನ್ನು ಅತ್ಯಂತ ಪರಿಣಾಮಕಾರಿಯಾಗಿ ನೀಡಲು ಸಹಾಯವಾಗಲಿದೆ. ಹೀಗಾಗಿ, ರೋಗಿಗಳೊಂದಿಗೆ ವೈದ್ಯರು ಸಾಧ್ಯವಾದಷ್ಟು ನಿಖರ, ಮುಕ್ತವಾಗಿ ಸಂವಹನ ನಡೆಸಬೇಕು ಎಂದರು.

ಆಸ್ಪತ್ರೆಯ ನಿರ್ದೇಶಕಿ ಡಾ. ಪ್ರತಿಮಾ ಕಾಮರಡ್ಡಿ, ಇಂದು ಸಾರ್ವಜನಿಕರು ಎಲ್ಲಾ ಬಗೆಯ ಕಾಯಿಲೆ ಹಾಗೂ ವೈದ್ಯಕೀಯ



ಕಲಬುರಗಿ ನಗರದ ಕಾಮರೆಡ್ಡಿ ಆಸ್ಪತ್ರೆಯಲ್ಲಿ ರಾಷ್ಟ್ರೀಯ ವೈದ್ಯರ ದಿನಚರಣೆ ಅಂಗವಾಗಿ ರೋಗಿಗಳ ಸಮ್ಮುಖದಲ್ಲಿ ಕೇಕ್ ಕತ್ತರಿಸಿ ಕಾರ್ಯಕ್ರಮ ಉದ್ಘಾಟಿಸಿ ರೋಗಿಗಳ ಸೇವೆಯ ಕುರಿತು ಡಾ.ಎಸ್.ಬಿ.ಕಾಮರೆಡ್ಡಿ ಅವರು ಮಾತನಾಡಿದರು.

ಚಿಕಿತ್ಸೆಯ ಬಗ್ಗೆ ಹೆಚ್ಚಿನ ಅರಿವು ಪಡೆದಿದ್ದಾರೆ. ಎಲ್ಲವನ್ನೂ ಪ್ರಶ್ನಿಸುವುದು ಹಾಗೂ ತಿಳಿಯಲು ಬಯುಸುತ್ತಾರೆ. ಗ್ರಾಮೀಣ ಪ್ರದೇಶದ ಜನರು ತಾವು ಅನುಭವಿಸುತ್ತಿರುವ ಸಂಕಟ ಮಾತ್ರ ತಿಳಿಸಿ, ರೋಗ ನಿರ್ಣಯ ಚಿಕಿತ್ಸೆ ಹೀಗೆ ಎಲ್ಲವೂ ವೈದ್ಯರ ಸೂಚನೆಯಂತೆಯೇ ಪಾಲಿಸಲು ಮುಂದಾಗುತ್ತಾರೆ. ಅವರಿಗೂ ಸಹ ಸಂಪೂರ್ಣ ಮಾಹಿತಿ ನೀಡಿ, ಆತ್ಮವಿಶ್ವಾಸ ಮೂಡಿಸಬೇಕು ಹಾಗೂ ಚಿಕಿತ್ಸೆಯ ಆಯ್ಕೆಗಳನ್ನು ಅವರಿಗೇ ನೀಡಬೇಕು ಎಂದರು.

ಈ ಸಂದರ್ಭದಲ್ಲಿ ಬಸವರಾಜಪ್ಪ ಕಾಮರಡ್ಡಿ, ಡಾ. ಅಮರೇಶ ಬಿರಾದರ, ಡಾ. ನವೀನ್ ಬಿರಾದರ, ಸತಿಶ ಪಾಟೀಲ್, ಡಾ. ಸುನೀಲ್ ಸೇರಿದಂತೆ ಅನೇಕರು ಉಪಸ್ಥಿತ ರಿದ್ದರು.

**ಉಚಿತ ಆರೋಗ್ಯ ತಪಾಸಣಾ ಶಿಬಿರ:** ವೈದ್ಯರ ದಿನಾಚರಣೆ ಅಂಗವಾಗಿ ನಗರದ ಎನ್.ಕೆ ಆಸ್ಪತ್ರೆಯಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಜರುಗಿತು. ಶಿಬಿರದಲ್ಲಿ ವಿವಿಧ ಆರೋಗ್ಯ ಸಮಸ್ಯೆಗಳ ತಪಾಸಣೆ ನಡೆಸಿ ಅಗತ್ಯ ವೈದ್ಯಕೀಯ ಸಲಹೆ ಹಾಗೂ ಚಿಕಿತ್ಸೆ ನೀಡಲಾಯಿತು.

ಈ ಸಂದರ್ಭದಲ್ಲಿ ಡಾ. ಆರಿಫ್ ರಝಾ ಅಹ್ಮದ್ (ಜಠರ, ಯಕೃತ್ ಹಾಗೂ ಅಗ್ನ್ಯಾಶಯ ಸಂಬಂಧಿತ ಶಸ್ತ್ರಚಿಕಿತ್ಸಾ ತಜ್ಞರು), ಡಾ. ಜೀಶಾನ್ ಅಲಿ (ಜೀರ್ಣಾಂಗ ಮತ್ತು ಯಕೃತ್ ರೋಗಗಳ ತಜ್ಞರು), ಡಾ. ವೀರೇಶ್ ಗೋಡಿ (ಸಾಮಾನ್ಯ ವೈದ್ಯಕೀಯ ಹಾಗೂ ದೀರ್ಘಕಾಲೀನ ಕಾಯಿಲೆಗಳ ತಜ್ಞರು), ಡಾ. ಮಹಾಲಿಂಗಂ (ಮೂಳೆ, ಕೀಲು ಹಾಗೂ ಬೆನ್ನುಹುರಿ ಶಸ್ತ್ರಚಿಕಿತ್ಸಾ ತಜ್ಞರು), ಡಾ. ಶ್ರುತಿಕಾ (ಮಹಿಳಾ ಆರೋಗ್ಯ ಮತ್ತು ಸ್ತ್ರೀರೋಗ ತಜ್ಞರು), ಡಾ. ಮೊಹಮ್ಮದ್ ತೈಫ್ ಬೆಂಗಡಿಗೇರಿ (ಮೂತ್ರಪಿಂಡ ಮತ್ತು ಮೂತ್ರನಾಳ ರೋಗಗಳ ತಜ್ಞರು), ಡಾ. ವಿವೇಕ್ ಪಾಟೀಲ್ (ನೆಫ್ರಾಲಜಿ ಮತ್ತು ಡಯಾಲಿಸಿಸ್ ತಜ್ಞರು), ಡಾ. ರಹಮಾನ್ ಹೈದರ್ (ತೀವ್ರ ನಿಗಾ ಚಿಕಿತ್ಸೆ ವಿಭಾಗದ ಮುಖ್ಯಸ್ಥರು) ಹಾಗೂ ಡಾ. ಉದಯಕುಮಾರ್ ಖಾಸಗೆ (ತುರ್ತು ಚಿಕಿತ್ಸಾ ವಿಭಾಗದ ಮುಖ್ಯಸ್ಥರು) ಉಪಸ್ಥಿತರಿದ್ದರು.

ಶಿಬಿರದಲ್ಲಿ ಸುಮಾರು 600ಕ್ಕೂ ಹೆಚ್ಚು ರೋಗಿಗಳು ಭಾಗವಹಿಸಿ ಉಚಿತ ಆರೋಗ್ಯ ತಪಾಸಣೆ ಮತ್ತು ಚಿಕಿತ್ಸೆಯ ಸೌಲಭ್ಯವನ್ನು ಪಡೆದುಕೊಂಡರು. ಆರೋಗ್ಯ ಸೇವೆಯನ್ನು ಜನಸಾಮಾನ್ಯರಿಗೆ ತಲುಪಿಸುವ ಉದ್ದೇಶದಿಂದ ಇಂತಹ ಶಿಬಿರಗಳನ್ನು ಮುಂದೆಯೂ ಆಯೋಜಿಸಲಾಗುವುದು ಎಂದು ಆಸ್ಪತ್ರೆಯ ಆಡಳಿತ ಮಂಡಳಿ ತಿಳಿಸಿತು.


## ಲಂಬಾಣಿ ತಾಂಡಾ ಜನರಿಂದ ಕ್ರಾಂತಿಕಾರಿ ಹೆಜ್ಜೆ: ವರದಕ್ಷಿಣೆ ನಿಷೇಧ-ಉಲ್ಲಂಘಿಸಿದವರಿಗೆ 1 ಲಕ್ಷ ರೂ. ದಂಡ

**ಕಲಬುರಗಿ, ಜು. 2:** ವರದಕ್ಷಿಣೆ ಸಾಮಾಜಿಕ ಪಿಡುಗಾಗಿ ಇಂದಿಗೂ ಕಾಡುತ್ತಿದೆ. ಅನಿಷ್ಟ ಪದ್ಧತಿಯಾಗಿ ಎಲ್ಲ ಸಮಾಜಗಳಿಗೂ ಕಾಡುತ್ತಿರುವಾಗ ಇದಕ್ಕೆ ಕಡಿವಾಣ ಹಾಕಲು ಕಾನೂನು ಜಾರಿಯಲ್ಲಿದ್ದರೂ, ನಿರಂತರ ನಡೆಯುತ್ತಿದೆ. ಜನರೇ ಮುಂದೆ ಬಂದು ವರದಕ್ಷಿಣೆ ತಡೆಯಲು ಯಾವುದೇ ಒಂದು ಸಮಾಜ ಮುಂದೆ ಬಂದಿಲ್ಲ.

ಆದರೆ ಜಿಲ್ಲೆಯ ಆಳಂದ ತಾಲೂಕಿನ ಲಂಬಾಣಿ ತಾಂಡಾಗಳಲ್ಲಿ ಸದ್ದಿಲ್ಲದಂತೆ ವರದಕ್ಷಿಣೆ ವಿರುದ್ಧ ಹೊಸ ಕ್ರಾಂತಿಯೇ ಶುರುವಾಗಿದೆ. ಬಂಜಾರಾ ಕ್ರಾಂತಿದಳ, ಸೇವಾಲಾಲ ಜಯಂತಿ ಸಮಿತಿ ಜಂಟಿಯಾಗಿ ಲಂಬಾಣಿ ಸಮಾಜದ ಹಿರಿಯರು, ಯುವಕರು ಒಂದಾಗಿ ವರದಕ್ಷಿಣೆ ಕೊಡು-ಕೊಳ್ಳುವುದನ್ನು ತಾಂಡಾಗಳಲ್ಲಿ ನಿಷೇಧಿಸುವ ಮೂಲಕ ಸರಳ, ವರದಕ್ಷಿಣೆ ರಹಿತ ವಿವಾಹಗಳಿಗೆ ಆದ್ಯತೆ ನೀಡುವಂತಹ ಐತಿಹಾಸಿಕ ನಿರ್ಧಾರ ಕೈಗೊಂಡು ಸಾಮಾಜಿಕ ಬದ್ಧತೆ ತೋರಿದ್ದಾರೆ.

ವರದಕ್ಷಿಣೆ ಮುಕ್ತ ಸರಳ ವಿವಾಹ ಜಾಗೃತಿ ಅಭಿಯಾನ ಶುರುಮಾಡಿರುವ ಬಂಜಾರಾ ಯುವಪಡೆ ಹಾಗೂ ಸಮುದಾಯದ ಹಿರಿಯರು, ಕಿರಿಯರು ವರದಕ್ಷಿಣೆ ರಹಿತ ವಿವಾಹ, ಆಚರಣೆಗಳಿಗೇ ಆದ್ಯತೆ, ಆಡಂಬರಗಳಿಗೆ ಗುಡ್‌ಬೈ ಹೇಳುವಂತಹ ವಿನೂತನ ಪರಿಕಲ್ಪನೆ ಗಳೊಂದಿಗೆ ಹೊಸ ಹೆಜ್ಜೆ ಇಡುತ್ತಿದ್ದಾರೆ.

ಆಳಂದ ತಾಲೂಕಿನ ಸೀಡ್ಸ್ ಫಾರ್ಮ್ ತಾಂಡಾ, ನೆಹರು ನಗರ ತಾಂಡಾ, ಹೆಬಳ್ಳಿ ತಾಂಡಾ, ಪಿ.ಎನ್.ತಾಂಡಾ, ಮೋರಿಸಾಬ್ ತಾಂಡಾಗಳು ಸೇರಿದಂತೆ 52ಕ್ಕೂ ಅಧಿಕ ತಾಂಡಾಗಳಲ್ಲಿ ವರದಕ್ಷಿಣೆ ವಿರುದ್ಧ ಜಾಗೃತಿ ಅಭಿಯಾನ ದೊಡ್ಡ ಪ್ರಮಣದಲ್ಲಿ ಕೈಗೆತ್ತಿಕೊಂಡಿರುವ ಬಂಜಾರಾ ಕ್ರಾಂತಿದಳ ಇದಕ್ಕೊಂದು ತಾರ್ಕಿಕ ಅಂತ್ಯ ಹಾಡಲು ಸಂಕಲ್ಪಿಸಿದೆ. ಲಂಬಾಣಿ ಸಮುದಾಯದಲ್ಲಿ ವರದಕ್ಷಿಣೆ ರಹಿತ ವಿವಾಹಗಳಾಗಬೇಕು, ಹಣ, ದುಬಾರಿ ಉಡುಗೊರೆ, ಆಮಿಷ ಇನ್ನ್ಯಾವುದೇ ರೂಪದಲ್ಲಿ ವರದಕ್ಷಿಣೆ ಭೂತ ಕಾಡಬಾರದು. ಶಿಕ್ಷಣ, ಸರ್ಕಾರಿ ಸೌಲಭ್ಯಗಳ ಹಕ್ಕುಗಳ ಅರಿವು ಉಂಟಾಗಿ ಎಲ್ಲರೂ ಶಿಕ್ಷಿತರಾಬೇಕು, ಸಂಘಟಿತರಾಗುವ ಮೂಲಕ ಸಮಾಜದ ಒಗ್ಗಟ್ಟಿಗೆ, ಆರ್ಥಿಕ ಬಲಗೊಳ್ಳುವಿಕೆಗೆ ಕಾರಣರಾಗಬೇಕೆಂಬ ಸಂಕಲ್ಪ ಇಟ್ಟುಕೊಂಡು ಜಾಗೃತಿ ಅಭಿಯಾನ ಸದ್ದಿಲ್ಲದೆ ತಾಂಡಾಗಳಲ್ಲಿ ಶುರುವಾಗಿದೆ.



**1 ಲಕ್ಷ ರೂ. ದಂಡ :** ಆಳಂದ ತಾಲೂಕಿನ 52 ತಾಂಡಾಗಳಲ್ಲಿ ವರದಕ್ಷಿಣೆ ರಹಿತ, ಆಚರಣೆ ಸಹಿತ ಮದುವೆಗಳಿಗೆ ಆದ್ಯತೆ ನೀಡುವ ಸತ್ಸಂಕಲ್ಪದೊಂದಿಗೆ ಬಂಜಾರಾ ಕ್ರಾಂತಿ ದಳ ಕೆಲವು ಸೂಚನೆಗಳನ್ನು ಸಮುದಾಯದಲ್ಲಿ ರವಾನಿಸಿದೆ. ತಾಂಡಾಗಳಲ್ಲಿನ ಮದುವೆಗಳಲ್ಲಿ ವರದಕ್ಷಿಣೆ ರೂಪದಲ್ಲಿ ಹಣ, ವಾಹನ, ದುಬಾರಿ ಉಡುಗೊರೆ ಕೊಡುವುದು ಮತ್ತು ಪಡೆಯುವುದು ಎರಡೂ ನಿಷೇಧಿಸಲ್ಪಟ್ಟಿದೆ. ಈ ನಿಯಮವನ್ನು ಉಲ್ಲಂಘಿಸಿದರೆ 1 ಲಕ್ಷ ರೂ ದಂಡ. ವರದಕ್ಷಿಣೆ ಪಡೆಯುವವರ ಮಾಹಿತಿ ನೀಡುವವರಿಗೆ 15 ಸಾವಿರ ರೂ ಬಹುಮಾನ. ಮದುವೆಗಳಲ್ಲಿ ಡಿಜೆ, ಮೈಕ್ ಬಳಕೆ, ಮದ್ಯಪಾನ ನಿಷೇಧ. ಸಮುದಾಯದ ಸಾಂಪ್ರದಾಯಿಕ ಆಚರಣೆಗಳಿಗೆ ಪ್ರಥಮ ಆದ್ಯತೆ ಎಂಬ ಸೂಚನೆಗಳನ್ನು ಎಲ್ಲಾ ತಾಂಡಾಗಳಿಗೆ ನೀಡಲಗಿದೆ.

**ಆಚರಣೆಗೆ ಆದ್ಯತೆ:** ಆಳಂದ ತಾಲೂಕಿನ ಬಂಜಾರಾ ಸಮಾಜದ 52 ತಾಂಡಾಗಳಲ್ಲಿ ವರದಕ್ಷಿಣೆ ಕಡಿವಾಣ ಹಾಕಲು ಬಂಜಾರಾ ಕ್ರಾಂತಿ ದಳ ಮತ್ತು ಸೇವಾಲಾಲ್ ಜಯಂತಿ ಸಮಿತಿ ಜಂಟಿಯಾಗಿ ತಾಂಡಾಗಳಲಿ ಸರಣಿ ಜಾಗೃತಿ ಅಭಿಯಾನ ಹಮ್ಮಿಕೊಂಡಿದೆ. ಹಿಂದೆಲ್ಲಾ ಲಂಬಾಣಿ ಸಮಾಜದಲ್ಲಿ ವರದಕ್ಷಿಣೆಸ ಡಿಜೆ, ಮೈಕ್, ಮದ್ಯ ಇವೆಲ್ಲ ಇರಲೇ ಇಲ್ಲ. ಅದೇನಿದ್ದರೂ ವಧು- ವರ ಪಕ್ಷದವರಲ್ಲಿ 2 ಅಥವಾ 4 ಎತ್ತುಗಳ ವಿನಿಮಯದೊಂದಿಗೆ ಮದುವೆಯಾಗುತ್ತಿತ್ತು. ಇವತ್ತು ಮದುವೆ ಎಂದರೆ ದುಬಾರಿ 20 ಲಕ್ಷ ರು. ವೆಚ್ಚವಾಗುತ್ತಿದ್ದು ಬಡ, ಮಧ್ಯಮ ಬಂಜಾರಾ ಕುಟುಂಬಗಳ ಪಾಲಿಗೆ ಹಲವು ಸವಾಲುಗಳನ್ನು ತಂದೊಡ್ಡುತ್ತಿದೆ. ಸಮಾಜದ ಬಡವರು ಎದುರಿಸುತ್ತಿರುವ ಇಂತಹ ಸಂಕಷ್ಟಗಳಿಗೆ ಪರಿಹಾರ ರೂಪದಲ್ಲಿ ಜಾಗೃತಿ ಅಭಿಯಾನ ಬಂಜಾರಾ ಕ್ರಾಂತಿದಳ ಹಮ್ಮಿಕೊಂಡಿದೆ.

ಬಂಜಾರಾ ಕ್ರಾಂತಿದಳ ರಾಜ್ಯ ಉಪಾಧ್ಯಕ್ಷ ಗೋವಿಂದರಾಜ್, ಜಿಲ್ಲಾಧ್ಯಕ್ಷ ಅಮರೇಶ ರಾಠೋಡ್ , ಧಾರ್ಮಿಕ ಮುಖಂಡರು ಹಾಗೂ ತಾಂಡಾದ ಕಾರಭಾರಿಗಳು, ಲಂಬಾಣಿ ತರುಣ ಸಂಘದ ಅಧ್ಯಕ್ಷ ಶಿವಾಜಿ ರಾಠೋಡ, ಸಮಾಜ ಮುಖಂಡ ಠಾಕೂರಸಿಂಗ್ ರಾಠೋಡ, ಲಂಬಾಣಿ ವಸತಿ ನಿಲಯ ಅಧ್ಯಕ್ಷ ಗಂಗಾರಾಮ ಪವಾರ, ಶಿವಾಜಿ ರಾಠೋಡ ಹೋದಲೂರ್ ಮುಂದಾಳತ್ವದಲ್ಲಿ ಸೀಡ್ಸ್ ಫಾರಂ ತಾಂಡಾ, ನೆಹರು ನಗರ ತಾಂಡಾ, ಹೆಬಳ್ಳಿ ತಾಂಡಾ, ಪಿ.ಎನ್. ತಾಂಡಾ, ಮೋರಿಸಾಬ್ ತಾಂಡಾಗಳಲ್ಲಿ ನಿರಂತರ ಜಾಗೃತಿ ಅಭಿಯಾನ ನಡೆಸುತ್ತಿದ್ದಾರೆ.

ವರದಕ್ಷಿಣೆ ರಹಿತ ಸರಳ ವಿವಾಹ, ಶಿಕ್ಷಣ ಸಂಘಟನೆ ಆರ್ಥಿಕ ಸಮಾಜಿಕ ರಾಜಕೀಯವಾಗಿ ಸಂಘಟಿತರಾಗಿ ಸಮಾಜದ ಮುಖ್ಯವಾಹಿನಿಗೆ ಬರಲು ಲಂಬಾಣಿ ಸಮಾಜ ಬಾಂಧವರು ಪರಸ್ಪರ ವಿಶ್ವಾಸ ಮತ್ತು ಸೌಹಾರ್ದ ಬದುಕಿಗೆ ಒಗ್ಗೂಡಬೇಕು. ಸಮುದಾಯದ ತಾಂಡಾ ಗಳಲ್ಲಿ ಇನ್ನು ಮುಂದೆ ವರದಕ್ಷಿಣೆ ಪಡೆಯುವುದು ಅಥವಾ ನೀಡುವುದನ್ನು ಸಂಪೂರ್ಣವಾಗಿ ನಿಷೇಧಿಸಿ ಆಳಂದದಲ್ಲಿರುವ ಬಂಜಾರಾ ಭವನದಲ್ಲಿ ಅಖಿಲ ಭಾರತ ಬಂಜಾರಾ ಸೇವಾ ಸಂಘ ಹಾಗೂ ಬಂಜಾರಾ ಕ್ರಾಂತಿ ದಳ, ಸೇವಾಲಾಲ ಜಯಂತಿ ಸಮೀತಿ ಸಭೆಯಲ್ಲಿ ಈ ಕ್ರಾಂತಿಕಾರಿ ತೀರ್ಮಾನಕ್ಕೆ ಒಮ್ಮತ ವ್ಯಕ್ತವಾಗಿದೆ ಎಂದು ಬಂಜಾರಾ ಕ್ರಾಂತಿದಳ ರಾಜ್ಯಾಧ್ಯಕ್ಷ ರಾಜು ಚವ್ಹಾಣ್ ಹೇಳುತ್ತಾರೆ.

ಇತ್ತೀಚಿನ ದಿನಗಳಲ್ಲಿ ವರದಕ್ಷಿಣೆ ಪದ್ಧತಿಯಿಂದಾಗಿ ಲಂಬಾಣಿ ತಾಂಡಾದ ಬಡ ಕುಟುಂಬಗಳು ಅನುಭವಿಸುತ್ತಿರುವ ಸಂಕಷ್ಟ ಹತ್ತಿರದಿಂದ ನೋಡುತ್ತಿದ್ದೇವೆ. ಜೊತೆಗೇ ಸಂಪ್ರದಾಯ, ಆಚರಣೆಗಳಲ್ಲಿ ಮುಖ್ಯವಾದವು ಮಾಯವಾಗಿ ನೈತಿಕ ಮೌಲ್ಯಗಳ ಕುಸಿತವಾಗುತ್ತಿರೋದನ್ನ ತಡೆಗಟ್ಟಲು ಈ ಜಾಗೃತಿ ಅಭಿಯಾನವನ್ನು ತೀವ್ರಗೊಳಿಸಲಾಗಿದೆ ಎಂದು ಬಂಜಾರಾ ಕ್ರಾಂತಿ ದಳದ ಆಳಂದ ತಾಲೂಕು ಘಟಕ ಅಧ್ಯಕ್ಷ ವೆಂಕಟೇಶ ರಾಠೋಡ್ ಹೇಳಿದ್ದಾರೆ.

# ಭಯೋತ್ಪಾದನಾ ವಿರೋಧಿ ಸಮಾವೇಶ ಆಯೋಜಿಸಲು ವಿಶ್ವಸಂಸ್ಥೆಗೆ ಭಾರತ ಒತ್ತಾಯ

**ನ್ಯೂಯಾರ್ಕ್, ಜು.2:** ಬಹುಕಾಲದಿಂದ ಬಾಕಿ ಇರುವ ಅಂತರರಾಷ್ಟ್ರೀಯ ಭಯೋತ್ಪಾದನೆಯ ಕುರಿತಾದ ಸಮಗ್ರ ಸಮಾವೇಶವನ್ನು ಅಳವಡಿಸಿಕೊಳ್ಳುವಂತೆ ಭಾರತ ಬುಧವಾರ ವಿಶ್ವಸಂಸ್ಥೆಯನ್ನು ಒತ್ತಾಯಿಸಿದೆ, ಸಾರ್ವತ್ರಿಕವಾಗಿ ಅಂಗೀಕರಿಸಲ್ಪಟ್ಟ ಕಾನೂನು ಚೌಕಟ್ಟಿನ ಅನುಪಸ್ಥಿತಿಯು ಭಯೋತ್ಪಾದನೆಯ ವಿರುದ್ಧದ ಜಾಗತಿಕ ಪ್ರಯತ್ನಗಳನ್ನು ದುರ್ಬಲಗೊಳಿಸುತ್ತಿದೆ ಮತ್ತು ಅಪರಾಧಿಗಳು ಮತ್ತು ಅವರ ಪ್ರಾಯೋಜಕರು ಹೊಣೆಗಾರಿಕೆಯಿಂದ ತಪ್ಪಿಸಿಕೊಳ್ಳಲು ಅವಕಾಶ ನೀಡುತ್ತದೆ ಎಂದು ಎಚ್ಚರಿಸಿದೆ. ವಿಶ್ವಸಂಸ್ಥೆಯ ಜಾಗತಿಕ ಭಯೋತ್ಪಾದನಾ ನಿಗ್ರಹ ಕಾರ್ಯತಂತ್ರದ (GCTS) ಒಂಬತ್ತನೇ ವಿಮರ್ಶೆಯ ಅಂಗೀಕಾರದ ಸಂದರ್ಭದಲ್ಲಿ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯನ್ನುದ್ದೇಶಿಸಿ ಮಾತನಾಡಿದ ವಿಶ್ವಸಂಸ್ಥೆಗೆ ಭಾರತದ ಕಾಯಂ ಪ್ರತಿನಿಧಿ ಪರ್ವತನೇನಿ ಹರೀಶ್, 1996 ರಲ್ಲಿ ನವದೆಹಲಿ ಮೊದಲು ಪ್ರಸ್ತಾಪಿಸಿದ ಸಮಾವೇಶದ ಕುರಿತು ಮಾತುಕತೆಗಳನ್ನು ಮುಕ್ತಾಯಗೊಳಿಸಲು ಹೆಚ್ಚಿನ ರಾಜಕೀಯ ಸಂಕಲ್ಪಕ್ಕೆ ಕರೆ ನೀಡಿದರು. ಭಯೋತ್ಪಾದನಾ ನಿಗ್ರಹ ಕಾರ್ಯತಂತ್ರದ ಬಗ್ಗೆ 140 ಮತಗಳಿಂದ 3 ಮತಗಳಿಂದ ಸಾಮಾನ್ಯ ಸಭೆಯ ಪರಿಶೀಲನೆಯು, ಮೂರು ದಶಕಗಳಿಗೂ ಹೆಚ್ಚು ಕಾಲ ಸ್ಥಗಿತಗೊಂಡಿರುವ ಸಮಾವೇಶವನ್ನು ಅಂತಿಮಗೊಳಿಸಲು "ಎಲ್ಲಾ ಪ್ರಯತ್ನಗಳನ್ನು" ಮಾಡುವಂತೆ ಸದಸ್ಯ ರಾಷ್ಟ್ರಗಳನ್ನು ಮತ್ತೊಮ್ಮೆ ಒತ್ತಾಯಿಸಿತು. ಗಡಿಯಾಚೆಗಿನ ಭಯೋತ್ಪಾದನೆಯೊಂದಿಗೆ ಭಾರತದ ದೀರ್ಘ ಅನುಭವವನ್ನು ಉಲ್ಲೇಖಿಸಿ ಹರೀಶ್, ಭಯೋತ್ಪಾದಕ ಗುಂಪುಗಳ ನಡುವೆ ಸಮರ್ಥನೆ ಅಥವಾ ವ್ಯತ್ಯಾಸವನ್ನು ತೋರಿಸುವ ಯಾವುದೇ




ಪ್ರಯತ್ನವನ್ನು ತಿರಸ್ಕರಿಸಿದರು. "ಒಬ್ಬ ಭಯೋತ್ಪಾದಕ ಭಯೋತ್ಪಾದಕನೇ" ಭಯೋತ್ಪಾದನೆಯನ್ನು ಸಮರ್ಥಿಸಲು ಯಾವುದೇ ಕುಂದುಕೊರತೆಯನ್ನು ಕಂಡುಹಿಡಿಯದೆ, ಕೊಲೆಗಾರ ಸಿದ್ಧಾಂತವನ್ನು ಬೇರುಸಹಿತ ಕಿತ್ತೊಗೆಯಲು ನಾವು ಕೈಜೋಡಿಸಬೇಕು" ಎಂದು ಅವರು ಹೇಳಿದರು. "ಯಾವುದೇ ಕುಂದುಕೊರತೆ, ರಾಜಕೀಯ ಕಾರಣ ಅಥವಾ ಕಾರ್ಯತಂತ್ರದ ಲೆಕ್ಕಾಚಾರವನ್ನು ಲೆಕ್ಕಿಸದೆ, ಭಯೋತ್ಪಾದನೆಯನ್ನು ಅದರ ಎಲ್ಲಾ ರೂಪಗಳು ಮತ್ತು ಅಭಿವ್ಯಕ್ತಿಗಳಲ್ಲಿ ನಿಸ್ಸಂದಿಗ್ಧವಾಗಿ ಖಂಡಿಸಬೇಕು." "ಭಯೋತ್ಪಾದನೆಗೆ ಯಾವುದೇ ಸಮರ್ಥನೆ ಇರಲು ಸಾಧ್ಯವಿಲ್ಲ" ಎಂದು ಹರೀಶ್ ಹೇಳಿದರು. ಸದಸ್ಯ ರಾಷ್ಟ್ರಗಳು ಎನ್‌ಕ್ರಿಪ್ಟ್ ಮಾಡಿದ ಸಂವಹನಗಳು, ಡ್ರೋನ್‌ಗಳು, ಕೃತಕ ಬುದ್ಧಿಮತ್ತೆ, ಡೀಪ್ ಫೇಕ್‌ಗಳು, ವರ್ಚುವಲ್ ಸ್ವತ್ತುಗಳು ಮತ್ತು ಡಾರ್ಕ್ ವೆಬ್‌ನಂತಹ ತಂತ್ರಜ್ಞಾನಗಳ ಬಳಕೆಯನ್ನು ಭಯೋತ್ಪಾದಕ ಸಂಘಟನೆಗಳು ಪರಿಹರಿಸುವಲ್ಲಿ ಒಮ್ಮತವನ್ನು ತಲುಪಲು ವಿಫಲವಾಗಿವೆ ಎಂದು ಹರೀಶ್

**ಸಾರ್ವತ್ರಿಕವಾಗಿ ಒಪ್ಪಲಾದ ಕಾನೂನು ಚೌಕಟ್ಟಿನ ಅನುಪಸ್ಥಿತಿಯು ಭಯೋತ್ಪಾದನೆಯ ವಿರುದ್ಧ ಸಾಮೂಹಿಕ ಕ್ರಮವನ್ನು ಕುಂಠಿತಗೊಳಿಸುತ್ತಿದೆ ಎಂದು ಹರೀಶ್ ಹೇಳಿದರು, CCIT ಅನ್ನು ಕಾನೂನು ಕ್ರಮ ಮತ್ತು ಹಸ್ತಾಂತರ ಕಾರ್ಯವಿಧಾನಗಳನ್ನು ಬಲಪಡಿಸಲು ಮತ್ತು ಭಯೋತ್ಪಾದಕರು ಮತ್ತು ಅವರ ಪ್ರಾಯೋಜಕರಿಗೆ ಸುರಕ್ಷಿತ ತಾಣಗಳು, ಹಣಕಾಸು ಮತ್ತು ಶಸ್ತ್ರಾಸ್ತ್ರಗಳಿಗೆ ಪ್ರವೇಶವನ್ನು ನಿರಾಕರಿಸಲು ನಿರ್ಣಾಯಕ ಸಾಧನವೆಂದು ಬಣ್ಣಿಸಿದರು. "CCIT ಅನ್ನು ಮುಕ್ತಾಯಗೊಳಿಸಲು ರಾಜಕೀಯ ಇಚ್ಛಾಶಕ್ತಿಯನ್ನು ಪ್ರದರ್ಶಿಸುವ ಸಮಯ ಬಂದಿದೆ.**

ನಿರಾಶೆ ವ್ಯಕ್ತಪಡಿಸಿದರು. ಭಾರತ ಆಯೋಜಿಸಿದ್ದ ಭಯೋತ್ಪಾದನಾ ನಿಗ್ರಹ ಸಮ್ಮೇಳನದಲ್ಲಿ ಅಂಗೀಕರಿಸಲ್ಪಟ್ಟ ಮತ್ತು ಉದಯೋನ್ಮುಖ ತಂತ್ರಜ್ಞಾನಗಳ ಭಯೋತ್ಪಾದಕ ಶೋಷಣೆಯನ್ನು ತಡೆಗಟ್ಟುವತ್ತ ಗಮನಹರಿಸಿದ ದೆಹಲಿ ಘೋಷಣೆಯ ಪರಿಶೀಲನಾ ದಾಖಲೆಯಿಂದ ಕೈಬಿಡಲ್ಪಟ್ಟಿರುವುದನ್ನು ಅವರು ಟೀಕಿಸಿದರು. ಭಾರತದ ಪ್ರಧಾನಿ ನರೇಂದ್ರ ಮೋದಿ ಅವರ ಹೇಳಿಕೆಯನ್ನು ಉಲ್ಲೇಖಿಸಿದ ಅವರು, "ಪ್ರಧಾನಿ ನರೇಂದ್ರ ಮೋದಿ ಹೇಳಿದಂತೆ, ಭಯೋತ್ಪಾದನೆಯು ಎಲ್ಲೆಡೆ ಶಾಂತಿಗೆ ಬೆದರಿಕೆ ಹಾಕುತ್ತದೆ" ಎಂದು ಹೇಳಿದರು. "ಭಯೋತ್ಪಾದನೆಯ ಬಗ್ಗೆ ಅಸ್ಪಷ್ಟತೆಯನ್ನು ಜಗತ್ತು ಸಹಿಸುವುದಿಲ್ಲ. ಭಯೋತ್ಪಾದನೆಯ ಬಲಿಪಶುಗಳು ನ್ಯಾಯಕ್ಕೆ ಅರ್ಹರು. ಭವಿಷ್ಯದ ಪೀಳಿಗೆಗಳು ಭದ್ರತೆಗೆ ಅರ್ಹರು. ಮತ್ತು ಈ ಸಾಮಾನ್ಯ ಸಭೆಯು ನಾಯಕತ್ವವನ್ನು ಒದಗಿಸಬೇಕು."

# ಇರಾನ್ ತನ್ನ ಪರಮಾಣು ಸಾಮರ್ಥ್ಯ ಪುನರ್ನಿರ್ಮಿಸಲು ಪ್ರಯತ್ನಿಸಿದರೆ ಮಿಲಿಟರಿ ಕ್ರಮ: ಜೆ.ಡಿ.ವ್ಯಾನ್ಸ್ ಎಚ್ಚರಿಕೆ

**ವಾಷಿಂಗ್ಟನ್, ಜು.2:** ದೋಹಾದಲ್ಲಿ ಇರಾನ್ ಜೊತೆಗಿನ ಮಾತುಕತೆಗಳು ಸಕಾರಾತ್ಮಕವಾಗಿ ಪ್ರಗತಿಯಲ್ಲಿವೆ ಎಂದು ಯುಎಸ್ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಹೇಳಿದರು ಆದರೆ ಟೆಹ್ರಾನ್ ವಾಷಿಂಗ್ಟನ್ನ ನಿರೀಕ್ಷೆಗಳನ್ನು ಪೂರೈಸಲು ವಿಫಲವಾದರೆ ಮಿಲಿಟರಿ ಕ್ರಮವು ಒಂದು ಆಯ್ಕೆಯಾಗಿ ಉಳಿಯುತ್ತದೆ ಎಂದು ಎಚ್ಚರಿಕೆ ನೀಡಿದರು.

ವರ್ಜೀನಿಯಾದ ನೇವಲ್ ಏರ್ ಸ್ಟೇಷನ್ ಓಷಿಯಾನಾದಲ್ಲಿ ನೌಕ ಸಿಂಬ್ಬದಿಳನ್ನು ಉದ್ದೇಶಿಸಿ ಮಾತನಾಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ವ್ಯಾನ್ಸ್, ಅಧ್ಯಕ್ಷ ಡೊನಾಲ್ಡ್ ಟ್ರಂಪ್ ರಾಜತಾಂತ್ರಿಕತೆಯನ್ನು ಅನುಸರಿಸಲು ಬದ್ಧರಾಗಿದ್ದಾರೆ ಆದರೆ ಇರಾನ್ ವಾಷಿಂಗ್ಟನ್‌ಗೆ ಬೆದರಿಕೆ ಎಂದು ಪರಿಗಣಿಸಲಾದ ಚಟುವಟಿಕೆಗಳನ್ನು ಪುನರಾರಂಭಿಸಿದರೆ ಕ್ರಮ ಕೈಗೊಳ್ಳಲು ಹಿಂಜರಿಯುವುದಿಲ್ಲ ಎಂದು ಹೇಳಿದರು.

"ನಾನು ಯಾವುದಕ್ಕೂ ಬದ್ಧನಾಗಲು ಸಾಧ್ಯವಿಲ್ಲ, ಏಕೆಂದರೆ ಅದು ಇರಾನಿಯನ್ನರು



ಅಂತಿಮವಾಗಿ ಏನು ಮಾಡಲಿದ್ದಾರೆ ಎಂಬುದರ ಮೇಲೆ ಅವಲಂಬಿತವಾಗಿರುತ್ತದೆ" ಎಂದು ವ್ಯಾನ್ಸ್ ಹೇಳಿದರು. "ನಾನು ಬದ್ಧನಾಗಿರುವುದು ಅಧ್ಯಕ್ಷರು ನಮ್ಮ ಮಿಲಿಟರಿಯನ್ನು ಹಿಂದಕ್ಕೆ ಕಳುಹಿಸುವುದಿಲ್ಲ, ಅದಕ್ಕೆ ಸ್ಪಷ್ಟವಾಗಿ ವ್ಯಾಖ್ಯಾನಿಸಲಾದ ಉದ್ದೇಶವಿಲ್ಲದಿದ್ದರೆ." ಭವಿಷ್ಯದ ಯಾವುದೇ ಉಲ್ಬಣವು ಇರಾನ್ನ ಕ್ರಮಗಳ ಮೇಲೆ ಅವಲಂಬಿತವಾಗಿರುತ್ತದೆ ಎಂದು ವ್ಯಾನ್ಸ್ ಒತ್ತಿ ಹೇಳಿದರು. ಟ್ರಂಪ್ ಆಡಳಿತವು ಸಮಾಲೋಚಕರಿಗೆ ಉತ್ತಮ ನಂಬಿಕೆಯಿಂದ ಇತ್ಯರ್ಥವನ್ನು ಅನುಸರಿಸಲು ಸೂಚನೆ ನೀಡಿದೆ ಎಂದು ಅವರು ಹೇಳಿದರು. "ಈಗ, ಅಧ್ಯಕ್ಷರು ಹೇಳಿರುವುದು, 'ಹೋಗಿ ಒಪ್ಪಂದ ಮಾಡಿಕೊಳ್ಳಿ, ಹೋಗಿ ಉತ್ತಮ ನಂಬಿಕೆಯಿಂದ ಮಾತುಕತೆ ನಡೆಸಿ' ಎಂದು ಮತ್ತು ಅದನ್ನೇ ಅವರು ನಮಗೆ ಮಾಡಲು ಅಧಿಕಾರ ನೀಡಿದ್ದಾರೆ" ಎಂದು ವ್ಯಾನ್ಸ್ ಹೇಳಿದರು. ಅವರ ಹೇಳಿಕೆಗಳು ಇರಾನ್ನ ಪರಮಾಣು ಕಾರ್ಯಕ್ರಮದ ಕುರಿತು ಇನ್ನೂ ಗಣನೀಯ ಚರ್ಚೆಗಳು ಪ್ರಾರಂಭವಾಗಿಲ್ಲ ಎಂದು ಸೂಚಿಸುತ್ತವೆ. "ಸ್ಪಷ್ಟವಾಗಿ, ನಾವು ಪರಮಾಣು ಸಮಸ್ಯೆಯ ಬಗ್ಗೆ ಚಿಂತಿತರಾಗಿದ್ದೇವೆ, ನಾವು ಅದರ ಬಗ್ಗೆ ಮಾತನಾಡಲು ಪ್ರಾರಂಭಿಸಲಿದ್ದೇವೆ" ಎಂದು ಅವರು ಹೇಳಿದರು. "ಆದ್ದರಿಂದ ಇದೀಗ ಮಾತುಕತೆಗಳು ಚೆನ್ನಾಗಿ ನಡೆಯುತ್ತಿವೆ, ಇದು ಇನ್ನೂ ಬಹಳ ಮುಂಚೆಯೇ ಇದೆ, ಆದರೆ ಮಾತುಕತೆಗಳು ಚೆನ್ನಾಗಿ ನಡೆಯುತ್ತಿವೆ." ಇರಾನ್ ತನ್ನ ಪರಮಾಣು ಸಾಮರ್ಥ್ಯಗಳನ್ನು ಪುನರ್ನಿರ್ಮಿಸಲು ಪ್ರಯತ್ನಿಸಿದರೆ,

**ಇರಾನ್ ಜೊತೆಗಿನ ಅಮೆರಿಕದ ಪರೋಕ್ಷ ಮಾತುಕತೆಗಳ ಬಗ್ಗೆ ವಿಶ್ವಾಸ ವ್ಯಕ್ತಪಡಿಸಿದ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಎರಡೂ ದೇಶಗಳ ಅಧಿಕಾರಿಗಳು ಕತಾರ್‌ನಲ್ಲಿ ಮಾತುಕತೆ ಮುಂದುವರಿಸಿದ್ದರಿಂದ "ಇರಾನ್‌ನ ಪರಮಾಣು ನಿಶ್ಯಸ್ತ್ರೀಕರಣವು ಉತ್ತಮವಾಗಿ ಸಾಗುತ್ತಿದೆ" ಎಂದು ಹೇಳಿದರು.**

ಅಂತರರಾಷ್ಟ್ರೀಯ ತಪಾಸಣೆಗಳನ್ನು ನಿರಾಕರಿಸಿದರೆ ಅಥವಾ ವಾಣಿಜ್ಯ ಹಡಗುಗಳ ಮೇಲೆ ದಾಳಿಗಳನ್ನು ಪುನರಾರಂಭಿಸಿದರೆ ವಾಷಿಂಗ್ಟನ್ ಮತ್ತಷ್ಟು ಮಿಲಿಟರಿ ಕ್ರಮವನ್ನು ಪರಿಗಣಿಸುತ್ತದೆ ಎಂದು ವ್ಯಾನ್ಸ್ ಪುನರುಚ್ಚರಿಸಿದರು. ಮಧ್ಯವರ್ತಿಗಳ ಪ್ರಕಾರ, ಇರಾನ್‌ನ ಮಾಜಿ ಸುಪ್ರೀಂ ನಾಯಕ ಅಲಿ ಖಮೇನಿ ಅವರ ಅಂತ್ಯಕ್ರಿಯೆಯ ಸಮಾರಂಭಗಳ ನಂತರ ಮುಂದಿನ ಸುತ್ತಿನ ಮಾತುಕತೆಗಳನ್ನು ಸಾಧ್ಯವಾದಷ್ಟು ಬೇಗ ನಿಗದಿಪಡಿಸಲಾಗುವುದು.

ಶ್ರೀ ವಿವೇಕಾನಂದ ಕಲಾಕೇಂದ್ರ (ರಿ.)
ರಾಜ್ಯ, ಕೆಂಪೇಗೌಡ ಹಾಗೂ ಆರ್ಯಭಟ ಪ್ರಶಸ್ತಿ ಪುರಸ್ಕೃತ ಸಂಸ್ಥೆ.
ಭಾರತ ಸರ್ಕಾರ ಹಾಗೂ ಕರ್ನಾಟಕ ಸರ್ಕಾರಗಳಿಂದ ಅನುಮೋದಿಸಲ್ಪಟ್ಟ ಸಂಸ್ಥೆ.
"ವಿವೇಕಾನಂದ ಸಂಸ್ಮರಣೆ"
"ವಿಶ್ವವಂದ್ಯ ವಿವೇಕಾನಂದ"
ವಿಶೇಷ ರಂಗರೂಪ ಪ್ರದರ್ಶನ
ದಿನಾಂಕ : 04-07-2026, ಶನಿವಾರ, ಬೆಳಿಗ್ಗೆ 10:30 ಗಂಟೆಗೆ
ಸ್ಥಳ : ಉದಯಭಾನು ಕಲಾ ಸಂಘ, ಬೆಂಗಳೂರು.
ನಮ್ಮೊಂದಿಗೆ
ಪರಮಪೂಜ್ಯ ಸ್ವಾಮಿ ವೀರೇಶಾನಂದಜೀ ಮಹಾರಾಜ್
ರಾಮಕೃಷ್ಣಮಠ, ಬೆಂಗಳೂರು.
ಶ್ರೀ ಚಂದ್ರಶೇಖರ್
ಸಹಾಯಕ ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ,
ಕರ್ನಾಟಕ ಸರ್ಕಾರ, ಬೆಂಗಳೂರು.
ಶ್ರೀಮತಿ ರೇಖಾ
ಕ್ಷೇತ್ರ ಶಿಕ್ಷಣಾಧಿಕಾರಿಗಳು, ಬೆಂಗಳೂರು ದಕ್ಷಿಣ-01, ಸಾ.ಶಿ.ಇ.
ಡಾ. ಪ್ರಶಾಂತ್
ಪ್ರಾಂಶುಪಾಲರು, ಪದವಿ ಕಾಲೇಜು, ಆದರ್ಶ ಜೈನ್ ಸಂಸ್ಥೆ
ಡಾ. ಶ್ವೇತ
ಸಂಸ್ಥಾಪಕರು, ಸಮ್ಯಕ್ ಐ ಹಾಸ್ಪಿಟಲ್, ಬೆಂಗಳೂರು.
ಡಾ. ಭವ್ಯ ಎಲ್
ಮುಖ್ಯೋಪಾಧ್ಯಾಯರು ಸರ್ಕಾರಿ ಪ್ರೌಢಶಾಲೆ, ಸುಂಕೇನಹಳ್ಳಿ
ಶ್ರೀ ನಾರಾಯಣ್
ಮುಖ್ಯೋಪಾಧ್ಯಯರು, ಹಿರಿಯ ಪ್ರಾಥಮಿಕ ಶಾಲೆ, ಸುಂಕೇನಹಳ್ಳಿ
ಶ್ರೀ ವಿವೇಕಾನಂದ ಕಲಾಕೇಂದ್ರದ ಪದಾಧಿಕಾರಿಗಳು ಹಾಗೂ ಕಲಾವಿದರು




ನವದೆಹಲಿಯಲ್ಲಿ ಗುರುವಾರ ನಡೆದ ಭಾರತ-ಜಪಾನ್ ಜಂಟಿ ಆರ್ಥಿಕ ವೇದಿಕೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಜಪಾನ್‌ನ ಪ್ರಧಾನಿ ಸನಾಯೆ ಟಕೈಚಿ ಅವರೊಂದಿಗೆ ಪಾಲ್ಗೊಂಡರು.

# ಹಾರ್ಮುಜ್ ಜಲಸಂಧಿ: ಟೆಹ್ರಾನ್ ಮಾರ್ಗ ಬಳಸಲು ತೈಲಹಡಗುಗಳಿಗೆ ಇರಾನ್‌ನ ಮಿಲಿಟರಿ ಕಮಾಂಡ್ ಸೂಚನೆ

**ಟೆಹ್ರಾನ್, ಜು.2:** ಹಾರ್ಮುಜ್ ಜಲಸಂಧಿಯನ್ನು ಸಾಗಿಸುವ ಎಲ್ಲಾ ತೈಲ ಟ್ಯಾಂಕರ್‌ಗಳು ಟೆಹ್ರಾನ್ ಅನುಮೋದಿಸಿದ ಮಾರ್ಗಗಳನ್ನು ಬಳಸಬೇಕು ಅಥವಾ "ತಕ್ಷಣದ ಮತ್ತು ಬಲವಾದ ಪ್ರತಿಕ್ರಿಯೆ" ಎಂದು ಅದು ವಿವರಿಸಿರುವುದನ್ನು ಎದುರಿಸಬೇಕು ಎಂದು ಇರಾನ್‌ನ ಕೇಂದ್ರ ಮಿಲಿಟರಿ ಕಮಾಂಡ್, ಖತಮ್ ಅಲ್-ಅನ್ಬಿಯಾ ಕೇಂದ್ರ ಪ್ರಧಾನ ಕಚೇರಿ (KCHQ) ಎಚ್ಚರಿಸಿದೆ, ವಿಶ್ವದ ಅತ್ಯಂತ ಕಾರ್ಯತಂತ್ರದ ಪ್ರಮುಖ ಜಲಮಾರ್ಗಗಳಲ್ಲಿ ಒಂದರ ಕುರಿತು ಹೆಚ್ಚುತ್ತಿರುವ ಉದ್ವಿಗ್ನತೆಯ ನಡುವೆ. ಈ ಎಚ್ಚರಿಕೆಯನ್ನು ಇರಾನ್‌ನ ಖತಮ್ ಅಲ್-ಅನ್ಬಿಯಾ ಕೇಂದ್ರ ಪ್ರಧಾನ ಕಚೇರಿಯಿಂದ ಹೊರಡಿಸಲಾಗಿದೆ ಮತ್ತು ಗುರುವಾರ ರಾಜ್ಯ ದೂರದರ್ಶನವು ಪ್ರಸಾರ ಮಾಡಿತು, ಎರಡೂ ದೇಶಗಳ ನಡುವಿನ ಸಂಘರ್ಷವನ್ನು ಶಾಶ್ವತವಾಗಿ ಕೊನೆಗೊಳಿಸಲು ಮಾತುಕತೆಗಳನ್ನು ಮುಂದುವರಿಸುವ ಗುರಿಯನ್ನು ಹೊಂದಿರುವ ಅಮೆರಿಕ ಮತ್ತು ಇರಾನಿನ ಪ್ರತಿನಿಧಿಗಳು ಕತಾರ್‌ನಲ್ಲಿ ಪರೋಕ್ಷ ಮಾತುಕತೆ ನಡೆಸಿದ ಒಂದು ದಿನದ ನಂತರ. ಪರ್ಷಿಯನ್ ಕೊಲ್ಲಿ ಮತ್ತು ಜಾಗತಿಕ ಮಾರುಕಟ್ಟೆಗಳ ನಡುವಿನ ಮುಖ್ಯ ದ್ವಾರವಾಗಿ ಕಾರ್ಯನಿರ್ವಹಿಸುವ ಹಾರ್ಮುಜ್ ಜಲಸಂಧಿಯು ವಾಷಿಂಗ್ಟನ್ ಮತ್ತು ಟೆಹ್ರಾನ್ ನಡುವೆ ನಡೆಯುತ್ತಿರುವ ಮಾತುಕತೆಗಳಲ್ಲಿ ಅತ್ಯಂತ ವಿವಾದಾತ್ಮಕ ವಿಷಯಗಳಲ್ಲಿ ಒಂದಾಗಿದೆ. ಇತ್ತೀಚಿನ ಎಚ್ಚರಿಕೆಗೆ ಕಾರಣವೇನು ಎಂಬುದನ್ನು ಇರಾನ್ ನಿರ್ದಿಷ್ಟಪಡಿಸಿಲ್ಲ. ಆದಾಗ್ಯೂ, CENTCOM ಈ ಹಿಂದೆ ಬಹ್ರೇನ್‌ನಲ್ಲಿ ಗಲ್ಫ್ ಪಾಲುದಾರರೊಂದಿಗಿನ ಸಭೆಯ ನಂತರ ಒಂದು ಹೇಳಿಕೆಯನ್ನು ಬಿಡುಗಡೆ ಮಾಡಿತ್ತು, ಅಲ್ಲಿ ಅದು "ಹಾರ್ಮುಜ್ ಜಲಸಂಧಿಯ ಮೂಲಕ



ವಾಣಿಜ್ಯದ ಮುಕ್ತ ಹರಿವಿಗೆ ನಾಯಕರು ತಮ್ಮ ಹಂಚಿಕೆಯ ಬದ್ಧತೆಯನ್ನು ಒತ್ತಿಹೇಳಿದ್ದಾರೆ" ಎಂದು ಹೇಳಿದೆ. ಈ ಹೇಳಿಕೆಯು ಇರಾನ್ ಅನ್ನು ಕೆರಳಿಸಿತು ಎಂದು ವರದಿಯಾಗಿದೆ, ಇದು ಜಲಮಾರ್ಗದ ಮೇಲಿನ ತನ್ನ ಹಕ್ಕನ್ನು ಪುನರುಚ್ಚರಿಸಿತು, ಹಾರ್ಮುಜ್ ಜಲಸಂಧಿಯ ನಿರ್ವಹಣೆ ಮತ್ತು ಹಡಗು ಮಾರ್ಗಗಳಿಗೆ ಸಂಬಂಧಿಸಿದಂತೆ ಅದು ಏಕೈಕ ಅಧಿಕಾರ ಎಂದು ಹೇಳಿಕೊಂಡಿದೆ. "ಹಾರ್ಮುಜ್ ಜಲಸಂಧಿಯಲ್ಲಿ ಇಸ್ಲಾಮಿಕ್ ಗಣರಾಜ್ಯ ಇರಾನ್ ಸಂಚಾರ ಸೂಚನೆಗಳನ್ನು ಅನುಸರಿಸಲು ವಿಫಲವಾದರೆ, ಗೊತ್ತುಪಡಿಸಿದ ಮಾರ್ಗದಿಂದ ವಿಚಲನಗೊಂಡರೆ ಅಥವಾ ಉಲ್ಲಂಘಿಸುವ ಹಡಗುಗಳ ಭದ್ರತೆಗೆ ಅಪಾಯವನ್ನುಂಟುಮಾಡಿದರೆ ಸಶಸ್ತ್ರ ಪಡೆಗಳಿಂದ ತಕ್ಷಣದ ಮತ್ತು ಬಲವಾದ ಪ್ರತಿಕ್ರಿಯೆಯನ್ನು ಎದುರಿಸಬೇಕಾಗುತ್ತದೆ" ಎಂದು ಮಿಲಿಟರಿ ಹೇಳಿಕೆ ತಿಳಿಸಿದೆ. KCHQ ಜಲಸಂಧಿಯ ಮೇಲೆ ಅಮೆರಿಕದ ಮಿಲಿಟರಿ ವಿಮಾನಗಳ ನಿರಂತರ ಉಪಸ್ಥಿತಿಯನ್ನು ಟೀಕಿಸಿತು, ಅಂತಹ ಕಾರ್ಯಾಚರಣೆಗಳು ಈ ಪ್ರದೇಶದಲ್ಲಿ ಭದ್ರತೆಯನ್ನು ದುರ್ಬಲಗೊಳಿಸುತ್ತವೆ ಎಂದು ಹೇಳಿತು. ಜಲಸಂಧಿಯಲ್ಲಿನ ಭದ್ರತಾ ವ್ಯವಸ್ಥೆಗಳಲ್ಲಿ ವಾಷಿಂಗ್ಟನ್ ಹಸ್ತಕ್ಷೇಪ ಮಾಡುವ ಯಾವುದೇ ಪ್ರಯತ್ನವನ್ನು ಇರಾನಿನ ಸಾರ್ವಭೌಮತ್ವಕ್ಕೆ ಸವಾಲಾಗಿ ನೋಡಲಾಗುವುದು ಎಂದು ಅದು ಎಚ್ಚರಿಸಿದೆ. ಕಳೆದ ತಿಂಗಳು ವಾಷಿಂಗ್ಟನ್ ಮತ್ತು ಟೆಹ್ರಾನ್ ನಡುವೆ ತಲುಪಿದ ಮಧ್ಯಂತರ ಒಡಂಬಡಿಕೆಯಲ್ಲಿ, ವಾಣಿಜ್ಯ ಹಡಗುಗಳಿಗೆ 60 ದಿನಗಳ ಅವಧಿಗೆ ಯಾವುದೇ ಶುಲ್ಕವಿಲ್ಲದೆ ಜಲಮಾರ್ಗವನ್ನು ಸಾಗಿಸಲು ಅನುಮತಿ ನೀಡಲಾಯಿತು.

# ನ್ಯಾಟೋ ರಾಷ್ಟ್ರಗಳಿಂದ ಹೆಚ್ಚಿನ ನಿಷ್ಠೆಗಾಗಿ ಡೊನಾಲ್ಡ್ ಟ್ರಂಪ್ ಕರೆ ಜರ್ಮನಿ ತಿರಸ್ಕರ

**ಬರ್ಲಿನ್/ವಾಷಿಂಗ್ಟನ್, ಜುಲೈ 2 :** ನ್ಯಾಟೋ ಮಿತ್ರರಾಷ್ಟ್ರಗಳಿಂದ ಹೆಚ್ಚಿನ ನಿಷ್ಠೆಗಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಕರೆಯನ್ನು ಜರ್ಮನ್ ರಕ್ಷಣಾ ಸಚಿವ ಬೋರಿಸ್ ಪಿಸ್ಟೋರಿಯಸ್ ತಿರಸ್ಕರಿಸಿದ್ದಾರೆ, ಯಾವುದೇ ಸದಸ್ಯ ರಾಷ್ಟ್ರವು ಮೈತ್ರಿಕೂಟದ ಉಳಿದ ಭಾಗಗಳಿಗೆ ನೀತಿಯನ್ನು ನಿರ್ದೇಶಿಸಬಾರದು ಎಂದು ವಾದಿಸಿದ್ದಾರೆ. NATOದ ಒಮ್ಮತ ಆಧಾರಿತ ನಿರ್ಧಾರ ತೆಗೆದುಕೊಳ್ಳುವ ಪ್ರಕ್ರಿಯೆಯನ್ನು ಸಮರ್ಥಿಸಿಕೊಳ್ಳುವಾಗ ಪಿಸ್ಟೋರಿಯಸ್ ಬರ್ಲಿನ್ ಮತ್ತು ವಾಷಿಂಗ್ಟನ್ ನಡುವಿನ ಇತ್ತೀಚಿನ ಉದ್ವಿಗ್ನತೆಗಳನ್ನು ಕಡಿಮೆ ಮಾಡಲು ಪ್ರಯತ್ನಿಸಿದರು. ಕಳೆದ ವಾರ ಇರಾನ್ ವಿರುದ್ಧದ ಅಮೆರಿಕ ನೇತೃತ್ವದ ಯುದ್ಧವನ್ನು ಬೆಂಬಲಿಸಲು ನಿರಾಕರಿಸಿದ್ದಕ್ಕಾಗಿ ಹಲವಾರು NATO ಸದಸ್ಯರ ಬಗ್ಗೆ ಹತಾಶೆ ವ್ಯಕ್ತಪಡಿಸಿದ ಟ್ರಂಪ್ ಅವರ ಟೀಕೆಗೆ ಪ್ರತಿಕ್ರಿಯೆಯಾಗಿ ಅವರ ಹೇಳಿಕೆಗಳು ಬಂದವು. "ಅವರಲ್ಲಿ ಹೆಚ್ಚಿನವರ ಬಗ್ಗೆ ನನಗೆ ನಿರಾಶೆಯಾಗಿದೆ" ಎಂದು ಟ್ರಂಪ್ ಆ ಸಮಯದಲ್ಲಿ ಹೇಳಿದರು. "ನಾನು ನಿಷ್ಠೆಯನ್ನು ಬಯಸುತ್ತೇನೆ. ನಾವು ಅವರಿಗೆ ತುಂಬಾ ನಿಷ್ಠರಾಗಿದ್ದೇವೆ. ನಾವು ಯಾವಾಗಲೂ ಅವರಿಗಾಗಿ




ಹೋರಾಡುತ್ತಿದ್ದೇವೆ." ಅಮೆರಿಕ ಅಧ್ಯಕ್ಷರು ಜರ್ಮನಿಯನ್ನು ಪ್ರತ್ಯೇಕವಾಗಿ ಉಲ್ಲೇಖಿಸಿದರು, ದೇಶದಲ್ಲಿ ದೊಡ್ಡ ಅಮೆರಿಕನ್ ಮಿಲಿಟರಿ ಉಪಸ್ಥಿತಿಯನ್ನು ಗಮನಿಸಿದರು. ಈ ಹೇಳಿಕೆಗಳಿಗೆ ಪ್ರತಿಕ್ರಿಯಿಸಿದ ಪಿಸ್ಟೋರಿಯಸ್, NATO ಪ್ರಶ್ನಾತೀತ ಬೆಂಬಲಕ್ಕಿಂತ ಹೆಚ್ಚಾಗಿ ಸಮಾಲೋಚನೆ ಮತ್ತು ಒಮ್ಮತದ ಮೇಲೆ ಸ್ಥಾಪಿತವಾಗಿದೆ ಎಂದು ಒತ್ತಿ ಹೇಳಿದರು. "ನ್ಯಾಟೋದ ಪರಿಕಲ್ಪನೆಯು ಕುರುಡು ವಿಧೇಯತೆಯಲ್ಲ" ಎಂದು ಅವರು ಡೆರ್ ಸ್ಪೀಗೆಲ್‌ಗೆ ತಿಳಿಸಿದರು, ಮೈತ್ರಿಕೂಟವು "ವಿಚಾರಣೆಯಲ್ಲಿ ಮುಕ್ತ ಮನೋಭಾವ" ದಲ್ಲಿ ಕಾರ್ಯನಿರ್ವಹಿಸುತ್ತದೆ ಎಂದು ಹೇಳಿದರು. ಸದಸ್ಯ ರಾಷ್ಟ್ರಗಳು ಸಾಮೂಹಿಕವಾಗಿ ನಿರ್ಧಾರಗಳನ್ನು ತೆಗೆದುಕೊಳ್ಳುತ್ತವೆ ಮತ್ತು ಯಾವುದೇ ಒಂದು ದೇಶದಿಂದ ಹೇರಲು ಸಾಧ್ಯವಿಲ್ಲ ಎಂದು ಅವರು ಒತ್ತಿ ಹೇಳಿದರು. ಇರಾನ್ ಜೊತೆಗಿನ ಸಂಘರ್ಷದ ಸಮಯದಲ್ಲಿ ವಾಷಿಂಗ್ಟನ್ ಜರ್ಮನಿಯಿಂದ ಔಪಚಾರಿಕವಾಗಿ ಮಿಲಿಟರಿ ಸಹಾಯವನ್ನು ಕೋರಿದೆಯೇ ಎಂದು ಕೇಳಿದಾಗ, ಅಂತಹ ಯಾವುದೇ ಬೇಡಿಕೆಯ ಬಗ್ಗೆ ತನಗೆ ತಿಳಿದಿಲ್ಲ ಎಂದು ಪಿಸ್ಟೋರಿಯಸ್ ಹೇಳಿದರು. ಟ್ರಂಪ್ ಅವರ ಟೀಕೆಯನ್ನು ತಿರಸ್ಕರಿಸಿದರೂ, ಯುರೋಪಿಯನ್ ನ್ಯಾಟೋ ಸದಸ್ಯರು ರಕ್ಷಣಾ ವೆಚ್ಚವನ್ನು ಹೆಚ್ಚಿಸಬೇಕು ಎಂಬ ಅಮೆರಿಕದ ದೀರ್ಘಕಾಲದ ವಾದವನ್ನು ಪಿಸ್ಟೋರಿಯಸ್ ಒಪ್ಪಿಕೊಂಡರು. ಹಾರ್ಮುಜ್ ಜಲಸಂಧಿಯಲ್ಲಿ ಯುಎಸ್ ನೇತೃತ್ವದ ಕಾರ್ಯಾಚರಣೆಗಳಲ್ಲಿ ಜರ್ಮನಿ ಭಾಗವಹಿಸುವುದಿಲ್ಲ ಎಂದು ಸೂಚಿಸಿದ ನಂತರ ಇತ್ತೀಚಿನ ತಿಂಗಳುಗಳಲ್ಲಿ ಬರ್ಲಿನ್ ಮತ್ತು ವಾಷಿಂಗ್ಟನ್ ನಡುವಿನ ಸಂಬಂಧಗಳು ಹೆಚ್ಚು ಹದಗೆಟ್ಟಿವೆ. ಭಿನ್ನಾಭಿಪ್ರಾಯದ ನಂತರ, ಪೆಂಟಗನ್ ಮೇ ತಿಂಗಳಲ್ಲಿ ಮುಂದಿನ ಆರರಿಂದ ಹನ್ನೆರಡು ತಿಂಗಳುಗಳಲ್ಲಿ ಜರ್ಮನಿಯಿಂದ ಸುಮಾರು 5,000 ಸೈನಿಕರನ್ನು ಹಿಂತೆಗೆದುಕೊಳ್ಳುವ ಯೋಜನೆಯನ್ನು ಪ್ರಕಟಿಸಿತು.

# ಬಾಂಗ್ಲಾದೇಶದಲ್ಲಿ 24 ಗಂಟೆಯಲ್ಲಿ ದಡಾರದಂತಹ ರೋಗಲಕ್ಷಣಗಳಿಂದ ಐವರು ನಾಗರಿಕರ ಸಾವು


**ಢಾಕಾ, ಜು.2:** ಗುರುವಾರ 24 ಗಂಟೆಗಳ ಒಳಗೆ ದಡಾರದಂತಹ ರೋಗಲಕ್ಷಣಗಳಿಂದ ಇನ್ನೂ ಐದು ಜನರು ಸಾವನ್ನಪ್ಪಿದ್ದಾರೆ, ಈ ವರ್ಷ ಬಾಂಗ್ಲಾದೇಶದ ಒಟ್ಟು ದೃಢಪಡಿಸಿದ ಮತ್ತು ಶಂಕಿತ ದಡಾರ ಸಂಬಂಧಿತ ಸಾವುಗಳನ್ನು 724ಕ್ಕೆ ಏರಿಸಲಾಗಿದೆ ಎಂದು ಆರೋಗ್ಯ ಸೇವೆಗಳ ನಿರ್ದೇಶನಾಲಯ ತಿಳಿಸಿದೆ.

ಇತ್ತೀಚಿನ ಸಾವುಗಳನ್ನು ಶಂಕಿತ ದಡಾರ ಸಾವುಗಳು ಎಂದು ವರ್ಗೀಕರಿಸಲಾಗಿದೆ, ದೇಶಾದ್ಯಂತ ಶಂಕಿತ ಸಾವುಗಳ ಸಂಖ್ಯೆಯನ್ನು 631ಕ್ಕೆ ತಲುಪಿದೆ. ಪ್ರಯೋಗಾಲಯ-ದಡಾರ ಸಾವುಗಳ ಸಂಖ್ಯೆ 93 ಕ್ಕೆ ಬದಲಾಗದೆ ಉಳಿದಿದೆ. ವರದಿ ಮಾಡುವ ಅವಧಿಯಲ್ಲಿ ಆರೋಗ್ಯ ಅಧಿಕಾರಿಗಳು 965 ಹೊಸ ಶಂಕಿತ ದಡಾರ ಪ್ರಕರಣಗಳನ್ನು ದಾಖಲಿಸಿದ್ದಾರೆ, ಇದು ದೇಶಾದ್ಯಂತ ಒಟ್ಟು 102,993 ಕ್ಕೆ ತಲುಪಿದೆ. ಅದೇ ಸಮಯದಲ್ಲಿ, 154 ಹೊಸ ಪ್ರಯೋಗಾಲಯ-ದೃಢೀಕರಿಸಿದ ಸೋಂಕುಗಳು ವರದಿಯಾಗಿವೆ, ಇದು ಒಟ್ಟು ದೃಢಪಡಿಸಿದ ದಡಾರ ಪ್ರಕರಣಗಳ ಸಂಖ್ಯೆಯನ್ನು 12,286 ಕ್ಕೆ ತಂದಿದೆ. ಮಾರ್ಚ್ 15 ರಿಂದ, ದೇಶಾದ್ಯಂತ ಒಟ್ಟು 86,411 ಶಂಕಿತ ದಡಾರ ರೋಗಿಗಳನ್ನು ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ. ಅವರಲ್ಲಿ 82,759 ಜನರು ಚೇತರಿಸಿಕೊಂಡಿದ್ದಾರೆ ಎಂದು DGHS ಡೇಟಾ ತಿಳಿಸಿದೆ. ಆರಂಭದಲ್ಲಿ ರೋಗದಿಂದ ಚೇತರಿಸಿಕೊಂಡ ಆದರೆ ನಂತರ ದ್ವಿತೀಯಕ ಕಾಯಿಲೆಗಳೊಂದಿಗೆ ಆಸ್ಪತ್ರೆಗೆ ಮರಳಿದ ಮಕ್ಕಳಲ್ಲಿ ದಡಾರ ನಂತರದ ತೊಡಕುಗಳ ಸಂಖ್ಯೆ ಹೆಚ್ಚುತ್ತಿದೆ ಎಂದು ವೈದ್ಯರು ವರದಿ ಮಾಡಿದ್ದಾರೆ. ದಡಾರದ ನಂತರದ ತೊಡಕುಗಳ ಕುರಿತು ಯಾವುದೇ ಅಧಿಕೃತ ಅಂಕಿಅಂಶಗಳು ಪ್ರಸ್ತುತ ಲಭ್ಯವಿಲ್ಲದಿದ್ದರೂ, ಸಾರ್ವಜನಿಕ ಆಸ್ಪತ್ರೆಗಳು ಮತ್ತು ಖಾಸಗಿ ಚಿಕಿತ್ಸಾಲಯಗಳಲ್ಲಿ ಪ್ರಕರಣಗಳು ಹೆಚ್ಚುತ್ತಿವೆ ಎಂದು ವೈದ್ಯರು ಹೇಳುತ್ತಾರೆ.

# 86ನೇ ನಿಮಿಷದಲ್ಲಿ ಬೆಲ್ಜಿಯಂ ಮೂರು ಗೋಲು: ಸೆನೆಗಲ್‌ಗೆ ಸೋಲು

**ಸಿಯಾಟಲ್, ಜು.2:** ಬೆಲ್ಜಿಯಂ ಫಿಫಾ ವಿಶ್ವಕಪ್ ಇತಿಹಾಸದಲ್ಲಿ ಶ್ರೇಷ್ಠ ಪುನರಾಗಮನಗಳಲ್ಲಿ ಒಂದನ್ನು ಬರೆದಿದೆ, 86ನೇ ನಿಮಿಷದ ನಂತರ ಮೂರು ಬಾರಿ ಗೋಲು ಗಳಿಸಿತು, ದಾಖಲೆಯ 125ನೇ ನಿಮಿಷದ ಪೆನಾಲ್ಟಿ ಸೇರಿದಂತೆ ಹೆಚ್ಚುವರಿ ಸಮಯದ ನಂತರ ಸೆನೆಗಲ್ ಅನ್ನು 3-2 ಗೋಲುಗಳಿಂದ ಸೋಲಿಸಿ 16 ನೇ ಸುತ್ತಿಗೆ ಪ್ರವೇಶಿಸಿತು.

ಗುರುವಾರ IST ಆರಂಭದಲ್ಲಿ ಲುಮೆನ್ ಫೀಲ್ಡ್‌ನಲ್ಲಿ ನಡೆದ ಫಿಫಾ ವಿಶ್ವಕಪ್‌ನ 32 ನೇ ಸುತ್ತಿನ ಹಣಾಹಣಿಯಲ್ಲಿ ಸೆನೆಗಲ್ ತಂಡವನ್ನು ಸೋಲಿಸಿ ಸೆನೆಗಲ್ ಪ್ರಸಿದ್ಧ ಗೆಲುವನ್ನು ಸಾಧಿಸುವ ಗುರಿಯನ್ನು ಹೊಂದಿತ್ತು. ಹಬೀಬ್ ಡಯಾರಾ 25 ನೇ ನಿಮಿಷದಲ್ಲಿ ಗೋಲು ಗಳಿಸುವ ಮೂಲಕ ಬೆಲ್ಜಿಯಂ ಅನ್ನು ಆಕ್ರಮಣಕಾರಿಯಾಗಿ ಸೋಲಿಸಿದರು. 51 ನೇ ನಿಮಿಷದಲ್ಲಿ ಇಸ್ಮಾಯಿಲಾ ಸರ್ ಕ್ಲಿನಿಕಲ್ ಆಗಿ ಮುನ್ನಡೆ ಸಾಧಿಸಿದಾಗ ಆಫ್ರಿಕನ್ ತಂಡವು ಪಂದ್ಯದ ಮೇಲೆ ತನ್ನ ಹಿಡಿತವನ್ನು ಬಿಗಿಗೊಳಿಸಿತು, ಬೆಲ್ಜಿಯಂ 2-0 ಅಂತರದಿಂದ ಆರಂಭಿಕ ನಿರ್ಗಮನವನ್ನು ನಿರೀಕ್ಷಿಸುತ್ತಿತ್ತು. ಪಂದ್ಯದ ಬಹುಪಾಲು 2-0 ಅಂತರದಿಂದ ಹಿಂದುಳಿದ ನಂತರ ಆಘಾತಕಾರಿ ಹೊರಗುಳಿಯುವಿಕೆಯ ಅಂಚಿನಲ್ಲಿ, ಬೆಲ್ಜಿಯಂ



ಪಂದ್ಯಾವಳಿ ಕಂಡ ಅತ್ಯಂತ ಸ್ಮರಣೀಯ ನಾಕೌಟ್ ಗೆಲುವುಗಳನ್ನು ಗಳಿಸಿತು. ಬದಲಿ ಆಟಗಾರ ರೊಮೆಲು ಲುಕಾಕು 86ನೇ ನಿಮಿಷದಲ್ಲಿ ಗೋಲು ಗಳಿಸುವ ಮೂಲಕ ತಂಡಕ್ಕೆ ಮರಳಿದರು. ನಂತರ ನಾಯಕ ಯೂರಿ ಟೈಲೆಮನ್ಸ್ ಮೂರು ನಿಮಿಷಗಳ ನಂತರ ಹೆಡ್ ಮಾಡಿ ನಾಟಕೀಯ ಸಮಬಲ ಸಾಧಿಸಿದರು.

ಹೆಚ್ಚುವರಿ ಸಮಯದ ಎರಡನೇ ಅವಧಿಯಲ್ಲಿ, ಟೈಲೆಮನ್ಸ್ ಸಂಯಮದಿಂದ ಉಳಿದು ಗೋಲ್ಕೀಪರ್ ಮೋರಿ ಡಯಾವ್ ಅವರನ್ನು ತಪ್ಪು ದಾರಿಗೆ ಕಳುಹಿಸಿದರು, 125 ನೇ ನಿಮಿಷದಲ್ಲಿ ಪೆನಾಲ್ಟಿಯನ್ನು ಮೇಲಿನ ಬಲ ಮೂಲೆಯಲ್ಲಿ ಹೂತು ಅಸಾಧಾರಣ ತಿರುವು ಪಡೆದರು. ಅಧಿಕೃತವಾಗಿ 124 ನಿಮಿಷಗಳು ಮತ್ತು 44 ಸೆಕೆಂಡುಗಳಲ್ಲಿ ನಿಗದಿಪಡಿಸಲಾದ ಗೋಲು, ವಿಶ್ವಕಪ್ ಇತಿಹಾಸದಲ್ಲಿ ಇತ್ತೀಚಿನ ಪಂದ್ಯ-ವಿಜೇತ ಸ್ಟ್ರೈಕ್ ಆಯಿತು. ಬೆಲ್ಜಿಯಂನ ನಾಟಕೀಯ ಗೆಲುವು ಅವರನ್ನು 16 ನೇ ಸುತ್ತಿಗೆ ಕಳುಹಿಸುತ್ತದೆ, ಅಲ್ಲಿ ಅವರು ಅಮೆರಿಕ ಅಥವಾ ಬೋಸ್ನಿಯಾ-ಹರ್ಜೆಗೋವಿನಾವನ್ನು ಎದುರಿಸಲು ಸಿಯಾಟಲ್‌ಗೆ ಹಿಂತಿರುಗುತ್ತಾರೆ. ಸೆನೆಗಲ್‌ಗೆ , ಇದು ಅತ್ಯುತ್ತಮ ಪ್ರದರ್ಶನಕ್ಕೆ ಹೃದಯವಿದ್ರಾವಕ ಅಂತ್ಯವಾಗಿತ್ತು. 80 ನಿಮಿಷಗಳಿಗಿಂತ ಹೆಚ್ಚು ಕಾಲ ಸ್ಪರ್ಧೆಯನ್ನು ನಿಯಂತ್ರಿಸಿದ ಮತ್ತು ಪಂದ್ಯ-ವಿಜೇತ ಎರಡು-ಗೋಲುಗಳ ಕುಶನ್‌ನಂತೆ ಕಾಣುವಂತೆ ನಿರ್ಮಿಸಿದ್ದ ಅವರು, ಬೆಲ್ಜಿಯಂ ಫುಟ್‌ಬಾಲ್ ಅತಿದೊಡ್ಡ ವೇದಿಕೆಯಲ್ಲಿ ಇದುವರೆಗೆ ಕಂಡ ಶ್ರೇಷ್ಠ ತಪ್ಪಿಸಿಕೊಳ್ಳುವ ಕ್ರಿಯೆಗಳಲ್ಲಿ ಒಂದನ್ನು ಬರೆಯಲು ಮರೆಯಲಾಗದ ತಡವಾದ ಏರಿಕೆಯನ್ನು ಸಾಧಿಸಿದಾಗ ಅವರು ಹಿನ್ನಡೆ ಅನುಬವಿಸಿದರು.